VOLUME: 16 | 10 JUNE 2026 | ಬುಧವಾರ | RS: 2 | PAGE: 06 ISSUE: 120 ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ನಿರ್ದೇಶಕ ಬುಚಿ ಬಾಬು ಅವರ ಕ್ರೀಡಾ ಆಕ್ಷನ್ ನಾಟಕ 'ಪೆದ್ದಿ'ಯಲ್ಲಿ ಜಾಹ್ನವಿ ಕಪೂರ್ ಅವರ ಉಡುಪು ಈಗ ತೀವ್ರ ಚರ್ಚೆಗೆ ಕಾರಣವಾಗಿದೆ. ಕನ್ನಡ, ತೆಲುಗು ಮತ್ತು ತಮಿಳು ಚಿತ್ರಗಳಲ್ಲಿ ನಟಿಸಿರುವ ನಟಿ ಆಶಿಕಾ ರಂಗನಾಥ್, ಜಾಹ್ನವಿ ಅವರ ಬೆಂಬಲಕ್ಕೆ ನಿಂತಿದ್ದು ನೀವು ಚಿತ್ರತಂಡವನ್ನು ಪ್ರಶ್ನಿಸಬೇಕು ಎಂದು ಒತ್ತಾಯಿಸಿದ್ದಾರೆ.



BHARATHA SARATHI
KANNADA DAILY NEWS PAPER
CALL 9740160669
# ಭಾರತ ಸಾರಥಿ
RNI KARKAN2011/44806
prabhavaa.com
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ
ಸಂಪಾದಕ
ಗಂಡಸಿ ಸದಾನಂದಸ್ವಾಮಿ





ಮೈನಸ್ 4 ಡಿಗ್ರಿ ಸೆಲ್ಸಿಯಸ್ ತಾಪಮಾನದಲ್ಲೂ ಎಂಜಿನಿಯರ್‌ಗಳು ಮತ್ತು ಕಾರ್ಮಿಕರು ಹಗಲಿರುಳು ಶ್ರಮಿಸಿ ಈ ಸಾಧನೆ ಮಾಡಿದ್ದಾರೆ. ಯೋಜನೆಯಲ್ಲಿ ಶೇ.80ರಷ್ಟು ಸ್ಥಳೀಯರು ಕೆಲಸ ನಿರ್ವಹಿಸಿರುವುದು ವಿಶೇಷ" ಎಂದು ಹರ್ಷ ವ್ಯಕ್ತಪಡಿಸಿದರು. ಹಲವು ಸಂಕೀರ್ಣ ಪರಿಸ್ಥಿತಿಯಲ್ಲೂ ನಿರ್ದಿಷ್ಟ ಅವಧಿಯಲ್ಲಿ ಕಾಮಗಾರಿ ಪೂರ್ಣಗೊಳಿಸಿರುವ ಎಂಇಐಎಲ್ ಕಾರ್ಯಕಾರಿ ನಿರ್ದೇಶಕ ಕೃಷ್ಣರೆಡ್ಡಿ ಮತ್ತು ಯೋಜನಾ ವ್ಯವಸ್ಥಾಪಕ ಹರ್‌ಪಾಲ್ ಸಿಂಗ್ ಅವರ ಕಾರ್ಯವೈಖರಿಯನ್ನು ಶ್ಲಾಘಿಸಿ, ಆರಂಭದಲ್ಲಿ ಈ ಯೋಜನೆಗೆ 12 ಸಾವಿರ ಕೋಟಿ ರೂ. ವ್ಯಯಿಸುವ ಡಿಪಿಆರ್ ಸಿದ್ಧಪಡಿಸಲಾಗಿತ್ತು. ನಾಲ್ಕು ಬಾರಿ ಟೆಂಡರ್ ಆಹ್ವಾನಿಸಿದರೂ ಕಾರ್ಯಸಾಧುವಾಗಿರಲಿಲ್ಲ, ನಂತರ ಎಂಇಐಎಲ್ ಕಡಿಮೆ ಮೊತ್ತಕ್ಕೆ ಕಾಮಗಾರಿ ಕೈಗೊಂಡ ಪರಿಣಾಮ ಸರ್ಕಾರವು ಅಂದಾಜು 4 ಸಾವಿರ ಕೋಟಿ ರೂ.ಗಳನ್ನು ಉಳಿಸುವಂತಾಯಿತು

# ವಿಶ್ವದ ಅತೀ ದೊಡ್ಡ ಜೋಜಿಲಾ ಟನಲ್ ಬ್ರೇಕ್‌ಥ್ರೂ ಯಶಸ್ವಿ

ಶ್ರೀನಗರ: ಜಮ್ಮು-ಕಾಶ್ಮೀರ ಮತ್ತು ಲಡಾಖ್ ನಡುವಿನ ಸಂಪರ್ಕ ವ್ಯವಸ್ಥೆಯ ನವ ಅಧ್ಯಾಯ ಬರೆಯುವ ಜೋಜಿಲಾ ರಸ್ತೆ ಸುರಂಗ ಯೋಜನೆ ಮಹತ್ವದ ಮೈಲಿಗಲ್ಲು ತಲುಪಿದೆ. ಮೇಘಾ ಎಂಜಿನಿಯರಿಂಗ್ ಅಂಡ್ ಇನ್‌ಫ್ರಾಸ್ಟ್ರಕ್ಚರ್ ಲಿಮಿಟೆಡ್ (ಎಂಇಐಎಲ್) ಸಂಸ್ಥೆಯು 13.153 ಕಿಲೋ ಮೀಟರ್ ಉದ್ದದ ಜೋಜಿಲಾ ಸುರಂಗದ ಅಂತಿಮ ಭೇಧ (ಬ್ರೇಕ್ ಥ್ರೂ) ಸಾಧಿಸುವ ಮೂಲಕ ವಿಶ್ವದ ಅತಿ ಎತ್ತರದಲ್ಲಿ ನಿರ್ಮಾಣವಾಗುತ್ತಿರುವ ಅತಿ ಉದ್ದದ ಏಕ-ಕೊಳವೆ ದ್ವಿಮುಖ ರಸ್ತೆ ಸುರಂಗದ ಉತ್ಖನನ ಕಾರ್ಯವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ್ದು ಇದಕ್ಕೆ ಸಚಿವ ಗಡ್ಕರಿ ಹರ್ಷ ವ್ಯಕ್ತಪಡಿಸಿದ್ದಾರೆ.

ಈ ಸಾಧನೆ ಕುರಿತು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವರಾದ ನಿತಿನ್ ಗಡ್ಕರಿ ಪ್ರತಿಕ್ರಿಯಿಸಿ, "ಭಾರತದ ಮೂಲಸೌಕರ್ಯ ಇತಿಹಾಸದಲ್ಲಿ ಇದು ಐತಿಹಾಸಿಕ ದಿನವಾಗಿದೆ. ಜೋಜಿಲಾ ಸುರಂಗ ಪೂರ್ಣಗೊಂಡ ಬಳಿಕ ವಿಶ್ವದಾಖಲೆ ನಿರ್ಮಿಸಲಿದೆ. ಇದು ಲಡಾಖ್ ಮತ್ತು ಜಮ್ಮು-ಕಾಶ್ಮೀರದ ಜನರಿಗೆ ಜೀವನಾಡಿಯಾಗಲಿದೆ. ಮೈನಸ್ 4 ಡಿಗ್ರಿ ಸೆಲ್ಸಿಯಸ್ ತಾಪಮಾನದಲ್ಲೂ ಎಂಜಿನಿಯರ್‌ಗಳು ಮತ್ತು ಕಾರ್ಮಿಕರು ಹಗಲಿರುಳು ಶ್ರಮಿಸಿ ಈ ಸಾಧನೆ ಮಾಡಿದ್ದಾರೆ. ಯೋಜನೆಯಲ್ಲಿ ಶೇ.80ರಷ್ಟು ಸ್ಥಳೀಯರು ಕೆಲಸ ನಿರ್ವಹಿಸಿರುವುದು ವಿಶೇಷ" ಎಂದು ಹರ್ಷ ವ್ಯಕ್ತಪಡಿಸಿದರು.

ಹಲವು ಸಂಕೀರ್ಣ ಪರಿಸ್ಥಿತಿಯಲ್ಲೂ ನಿರ್ದಿಷ್ಟ ಅವಧಿಯಲ್ಲಿ ಕಾಮಗಾರಿ



ಪೂರೈಸಿರುವ ಎಂಇಐಎಲ್ ಕಾರ್ಯಕಾರಿ ನಿರ್ದೇಶಕ ಕೃಷ್ಣರೆಡ್ಡಿ ಮತ್ತು ಯೋಜನಾ ವ್ಯವಸ್ಥಾಪಕ ಹರ್‌ಪಾಲ್ ಸಿಂಗ್ ಅವರ ಕಾರ್ಯವೈಖರಿಯನ್ನು ಶ್ಲಾಘಿಸಿ, ಆರಂಭದಲ್ಲಿ ಈ ಯೋಜನೆಗೆ 12 ಸಾವಿರ ಕೋಟಿ ರೂ. ವ್ಯಯಿಸುವ ಡಿಪಿಆರ್ ಸಿದ್ದಪಡಿಸಲಾಗಿತ್ತು. ನಾಲ್ಕು ಬಾರಿ ಟೆಂಡರ್ ಆಹ್ವಾನಿಸಿದರೂ ಕಾರ್ಯಸಾಧುವಾಗಿರಲಿಲ್ಲ, ನಂತರ ಎಂಇಐಎಲ್ ಕಡಿಮೆ ಮೊತ್ತಕ್ಕೆ ಕಾಮಗಾರಿ ಕೈಗೊಂಡ ಪರಿಣಾಮ ಸರ್ಕಾರವು ಅಂದಾಜು 4 ಸಾವಿರ ಕೋಟಿ ರೂ.ಗಳನ್ನು ಉಳಿಸುವಂತಾಯಿತು ಎಂದರು.

ಜಮ್ಮು-ಕಾಶ್ಮೀರ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಮಾತನಾಡಿ, "ಲಡಾಖ್ ಮತ್ತು ಜಮ್ಮು-ಕಾಶ್ಮೀರ ಜನರ ಬಹುಕಾಲದ ಕನಸು ನನಸಾಗಿದೆ. ಉತ್ತಮ ಸಾರಿಗೆ, ಪ್ರವಾಸೋದ್ಯಮ ಮತ್ತು ಹೊಸ ಆರ್ಥಿಕ ಅವಕಾಶಗಳ ಮೂಲಕ ಈ ಸುರಂಗ ಪ್ರದೇಶದ ಅಭಿವೃದ್ಧಿಗೆ ಹೊಸ ದಿಕ್ಕು ನೀಡಲಿದೆ" ಎಂದರು.

ಜಮ್ಮು-ಕಾಶ್ಮೀರದ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ, "ಲಡಾಖ್‌ಗೆ ವರ್ಷಪೂರ್ತಿ ಸಂಪರ್ಕ ಕಲ್ಪಿಸುವ ಕನಸು ಇದೀಗ ನನಸಾಗುತ್ತಿದೆ. ಸವಾಲಿನ ಪರಿಸ್ಥಿತಿಗಳಲ್ಲಿಯೂ ಕೆಲಸ ಮಾಡಿದ ಎಂಜಿನಿಯರ್‌ಗಳು ಮತ್ತು ಕಾರ್ಮಿಕರ ಶ್ರಮ ಶ್ಲಾಘನೀಯ" ಎಂದು ಹೇಳಿದರು.

ಯೋಜನೆಯು 1 ಕೋಟಿ ಸುರಕ್ಷಿತ ಮಾನವ-ಗಂಟೆಗಳ ಸಾಧನೆಯನ್ನು ಕೂಡ ದಾಖಲಿಸಿದ್ದು, ಸುರಕ್ಷತೆ ಮತ್ತು ಗುಣಮಟ್ಟದ ಮೇಲಿನ ಎಂಇಐಎಲ್‌ನ ಬದ್ಧತೆಯನ್ನು ಪ್ರತಿಬಿಂಬಿಸಿದೆ. ಇದೀಗ ಉತ್ಖನನ ಕಾರ್ಯ ಪೂರ್ಣಗೊಂಡಿರುವ ಹಿನ್ನೆಲೆಯಲ್ಲಿ ಸುರಂಗದ ಒಳಭಾಗದ ಲೈನಿಂಗ್, ವಿದ್ಯುತ್-ಯಾಂತ್ರಿಕ ವ್ಯವಸ್ಥೆಗಳು ಹಾಗೂ ಇತರೆ ಅಂತಿಮ ಕಾಮಗಾರಿಗಳು ಮುಂದಿನ ಹಂತದಲ್ಲಿ ನಡೆಯಲಿವೆ.

ಜೋಜಿಲಾ ಸುರಂಗ ಯೋಜನೆಯು ಭಾರತದ ಉನ್ನತ ತಾಂತ್ರಿಕ ಸಾಮರ್ಥ್ಯ ಮತ್ತು ಹಿಮಾಲಯ ಪ್ರದೇಶದಲ್ಲಿ ಸಂಕೀರ್ಣ ಸುರಂಗ ನಿರ್ಮಾಣ ಕಾರ್ಯಗಳನ್ನು ಯಶಸ್ವಿಯಾಗಿ ನಿರ್ವಹಿಸುವ ಸಾಮರ್ಥ್ಯದ ಪ್ರತೀಕವಾಗಿದ್ದು, ಕಾಶ್ಮೀರ ಮತ್ತು ಲಡಾಖ್ ನಡುವಿನ ನಿರಂತರ ಸಂಪರ್ಕದ ಕನಸನ್ನು ನನಸಾಗಿಸುವತ್ತ ಮಹತ್ವದ ಹೆಜ್ಜೆಯಾಗಿದೆ.

ರಾಷ್ಟ್ರೀಯ ಹೆದ್ದಾರಿ ಮತ್ತು ಮೂಲಸೌಕರ್ಯ ಅಭಿವೃದ್ಧಿ ನಿಗಮ (ಎನ್‌ಎಚ್‌ಐಡಿಸಿಎಲ್) ಪರವಾಗಿ ಎಂಇಐಎಲ್ ಈ ಮಹತ್ವಾಕಾಂಕ್ಷಿ ಯೋಜನೆಯನ್ನು ಕೈಗೊಂಡಿದ್ದು, ಬಾಲ್ತಾಲ್ ಮತ್ತು ಮೀನಮಾರ್ಗ್ ನಡುವಿನ ಹಿಮಾಲಯದ ತಂತ್ರಾತ್ಮಕ ಮಾರ್ಗದಲ್ಲಿ ವರ್ಷ ಪೂರ್ತಿ ಸಂಪರ್ಕ ಕಲ್ಪಿಸುವ ಉದ್ದೇಶದ ಕನಸನ್ನು ಇದು ನನಸಾಗಿಸಲಿದೆ.

ಸಮುದ್ರ ಮಟ್ಟದಿಂದ ಸುಮಾರು 11,578 ಅಡಿ ಎತ್ತರದಲ್ಲಿರುವ ಜೋಜಿಲಾ ಪ್ರದೇಶದಲ್ಲಿ ನಿರ್ಮಾಣವಾಗುತ್ತಿರುವ ಈ




ಸುರಂಗವು ಅತ್ಯಂತ ಕಠಿಣ ಭೌಗೋಳಿಕ ಹಾಗೂ ಹವಾಮಾನ ಪರಿಸ್ಥಿತಿಗಳ ನಡುವೆ ಸಾಕಾರಗೊಳ್ಳುತ್ತಿದೆ. ಯೋಜನೆ ಪೂರ್ಣಗೊಂಡ ಬಳಿಕ ಶ್ರೀನಗರ-ಕಾರ್ಗಿಲ್-ಲೇಹ್ ರಾಷ್ಟ್ರೀಯ ಹೆದ್ದಾರಿಯಲ್ಲಿ ವರ್ಷಪೂರ್ತಿ ಸಂಚಾರ ಸಾಧ್ಯವಾಗಲಿದ್ದು, ಭಾರೀ ಹಿಮಪಾತ ಹಾಗೂ ಹಿಮಕುಸಿತದಿಂದ ಉಂಟಾಗುತ್ತಿದ್ದ ದೀರ್ಘಕಾಲದ ರಸ್ತೆ ಬಂದ್ ಸಮಸ್ಯೆಗೆ ಶಾಶ್ವತ ಪರಿಹಾರ ದೊರೆಯಲಿದೆ.

ಬಾಲ್ತಾಲ್‌ನ ಪಶ್ಚಿಮ ಪ್ರವೇಶ ದ್ವಾರದಿಂದ ಮೀನಮಾರ್ಗ್ನ ಪೂರ್ವ ಪ್ರವೇಶ ದ್ವಾರದವರೆಗೆ ನಿರ್ಮಾಣವಾಗುತ್ತಿರುವ ಮುಖ್ಯ ಸುರಂಗದ ಉತ್ಖನನವನ್ನು ಎರಡೂ ತುದಿಗಳಿಂದ ಏಕಕಾಲದಲ್ಲಿ ನಡೆಸಲಾಗಿತ್ತು. ಇದೀಗ ಅಂತಿಮ ಭೇದ (ಬ್ರೇಕ್‌ಥ್ರೂ) ಸಾಧನೆಗೆ ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವರಾದ ನಿತಿನ್ ಗಡ್ಕರಿ ಸಾಕ್ಷಿಯಾದರು. ಇದರಿಂದ ಅತ್ಯಂತ ಸವಾಲಿನ ಉತ್ಖನನ ಹಂತ ಯಶಸ್ವಿಯಾಗಿ ಪೂರ್ಣಗೊಂಡಿದೆ.

ಯೋಜನೆಯಲ್ಲಿ ನ್ಯೂ ಆಸ್ಟ್ರಿಯನ್ ಟನಲಿಂಗ್ ವಿಧಾನ (ಎನ್‌ಎಟಿಎಂ) ಅಳವಡಿಸಲಾಗಿದ್ದು, ಬದಲಾಗುವ ಶಿಲಾಸ್ತರಗಳು ಮತ್ತು ಭೌಗೋಳಿಕ ಅನಿಶ್ಚಿತತೆಗಳಿಗೆ ಹೊಂದಿಕೊಳ್ಳುವ ಈ ತಂತ್ರಜ್ಞಾನ ಸುರಕ್ಷಿತ ಹಾಗೂ ಸ್ಥಿರ ಸುರಂಗ ನಿರ್ಮಾಣಕ್ಕೆ ನೆರವಾಗಿದೆ. ನಿರಂತರ ಮೇಲ್ವಿಚಾರಣೆ, ತಕ್ಷಣದ ಬೆಂಬಲ ವ್ಯವಸ್ಥೆಗಳು ಮತ್ತು ವೈಜ್ಞಾನಿಕ ಮೌಲ್ಯಮಾಪನಗಳ ಮೂಲಕ ಸಂಕೀರ್ಣ ಹಿಮಾಲಯದ ಭೂಪ್ರದೇಶದಲ್ಲಿಯೂ ಕಾಮಗಾರಿ ಯಶಸ್ವಿಯಾಗಿ ಮುಂದುವರಿಯಿತು.

ಮುಖ್ಯ ಸುರಂಗದ ಜೊತೆಗೆ ಸಂಪರ್ಕ ರಸ್ತೆಗಳು, ಸೇತುವೆಗಳು, ಹಿಮರಕ್ಷಣೆ ವ್ಯವಸ್ಥೆಗಳು, ಕಟ್-ಅಂಡ್-ಕವರ್ ವಿಭಾಗಗಳು ಹಾಗೂ ಇತರೆ ಸುರಂಗ ಮೂಲಸೌಕರ್ಯಗಳ ನಿರ್ಮಾಣವೂ ಯೋಜನೆಯ ಭಾಗವಾಗಿದೆ. ಈ ಯೋಜನೆಯಿಂದ ಪ್ರವಾಸೋದ್ಯಮ, ವ್ಯಾಪಾರ, ಅಗತ್ಯ ಸೇವೆಗಳು ಮತ್ತು ಗಡಿ ಪ್ರದೇಶಗಳ ಸಂಪರ್ಕ ವ್ಯವಸ್ಥೆಗೆ ಮಹತ್ತರ ಉತ್ತೇಜನ ಸಿಗಲಿದೆ.

# ಪಿಒಕೆಯಲ್ಲಿ ನರಮೇಧ

ನವದೆಹಲಿ: ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿ ಆರ್ಥಿಕ ಮತ್ತು ರಾಜಕೀಯ ಕುಂದುಕೊರತೆಗಳ ವಿರುದ್ಧ ಪ್ರತಿಭಟನೆಯ ನೇತೃತ್ವ ವಹಿಸಿದ್ದ ಪ್ರಮುಖ ನಾಗರಿಕ ಸಮಾಜದ ಒಕ್ಕೂಟವಾದ 'ಜಾಯಿಂಟ್ ಅವಮಿ ಆಕ್ಷನ್ ಕಮಿಟಿ'ಯನ್ನು ಅಧಿಕಾರಿಗಳು ನಿಷೇಧಿಸಿದ ಬೆನ್ನಲ್ಲೇ ಭೀಕರ ಹಿಂಸಾಚಾರ ಭುಗಿಲೆದ್ದಿದೆ.

ಪ್ರತಿಭಟನಾಕಾರರು ಮತ್ತು ಭದ್ರತಾ ಪಡೆಗಳ ನಡುವೆ ನಡೆದ ತೀವ್ರ ಘರ್ಷಣೆಯಲ್ಲಿ 30ಕ್ಕೂ ಹೆಚ್ಚು ಜನರು ಸಾವನ್ನಪ್ಪಿದ್ದಾರೆ ಮತ್ತು ಸುಮಾರು 200 ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ. ಈ ಹಿನ್ನೆಲೆಯಲ್ಲಿ ಭಾರತ ಪ್ರತಿಕ್ರಿಯೆ ನೀಡಿದ್ದು, ಈ ಘಟನೆಗೆ ಪಾಕಿಸ್ತಾನವೇ ನೇರ ಹೊಣೆ ಎಂದು ಆರೋಪಿಸಿದೆ. ಹಾಗೇ, ಪಿಒಕೆಯಲ್ಲಿ ಕಾಶ್ಮೀರಿಗಳ ಹತ್ಯೆಗೆ ತೀವ್ರ ಖಂಡನೆ ವ್ಯಕ್ತಪಡಿಸಿದೆ.

ಪಾಕಿಸ್ತಾನ ಮಾಡುತ್ತಿರುವ ದುಷ್ಕೃತ್ಯಗಳು ಮತ್ತು ಮಾನವ ಹಕ್ಕುಗಳ ಉಲ್ಲಂಘನೆಗಾಗಿ ಅಂತಾರಾಷ್ಟ್ರೀಯ ಸಮುದಾಯವು ಪಾಕಿಸ್ತಾನ ದೇಶವನ್ನು ಹೊಣೆಗಾರರನ್ನಾಗಿ ಮಾಡಲಿದೆ ಎಂದು ನಾವು ನಂಬುತ್ತೇವೆ ಎಂದು ಭಾರತ ಭರವಸೆ ವ್ಯಕ್ತಪಡಿಸಿದೆ. ಇಂದು ನಡೆದ ಪತ್ರಿಕಾಗೋಷ್ಠಿಯಲ್ಲಿ ವಿದೇಶಾಂಗ ವ್ಯವಹಾರಗಳ ಸಚಿವಾಲಯದ (ಒಇಂ) ವಕ್ತಾರ ರಣಧೀರ್ ಜೈಸ್ವಾಲ್ ಮಾತನಾಡಿ, "ಈ ಸಂದರ್ಭದಲ್ಲಿ ಪಾಕಿಸ್ತಾನದಿಂದ ವ್ಯವಸ್ಥಿತವಾಗಿ ಹರಡಲಾಗುತ್ತಿರುವ ಸುಳ್ಳು ಸುದ್ದಿ ಮತ್ತು ವೀಡಿಯೊಗಳ ಸರಣಿಯನ್ನು ನಾವು ಗಮನಿಸುತ್ತಿದ್ದೇವೆ. ಇದು ತನ್ನದೇ ಆದ ವೈಫಲ್ಯಗಳನ್ನು ಮುಚ್ಚಿಕೊಳ್ಳಲು ಮತ್ತು ತನ್ನ ಮಾನವ ಹಕ್ಕುಗಳ ಉಲ್ಲಂಘನೆಯಿಂದ ಜಗತ್ತಿನ ಗಮನವನ್ನು ಬೇರೆಡೆಗೆ ತಿರುಗಿಸಲು ಪಾಕಿಸ್ತಾನ ಮಾಡುತ್ತಿರುವ ಹತಾಶ ಪ್ರಯತ್ನವಾಗಿದೆ" ಎಂದು ಕಿಡಿಕಾರಿದ್ದಾರೆ.

ಪಿಒಕೆಯಲ್ಲಿ ನಡೆಯುತ್ತಿರುವ ಪೊಲೀಸ್ ದಬ್ಬಾಳಿಕೆಯ ಬಗ್ಗೆ ಮಾತನಾಡಿದ ರಣಧೀರ್ ಜೈಸ್ವಾಲ್, "ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿ ಭೀಕರ ಪೊಲೀಸ್ ದೌರ್ಜನ್ಯ ನಡೆಯುತ್ತಿರುವ ಬಗ್ಗೆ ವರದಿಗಳು ಬಂದಿವೆ. ಇದರಲ್ಲಿ ಹಲವಾರು ಜನರು ಸಾವನ್ನಪ್ಪಿದ್ದಾರೆ ಮತ್ತು ಅನೇಕರು ಗಾಯಗೊಂಡಿದ್ದಾರೆ. ಅಂತಾರಾಷ್ಟ್ರೀಯ ಸಮುದಾಯವು ಪಾಕಿಸ್ತಾನದ ದುಷ್ಕೃತ್ಯಗಳು ಮತ್ತು ದೌರ್ಜನ್ಯಗಳ ವಿರುದ್ಧ ಅದನ್ನು ಹೊಣೆಗಾರರನ್ನಾಗಿ ಮಾಡುತ್ತದೆ ಎಂದು ನಾವು ಭಾವಿಸುತ್ತೇವೆ" ಎಂದಿದ್ದಾರೆ. "ಪಾಕಿಸ್ತಾನ ಸರ್ಕಾರವು ರಾವಲಕೋಟ್‌ನಲ್ಲಿ ನಮ್ಮ ಜನರ ಮಾರಣಹೋಮವನ್ನು ಪ್ರಾರಂಭಿಸಿದೆ" ಎಂದು ಜೆಎಎಸಿ (ಎಂಂಅ) ನಾಯಕ ಶೌಕತ್ ನವಾಜ್ ಮಿರ್ ಎಕ್ಸ್ (ಟ್ವಿಟ್ಟರ್) ನಲ್ಲಿ ಬಿಡುಗಡೆ ಮಾಡಿದ ವೀಡಿಯೊ ಸಂದೇಶದಲ್ಲಿ ಆರೋಪಿಸಿದ್ದಾರೆ. ಇಂದು ಸಂಪೂರ್ಣ ಲಾಕ್‌ಡೌನ್ ಯಶಸ್ವಿಗೊಳಿಸಲು ತಮ್ಮ ಗುಂಪು ಒಗ್ಗಟ್ಟಾಗಿರಲಿದೆ ಎಂದು ಅವರು ಪ್ರತಿಜ್ಞೆ ಮಾಡಿದ್ದರು. ರಾವಲಕೋಟ್‌ನಲ್ಲಿ ಪ್ರತಿಭಟನಾಕಾರರ ಮೇಲೆ ನಡೆದ ಭೀಕರ ದಮನಕಾಂಡದ ನಂತರವೂ ಉದ್ವಿಗ್ನತೆ ಮುಂದುವರಿದಿದ್ದು, ತನ್ನ ಮಾನವ ಹಕ್ಕುಗಳ ಉಲ್ಲಂಘನೆಯಿಂದ ಜಗತ್ತಿನ ಗಮನವನ್ನು ಬೇರೆಡೆಗೆ ತಿರುಗಿಸಲು ಪಾಕಿಸ್ತಾನವು ಸುಳ್ಳು ಸುದ್ದಿ ಮತ್ತು ತಪ್ಪು ಮಾಹಿತಿಗಳನ್ನು ಹರಡುತ್ತಿದೆ ಎಂದು ಭಾರತ ಇಂದು ಆರೋಪಿಸಿದೆ.

# ವಿಧಾನಸೌಧದಲ್ಲಿ ಆತ್ಮಹತ್ಯೆಗೆ ಯತ್ನಿಸಿದ ರೈತ!

ಬೆಂಗಳೂರು: ಚಿಕ್ಕಮಗಳೂರು ಜಿಲ್ಲೆಯ ರೈತನೊಬ್ಬ ಮಂಗಳವಾರ ಮಧ್ಯಾಹ್ನ ವಿಧಾನಸೌಧ ಆವರಣದಲ್ಲಿರುವ ಮರಕ್ಕೆ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಯತ್ನಿಸಿದ ಘಟನೆ ವರದಿಯಾಗಿದೆ.

ಪೊಲೀಸರ ಸಕಾಲಿಕ ಮಧ್ಯಪ್ರವೇಶದಿಂದ ರೈತನ ಜೀವ ಉಳಿದಿದೆ.

ಪೊಲೀಸರ ಪ್ರಕಾರ, ಚಿಕ್ಕಮಗಳೂರು ಜಿಲ್ಲೆಯ ಹಳಿಯೂರು ಗ್ರಾಮದ ವಿಶು ಕುಮಾರ್ ಎಂಬುವವರು ವಿಧಾನಸೌಧ ಆವರಣದಲ್ಲಿರುವ ಮರಕ್ಕೆ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಯತ್ನಿಸಿದ್ದಾರೆ.

ತಮ್ಮ ಭೂಮಿಯನ್ನು ಸ್ವಾಧೀನಪಡಿಸಿಕೊಂಡಿದ್ದಕ್ಕಾಗಿ ಪರಿಹಾರ ಸಿಕ್ಕಿಲ್ಲ ಎಂದು ಆರೋಪಿಸಿ ವಿಧಾನಸೌಧ ಆವರಣದಲ್ಲಿರುವ ಮರವನ್ನು ಕಡಿಯಲು ಈ ಹಿಂದೆ 2025ರಲ್ಲಿ ಪ್ರಯತ್ನಿಸಿದ್ದರು ಎಂದು ಮೂಲಗಳು ತಿಳಿಸಿವೆ.

ಮಂಗಳವಾರ, ಅವರು ಮತ್ತೊಮ್ಮೆ ಅದೇ ಮರದ ಬಳಿಗೆ ತಲುಪಿ ಹಸಿರು ಸ್ಕಾರ್ಫ್ ಬಳಸಿ ನೇಣು ಬಿಗಿದುಕೊಳ್ಳಲು ಪ್ರಯತ್ನಿಸಿದ್ದಾರೆ. ಅಲ್ಲಿ ನಿಯೋಜನೆಗೊಂಡಿದ್ದ ಪೊಲೀಸರು ಅವರ ಚಟುವಟಿಕೆಗಳನ್ನು ಗಮನಿಸಿದ ತಕ್ಷಣ, ಅವರನ್ನು ಪೊಲೀಸ್ ಠಾಣೆಗೆ ಕರೆದೊಯ್ದಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ವಿಶು ಕುಮಾರ್, ತಮ್ಮ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ. ಆದರೆ ಪರಿಹಾರವನ್ನು ಇನ್ನೂ ನೀಡಿಲ್ಲ ಎಂದು ಹೇಳಿದರು.



ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ವಿಧಾನಸಭೆ ಕ್ಷೇತ್ರದ ತಗ್ಗಹಳ್ಳಿ ಗ್ರಾಮದಲ್ಲಿ ಸಿಎಸ್‌ಆರ್ ನಿಧಿ ಅನುದಾನದಿಂದ ನೂತನವಾಗಿ ನಿರ್ಮಾಣಗೊಂಡಿರುವ ಶಾಲಾ ಕೊಠಡಿಗಳನ್ನು ಉದ್ಘಾಟಿಸಿದ ನಂತರ ಕೇಂದ್ರ ಸಚಿವರು ಮಾಧ್ಯಮಗಳ ಜೊತೆ ಮಾತನಾಡಿದರು.

# ಕೃಷ್ಣಬೈರೇಗೌಡ ದೆಹಲಿಗೆ

ಬೆಂಗಳೂರು: ಟ್ರಬಲ್ ಶೂಟರ್ ಎಂದೇ ಖ್ಯಾತಿ ಪಡೆದಿರುವ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರಿಗೆ ಖಾತೆ ಹಂಚಿಕೆಯ ಟ್ರಬಲ್ ಮುಂದುವರೆದಿದ್ದು, ಸಚಿವ ರಾಮಲಿಂಗಾರೆಡ್ಡಿ ಹಚ್ಚಿದ ಅಸಮಾಧಾನದ ಕಿಚ್ಚು ಈಗ ಕಾಡ್ಗಿಚ್ಚಾಗಿ ಬದಲಾಗೋ ಆತಂಕ ಎದುರಾಗಿದೆ. ಮೊದಲ ಹಂತದಲ್ಲಿ ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದ ಹಿರಿಯ ನಾಯಕ ರಾಮಲಿಂಗಾರೆಡ್ಡಿ ಅವರ ರಾಜೀನಾಮೆಯನ್ನು ಹಿಂತೆಗೆದುಕೊಳ್ಳುವಂತೆ ಮನವೊಲಿಸುವ ಮೂಲಕ ಕಾಂಗ್ರೆಸ್ ಹೈಕಮಾಂಡ್ ಒಂದು ಕಿಚ್ಚನ್ನು ನಂದಿಸುವಲ್ಲಿ ಯಶಸ್ವಿಯಾದ ಬೆನ್ನಲ್ಲೇ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರ ಅಸಮಾಧಾನ ಸ್ಫೋಟಗೊಂಡಿದೆ.

ತಾವು ಬೆಂಗಳೂರು ನಗರಾಭಿವೃದ್ಧಿ ಖಾತೆಯನ್ನು ನಿರ್ವಹಿಸಬೇಕೆಂದರೆ, ಬೆಂಗಳೂರು ನಗರದ ಪ್ರಮುಖ ಆರ್ಥಿಕ ಮತ್ತು ಆಡಳಿತಾತ್ಮಕ ಶಕ್ತಿ ಕೇಂದ್ರಗಳಾಗಿರುವ ಬಿಡಿಎ(ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ) ಮತ್ತು ಬಿಎಂಆರ್‌ಡಿಎ(ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ) ವ್ಯಾಪ್ತಿಗಳನ್ನೂ ಸಹ ತಮ್ಮ ಸುಪರ್ದಿಗೆ ನೀಡಬೇಕೆಂದು ಕೃಷ್ಣ ಬೈರೇಗೌಡ ಅವರು ಪಟ್ಟು ಹಿಡಿದಿದ್ದಾರೆ ಎನ್ನಲಾಗಿದೆ.ಮೂಲಗಳ ಪ್ರಕಾರ, :ಆಂ ಮತ್ತು :ಒಖಆಂ ಇಲ್ಲದ ಬೆಂಗಳೂರು ಅಭಿವೃದ್ಧಿ ಖಾತೆಗೆ ಹೆಚ್ಚಿನ ಮಹತ್ವವಿಲ್ಲ ಎಂದು ಕೃಷ್ಣ ಬೈರೇಗೌಡ ಅವರು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರ ಗಮನಕ್ಕೂ ತಂದಿದ್ದು, ಈ ಕುರಿತು ದೂರವಾಣಿ ಮೂಲಕ ಅವರೊಂದಿಗೆ ಮಾತನಾಡಿದ್ದಾರೆ ಎನ್ನಲಾಗಿದೆ. ಬಿಡಿಎ ಮತ್ತು ಬಿಎಂಆರ್‌ಡಿಎ ಪ್ರಾಧಿಕಾರಗಳನ್ನು ತನ್ನ ಖಾತೆಯ ವ್ಯಾಪ್ತಿಗೆ ಸೇರಿಸುವಂತೆ ಅವರು ಈಗಾಗಲೇ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಅವರ ಗಮನಕ್ಕೆ ತಂದಿದ್ದಾರೆ.

# ಮತ್ತೆ ಡಿಲಿಮಿಟೇಷನ್ ಮಸೂದೆಮಂಡನೆ..?

ನವದೆಹಲಿ: ನರೇಂದ್ರ ಮೋದಿ ನೇತೃತ್ವದ ಸರ್ಕಾರ 2029ರ ಸಾರ್ವತ್ರಿಕ ಚುನಾವಣೆಗೆ ಮುಂಚಿತವಾಗಿ ಲೋಕಸಭೆಯಲ್ಲಿ ಮಹಿಳಾ ಮೀಸಲಾತಿಯನ್ನು ಜಾರಿಗೆ ತರಲು ಅಗತ್ಯವಿರುವ ಸೀಮಾ ನಿರ್ಣಯ (ಡಿಲಿಮಿಟೇಷನ್) ಮಸೂದೆಗೆ ಸಾಧ್ಯತೆಯನ್ನು ಅನ್ವೇಷಿಸುತ್ತಿದೆ ಎಂದು ಸರ್ಕಾರಿ ಮೂಲಗಳು ತಿಳಿಸಿವೆ.

ಎರಡು ಪ್ರಮುಖ ವಿರೋಧ ಪಕ್ಷಗಳು ಆಂತರಿಕ ದಂಗೆಗಳೊಂದಿಗೆ ಹೋರಾಡುತ್ತಿರುವುದರಿಂದ ಮತ್ತು ಇಂಡಿ ಮೈತ್ರಿಕೂಟದಿಂದ ದೂರವಾಗುತ್ತಿರುವಾಗಲೇ ಮಸೂದೆಗೆ ಮರುಜೀವ ಕೊಡಲು ಸರ್ಕಾರ ಚಿಂತನೆ ನಡೆಸುತ್ತಿರುವುದು ಮಹತ್ವ ಪಡೆದುಕೊಂಡಿದೆ.

ಬದಲಾಗುತ್ತಿರುವ ರಾಜಕೀಯ ಭೂದೃಶ್ಯ ಮತ್ತು ಆಡಳಿತಾರೂಢ ವಿರೋಧ ಪಕ್ಷದ ಸಂಸದರಿಂದ ಹೆಚ್ಚುತ್ತಿರುವ ಬೆಂಬಲ ಶಾಸನಕ್ಕೆ ಸಂಸತ್ತಿನ ಅನುಮೋದನೆಯನ್ನು ಪಡೆಯುವ ಸಾಧ್ಯತೆಗಳನ್ನು ಸುಧಾರಿಸಬಹುದು ಎಂಬ ವಿಶ್ವಾಸ ಕೇಂದ್ರ ಸರ್ಕಾರದಲ್ಲಿದೆ ಎಂದು ಮೂಲಗಳು ಸೂಚಿಸಿವೆ.

ಮಹಿಳೆಯರಿಗೆ ಶೇ.33 ರಷ್ಟು ಮೀಸಲಾತಿ ನೀಡುವ ಸಂವಿಧಾನ ತಿದ್ದುಪಡಿ ಮಸೂದೆಗೆ ಏಪ್ರಿಲ್ 17 ರಂದು ಲೋಕಸಭೆಯಲ್ಲಿ ಸೋಲಾಗಿತ್ತಾದರೂ, ಡೀಲಿಮಿಟೇಷನ್ ಮಸೂದೆ ಮತ್ತು ವಿಧಾನಸಭೆಗಳನ್ನು ಹೊಂದಿರುವ ಕೇಂದ್ರಾಡಳಿತ ಪ್ರದೇಶಗಳಲ್ಲಿ ಮಹಿಳಾ ಮೀಸಲಾತಿ ಕಾನೂನನ್ನು ಜಾರಿಗೆ ತರುವ ಮತ್ತೊಂದು ಕರಡು ಕಾನೂನು ಇನ್ನೂ ಲೋಕಸಭೆಯಲ್ಲಿ ಬಾಕಿ ಉಳಿದಿವೆ ಏಕೆಂದರೆ ಸರ್ಕಾರ ಅವುಗಳನ್ನು ಇನ್ನೂ ಹಿಂಪಡೆದಿಲ್ಲ.

ಇತ್ತೀಚಿನ ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯಲ್ಲಿ ತೃಣಮೂಲ ಕಾಂಗ್ರೆಸ್



ಸೋಲಿನ ನಂತರ, ಪ್ರಾದೇಶಿಕ ಪಕ್ಷ ರಾಜ್ಯ ವಿಧಾನಸಭೆ ಮತ್ತು ಸಂಸತ್ತಿನಲ್ಲಿ ವಿಭಜನೆಯ ಅಂಚಿನಲ್ಲಿದೆ, ಅವುಗಳಲ್ಲಿ ಬಹುಪಾಲು ಕೇಂದ್ರದಲ್ಲಿ ಆಡಳಿತದ ಪರವಾಗಿವೆ.

ರಾಜ್ಯಸಭೆಯಲ್ಲಿರುವ ಆಮ್ ಆದ್ಮಿ ಪಕ್ಷದ (ಎಎಪಿ) 10 ಸಂಸದರಲ್ಲಿ ಏಳು ಮಂದಿ ಈಗಾಗಲೇ ಬಿಜೆಪಿಗೆ ಸೇರಿದ್ದಾರೆ, ಇದರಿಂದಾಗಿ ಮೇಲ್ಮನೆಯಲ್ಲಿ ಆಡಳಿತ ಮೈತ್ರಿಕೂಟದ ಬಲ ಹೆಚ್ಚಿದೆ.

ಮೇ 28 ರಂದು, ಕೇಂದ್ರ ಕಾನೂನು ಸಚಿವ ಅರ್ಜುನ್ ರಾಮ್ ಮೇಘವಾಲ್ ಪಿಟಿಐಗೆ ನೀಡಿದ್ದ ಹೇಳಿಕೆಯಲ್ಲಿ "ಮಹಿಳಾ ಕೋಟಾ ಕಾನೂನು 2029 ರ ಸಂಸತ್ ಚುನಾವಣೆಗೆ ಮೊದಲು ಜಾರಿಯಲ್ಲಿರುತ್ತದೆ ಆದ್ದರಿಂದ ಅದಕ್ಕಾಗಿ ಹೆಚ್ಚು ಸಮಯ ಕಾಯಬೇಕಿಲ್ಲ ಎಂದು ಹೇಳಿದ್ದರು.

ಮುಂದಿನ ಲೋಕಸಭಾ ಚುನಾವಣೆಗೆ ಮೊದಲು ಬಹಳಷ್ಟು ವಿಷಯಗಳು ಸಂಭವಿಸುತ್ತವೆ ಎಂದು ಕಾನೂನು ಸಚಿವರು ಹೇಳಿದ್ದರು. "ನಾವು ನಾರಿ ಶಕ್ತಿ ವಂದನ ಅಧಿನಿಯಮವನ್ನು ಹೆಚ್ಚು ಸಮಯ ಕಾಯಲು ಬಿಡುವುದಿಲ್ಲ. ದೇಶವು ನಾರಿ ಶಕ್ತಿ ವಂದನ (ಮಹಿಳಾ ಮೀಸಲಾತಿ ಕಾನೂನು) ಹೆಚ್ಚು ಸಮಯ ಕಾಯುವುದನ್ನು ಬಯಸುವುದಿಲ್ಲ" ಎಂದು ಅವರು ಪ್ರತಿಪಾದಿಸಿದ್ದರು.

2023 ರ ಮಹಿಳಾ ಕೋಟಾ ಕಾನೂನಿಗೆ ತಿದ್ದುಪಡಿಯನ್ನು ಏಪ್ರಿಲ್‌ನಲ್ಲಿ ಲೋಕಸಭೆಯಲ್ಲಿ ಸೋತಿದ್ದರಿಂದ ಸರ್ಕಾರದ ಭವಿಷ್ಯದ ಯೋಜನೆಯ ಬಗ್ಗೆ ಮೇಘವಾಲ್ ಅವರನ್ನು ಕೇಳಲಾಗಿತ್ತು. 2029 ರಲ್ಲಿ ಮುಂದಿನ ಸಂಸತ್ ಚುನಾವಣೆಗೆ ಮುನ್ನ ಪ್ರಸ್ತುತ 543 ರಿಂದ ಗರಿಷ್ಠ 850 ಕ್ಕೆ ಲೋಕಸಭಾ ಸ್ಥಾನಗಳನ್ನು ಹೆಚ್ಚಿಸಲು ಸಂವಿಧಾನ ತಿದ್ದುಪಡಿ ಮಸೂದೆ ಪ್ರಯತ್ನಿಸಿತ್ತು.

ಭಾರತ ಸಾರಥಿ
10/06/2026
BHARATHA SARATHI KANNADA DAILY NEWS PAPER
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಖಾತೆಗಳಿಗೆ ಕ್ಯಾತೆ ಬಿಟ್ಟು ಕೆಲಸ ಮಾಡಲಿ: ವಿಜಯೇಂದ್ರ

ಬೆಂಗಳೂರು

ರಾಜ್ಯಸಭೆ ಹಾಗೂ ವಿಧಾನ ಪರಿಷತ್ ಚುನಾವಣೆಗೆ ಸಮರ್ಥ ಅಭ್ಯರ್ಥಿಗಳನ್ನೇ ಪಕ್ಷದ ವರಿಷ್ಠರು ಆಯ್ಕೆ ಮಾಡಿದ್ದಾರೆ. ಈ ಆಯ್ಕೆ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರಿಗೆ ಸಂತಸ ತಂದಿದೆ ಎಂದು ಶಾಸಕ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ತಿಳಿಸಿದ್ದಾರೆ.

ನಗರದಲ್ಲಿ ಇಂದು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ರಾಜ್ಯಸಭೆಗೆ ಪ್ರೊ. ಎಂ. ನಾಗರಾಜ್ ಅವರನ್ನು ಹಾಗೂ ವಿಧಾನ ಪರಿಷತ್‌ಗೆ ಲಿಂಗರಾಜ್ ಪಾಟೀಲ್ ಮತ್ತು ರಘು ಕೌಟಿಲ್ಯ ಅವರ ಹೆಸರನ್ನು ಘೋಷಣೆ ಮಾಡಲಾಗಿದೆ. ಈ ಎಲ್ಲ ಮುಖಂಡರು ಪಕ್ಷದ ಸಂಘಟನೆಗೆ ವಿವಿಧ ರೀತಿಯಲ್ಲಿ ತೊಡಗಿಸಿಕೊಂಡಿದ್ದವರು ಎಂದು ಹೇಳಿದರು.

ರಾಜ್ಯಸಭೆ ಅಭ್ಯರ್ಥಿ ಎಂ. ನಾಗರಾಜ್ ಅವರು ಅತ್ಯಂತ ಹಿಂದುಳಿದ ಕುರುಬ ಸಮುದಾಯಕ್ಕೆ ಸೇರಿದವರು. ರಾಷ್ಟ್ರೀಯ ಸ್ವಯಂಸೇವಕ ಸಂಘ ಮತ್ತು ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ತಿನಲ್ಲಿ ಸೇವೆ ಸಲ್ಲಿಸಿದ್ದಾರೆ. ಪಕ್ಷದ ಸಂಘಟನೆಯಲ್ಲಿ ವಿವಿಧ ಹುದ್ದೆಗಳನ್ನು ಅಲಂಕರಿಸಿದ್ದಾರೆ. ರಾಜ್ಯ ಬಿಜೆಪಿ ಉಪಾಧ್ಯಕ್ಷರಾಗಿಯೂ ಕಾರ್ಯನಿರ್ವಹಿಸಿದ್ದಾರೆ. ಬಿ.ಎಸ್. ಯಡಿಯೂರಪ್ಪ ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಕರ್ನಾಟಕ ಲೋಕಸೇವಾ ಆಯೋಗದಲ್ಲಿಯೂ ಉತ್ತಮ ಸೇವೆ ಸಲ್ಲಿಸಿದ್ದರು ಎಂದು ಹೇಳಿದರು.

ವಿಧಾನ ಪರಿಷತ್ ಅಭ್ಯರ್ಥಿ ಲಿಂಗರಾಜ್ ಪಾಟೀಲ್ ಅವರು ಸುಮಾರು 37 ರಿಂದ 38 ವರ್ಷಗಳಿಂದ ಸಂಘಟನೆಯ ವಿವಿಧ ಜವಾಬ್ದಾರಿಗಳನ್ನು ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ನಿರ್ವಹಿಸಿದ್ದಾರೆ. ಸಂಘಟನೆಗೆ ಹಗಲು-ರಾತ್ರಿ ದುಡಿದಿದ್ದಾರೆ. ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ತಿನಲ್ಲಿಯೂ ಸೇವೆ ಸಲ್ಲಿಸಿದ್ದಾರೆ ಎಂದರು.



ರಘು ಕೌಟಿಲ್ಯ ಅವರು ಅತ್ಯಂತ ಹಿಂದುಳಿದ ಮಡಿವಾಳ ಸಮುದಾಯಕ್ಕೆ ಸೇರಿದವರು. ಶಿಕ್ಷಣ ಮತ್ತು ಪತ್ರಿಕೋದ್ಯಮ ಕ್ಷೇತ್ರದಲ್ಲಿ ಅನುಭವ ಹೊಂದಿದ್ದಾರೆ. ಇವರ ಆಯ್ಕೆ ಪಕ್ಷದ ಕಾರ್ಯಕರ್ತರಲ್ಲಿ ಸಂತಸ ಮೂಡಿಸಿದೆ ಎಂದು ಹೇಳಿದರು.

ಸುಮಲತಾ ಅಂಬರೀಷ್ ಅವರಿಗೆ ಮುಂದೆ ಸೂಕ್ತ ಸ್ಥಾನಮಾನ: ರಾಜ್ಯಸಭೆಗೆ ಸುಮಲತಾ ಅಂಬರೀಷ್ ಅವರ ಹೆಸರು ಕೂಡ ಪ್ರಸ್ತಾಪವಾಗಿತ್ತು. ಈ ಹಿಂದೆ ಮಂಡ್ಯ ಲೋಕಸಭಾ ಕ್ಷೇತ್ರದಲ್ಲಿ ಅವರು ಸ್ವತಂತ್ರ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದಾಗ ಬಿಜೆಪಿ ಬೆಂಬಲ ನೀಡಿತ್ತು. ಅವರು ಉತ್ತಮ ಅಂತರದಿಂದ ಗೆಲುವು ಸಾಧಿಸಿದ್ದರು. ಕಳೆದ ಚುನಾವಣೆಯಲ್ಲಿ ಕುಮಾರಸ್ವಾಮಿ ಅವರಿಗೆ ಕ್ಷೇತ್ರ ಬಿಟ್ಟು ಕೊಟ್ಟಿದ್ದರು. ಮುಂದಿನ ದಿನಗಳಲ್ಲಿ ಸುಮಲತಾ ಅವರಿಗೆ ಸೂಕ್ತ ಸ್ಥಾನಮಾನ ನೀಡಲಾಗುವುದು ಎಂದು ವಿಜಯೇಂದ್ರ ಹೇಳಿದರು.

ರಾಜ್ಯಸಭೆಗೆ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರ ಹೆಸರು ಪ್ರಸ್ತಾಪವಾಗಿದ್ದ ಕುರಿತು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ದೇವೇಗೌಡರು ಪ್ರಧಾನಿ ನರೇಂದ್ರ ಮೋದಿ ಅವರ ಕೈ ಬಲಪಡಿಸಿದ್ದಾರೆ. ರಾಷ್ಟ್ರೀಯ ಜನತಾಂತ್ರಿಕ ಮೈತ್ರಿಕೂಟಕ್ಕೆ ಬೆಂಬಲ ನೀಡಿದ್ದಾರೆ. ಅವರ ಬಗ್ಗೆ ಪಕ್ಷಕ್ಕೆ ಅಪಾರ ಗೌರವವಿದೆ. ಆದರೆ ರಾಜ್ಯಸಭೆಗೆ ಅವರನ್ನು ಕಳುಹಿಸುವ ಕುರಿತು ರಾಜ್ಯ ಮಟ್ಟದಲ್ಲಿ ಯಾವುದೇ ಚರ್ಚೆ ನಡೆದಿರಲಿಲ್ಲ ಎಂದು ಸ್ಪಷ್ಟಪಡಿಸಿದರು.

ಇತ್ತೀಚಿನ ರಾಜಕೀಯ ಸ್ಥಿತಿಗತಿಯನ್ನು ಪರಿಗಣಿಸಿ ಸೂಕ್ತ ಅಭ್ಯರ್ಥಿಗಳಿಗೆ ಅವಕಾಶ ಕಲ್ಪಿಸಲಾಗಿದೆ. ಪ್ರಾಮಾಣಿಕವಾಗಿ ದುಡಿದ ಪಕ್ಷದ ಕಾರ್ಯಕರ್ತರಿಗೆ ಆದ್ಯತೆ ನೀಡಲಾಗಿದೆ ಎಂದು ಹೇಳಿದರು.

ಖಾತೆ ಹಂಚಿಕೆಯೇ ಸವಾಲು: ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಖಾತೆ ಹಂಚಿಕೆಯೇ ದೊಡ್ಡ ಸವಾಲಾಗಿದೆ. ಕಳೆದ ಮೂರು ವರ್ಷಗಳಲ್ಲಿ ಯಾವುದೇ ಅಭಿವೃದ್ಧಿ ಕೆಲಸ ನಡೆದಿಲ್ಲ. ಇನ್ನಾದರೂ ಖಾತೆಗಳಿಗೆ ಕ್ಯಾತೆ ಬಿಟ್ಟು ಅಭಿವೃದ್ಧಿ ಕೆಲಸಗಳತ್ತ ಗಮನ ಹರಿಸಬೇಕು ಎಂದು ವಿಜಯೇಂದ್ರ ಸಲಹೆ ನೀಡಿದರು.

## ಪಂಚಾಯ್ತಿಗಳಿಗೆ ವರ್ಷಾಂತ್ಯದೊಳಗೆ ಚುನಾವಣೆ: ಈಶ್ವರ ಖಂಡ್ರೆ

ಬೆಂಗಳೂರು

ಅಧಿಕಾರ ವಿಕೇಂದ್ರೀಕರಣ ದಿವಂಗತ ರಾಜೀವ್ ಗಾಂಧೀ ಅವರ ಕಲ್ಪನೆಯಾಗಿದ್ದು, ಈ ವರ್ಷಾಂತ್ಯದೊಳಗೆ ಎಲ್ಲ ಪಂಚಾಯ್ತಿಗಳಿಗೆ ಚುನಾವಣೆ ನಡೆಸಲು ಕ್ರಮವಹಿಸಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಇಲಾಖೆಯ ಉನ್ನತಾಧಿಕಾರಿಗಳೊಂದಿಗೆ ಪರಿಚಯಾತ್ಮಕ ಸಭೆ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಂದಿನ 8 ವಾರಗಳಲ್ಲಿ ಕ್ಷೇತ್ರ ಪುನರ್ವಿಂಗಡಣೆ ಕಾರ್ಯ ಹಾಗೂ ಮೀಸಲಾತಿ ಪ್ರಕ್ರಿಯೆ ಪೂರ್ಣಗೊಳಿಸಲಾಗುವುದು. ನಂತರ ರಾಜ್ಯ ಚುನಾವಣೆ ಆಯೋಗ ಚುನಾವಣೆ ಪ್ರಕ್ರಿಯೆ ನಡೆಸಲಿದೆ ಎಂದರು.

ಸಭೆಯಲ್ಲಿ ಇಲಾಖೆಯ ಕಾರ್ಯದರ್ಶಿಗಳಾದ ಸಮೀರ್ ಶುಕ್ಲ, ರಂದೀಪ್ ಡಿ, ಪಂಚಾಯತ್ ರಾಜ್ ಆಯುಕ್ತರಾದ ಡಾ ಅರುಂಧತಿ, ಕೆ.ಆರ್.ಐ.ಡಿ.ಎಲ್. ವ್ಯವಸ್ಥಾಪಕ ನಿರ್ದೇಶಕ ರಾಜೇಶ್ ಗೌಡ, ಕುಡಿಯುವ ನೀರು ಪೂರೈಕೆ ವಿಭಾಗದ ಆಯುಕ್ತರಾದ ಫೌಜಿಯಾ ತರುನ್ನುಂ ಮತ್ತಿತರರು ಪಾಲ್ಗೊಂಡಿದ್ದರು.



ಶಾಸಕ ಮಹಾಂತೇಶ ಕೌಜಲಗಿ ಹಾಗೂ ಮಾಜಿ ಶಾಸಕ ಅಮರೇಗೌಡ ಬಯ್ಯಾಪುರ ಅವರಿಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಅವರನ್ನು ಭೇಟಿ ಮಾಡಿ ಅಭಿನಂದನೆ ಸಲ್ಲಿಸಿದರು.

## ಐದು ದಿನದಲ್ಲೇ ಸರ ಕಳ್ಳರ ಬಂಧನ

ಕೋಲಾರ

ದಾರಿ ಕೇಳುವ ನೆಪದಲ್ಲಿ ಮಹಿಳೆಯೊಬ್ಬರ ಕುತ್ತಿಗೆಯಿಂದ ಚಿನ್ನದ ಸರ ಕಸಿದು ಪರಾರಿಯಾಗಿದ್ದ ಇಬ್ಬರನ್ನು ವೇಮಗಲ್ ಪೊಲೀಸರು ಘಟನೆ ನಡೆದ ಕೇವಲ ಐದು ದಿನಗಳಲ್ಲಿ ಬಂಧಿಸಿ 4.67 ಲಕ್ಷ ರೂ ಮೌಲ್ಯದ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ.

ಮೇ 31ರಂದು ಮಧ್ಯಾಹ್ನ ದೊಡ್ಡವಲ್ಲಬ್ಬಿ ಸಮೀಪದ ಚೌಡದೇನಹಳ್ಳಿ ರಸ್ತೆಯಲ್ಲಿ ಮಂಚಂಡಹಳ್ಳಿ ನಿವಾಸಿ ಸ್ವಾತಿ ತಮ್ಮ ಇಬ್ಬರು ಮಕ್ಕಳೊಂದಿಗೆ ದ್ವಿಚಕ್ರ ವಾಹನದಲ್ಲಿ ಪ್ರಯಾಣಿಸುತ್ತಿದ್ದ ವೇಳೆ ಅಪರಿಚಿತ ವ್ಯಕ್ತಿಗಳು ವಿಳಾಸ ಕೇಳುವ ನೆಪದಲ್ಲಿ ಅವರ ಬಳಿ ಬಂದು ಕುತ್ತಿಗೆಯಲ್ಲಿದ್ದ ತಾಳಿ, ಬಟ್ಟು ಹಾಗೂ ಲಕ್ಷ್ಮೀ ಕಾಸು ಹೊಂದಿದ್ದ ಚಿನ್ನದ ಸರ ಕಸಿದು ದ್ವಿಚಕ್ರ ವಾಹನದಲ್ಲಿ ಪರಾರಿಯಾಗಿದ್ದರು.

ಈ ಕುರಿತು ವೇಮಗಲ್ ಪೊಲೀಸ್ ನಿರೀಕ್ಷಕ ಬಿ.ಪಿ. ಮಂಜು, ಉಪನಿರೀಕ್ಷಕಿ ಸುನಿತಾ ದೇವಿ, ಪ್ರೊಬೇಷನರಿ ಪಿಎಸ್‌ಐ ರಾಘವೇಂದ್ರ ನಾಯಕ ಹಾಗೂ ಸಿಬ್ಬಂದಿ ನಾರಾಯಣಸ್ವಾಮಿ, ಹನುಮಂತ, ರವಿ ಮತ್ತು ಮಹೇಶ್ ಅವರ ತಂಡವು ಸುಮಾರು 150ಕ್ಕೂ ಹೆಚ್ಚು ಸಿಸಿಟಿವಿ ಕ್ಯಾಮೆರಾ ದೃಶ್ಯಾವಳಿ ಪರಿಶೀಲಿಸಿ ಆರೋಪಿಗಳನ್ನು ಪತ್ತೆ ಹಚ್ಚಿದೆ.

ಬಂಧಿತರನ್ನು ಹೊಸಕೋಟೆ ತಾಲೂಕು ದೊಡ್ಡನಲ್ಲಾಳ ಗ್ರಾಮದ ಅಂಜನ್ ಕುಮಾರ್ (35), ವೆಂಕಟೇಶ್(42) ಎಂದು ಗುರುತಿಸಲಾಗಿದೆ.

ಈ ಇಬ್ಬರು ಆರೋಪಿಗಳು ಕಳೆದ ಡಿಸೆಂಬರ್ ತಿಂಗಳಲ್ಲಿ ವೇಮಗಲ್ ವ್ಯಾಪ್ತಿಯ ಕಲ್ವ ಗ್ರಾಮದ ಸಮೀಪ ಪಾರ್ವತಮ್ಮರ ಮಾಂಗಲ್ಯ ಸರವನ್ನು ಸಹ ಇದೇ ರೀತಿ ಕಸಿದುಕೊಂಡಿದ್ದ ಪ್ರಕರಣದಲ್ಲೂ ಭಾಗಿಯಾಗಿರುವುದು ಬೆಳಕಿಗೆ ಬಂದಿದೆ.

ಪೊಲೀಸರು ಆರೋಪಿಗಳಿಂದ ಒಟ್ಟು 45 ಗ್ರಾಂ ತೂಕದ ಚಿನ್ನಾಭರಣ (ಅಂದಾಜು ಮೌಲ್ಯ 4.67 ಲಕ್ಷ) ಹಾಗೂ ಅಪರಾಧಕ್ಕೆ ಬಳಸಿದ್ದ ಕೆಎ-53 ಎಚ್‌ಕೆ-1032 ನೋಂದಣಿ ಸಂಖ್ಯೆಯ ಬಜಾಜ್ ಕೆಟಿಎಂ ಡ್ಯೂಕ್ ದ್ವಿಚಕ್ರ ವಾಹನ ವಶಪಡಿಸಿಕೊಂಡಿದ್ದಾರೆ.

## ಸಾಫ್ಟ್ ವೇರ್ ಅಳವಡಿಕೆ: ಬೆಸ್ಕಾಂನ 20 ಪಟ್ಟಣಗಳಲ್ಲಿ ಆನ್ ಸೇವೆ ಅಲಭ್ಯ

ಬೆಂಗಳೂರು

ಸಮಗ್ರ ವಿದ್ಯುತ್ ಅಭಿವೃದ್ಧಿ ಯೋಜನೆಯ (ಐಪಿಡಿಎಸ್) ಹಂತ-2 ರ ಅಡಿಯಲ್ಲಿ ಬೆಸ್ಕಾಂ ವ್ಯಾಪ್ತಿಯ ನಗರ ಪ್ರದೇಶದಲ್ಲಿ ಪ್ರಸ್ತುತ ಜಾರಿಯಲ್ಲಿರುವ ಐಪಿಡಿಎಸ್ ಐಟಿ ಅಪ್ಲಿಕೇಶನ್ ಅನ್ನು ಬೆಸ್ಕಾಂ ವ್ಯಾಪ್ತಿಯ 20 ಐಪಿಡಿಎಸ್ ಪಟ್ಟಣ ಪ್ರದೇಶಗಳಲ್ಲಿ ಅಳವಡಿಸಿಕೊಳ್ಳಲು ನಿರ್ಧರಿಸಿರುವ ಹಿನ್ನೆಲೆಯಲ್ಲಿ ಈ ಕೆಳಕಂಡ ಪಟ್ಟಣ ಪ್ರದೇಶಗಳಲ್ಲಿ ದಿನಾಂಕ 10.06.2026 ರಿಂದ 30.06.2026ರವರೆಗೆ ಬೆಸ್ಕಾಂನ ಆನ್ ಲೈನ್ ಸೇವೆಗಳು ಲಭ್ಯ ವಿರುವುದಿಲ್ಲ.

ಪ್ರಸ್ತುತ ಚಾಲ್ತಿಯಲ್ಲಿರುವ ಟಿಆರ್‌ಎಮ್ ಸಾಫ್ಟ್‌ವೇರ್ ಬದಲಿಗೆ ಐಪಿಡಿಎಸ್ ಐಟಿ ಅಪ್ಲಿಕೇಶನ್ ಅಳವಡಿಸಿಕೊಳ್ಳುವುದರಿಂದ ದತ್ತಾಂಶ ವರ್ಗಾವಣೆ ಮಾಡುವ ಸಲುವಾಗಿ 21 ದಿನಗಳ ಕಾಲ ಆನ್ ಲೈನ್ ಸೇವೆಗಳಾದ ಹೊಸ ಸಂಪರ್ಕ, ಹೆಸರು ವರ್ಗಾವಣೆ, ಲೋಡ್ ಹೆಚ್ಚಳ, ಬಿಲ್ ಪಾವತಿ, ಸೇರಿದಂತೆ ಆನ್‌ಲೈನ್ ಸೇವೆಗಳು ಸ್ಥಗಿತಗೊಳ್ಳಲಿದೆ ಎಂದು ಬೆಸ್ಕಾಂ ಪ್ರಕಟಣೆ ತಿಳಿಸಿದೆ.

ಗ್ರಾಹಕರು ಥರ್ಡ್ ಪಾರ್ಟಿ ಬಿಲ್ ಪಾವತಿ ವ್ಯವಸ್ಥೆಗಳಾದ ಗೂಗಲ್ ಪೇ, ಫೋನ್ ಪೇ ಮೂಲಕ ಐಪಿಡಿಎಸ್ ಸಾಫ್ಟ್ ವೇರ್ ಅಳವಡಿಕೆ ಹಿನ್ನೆಲೆಯಲ್ಲಿಆನ್‌ಲೈನ್ ಸೇವೆ ಅಲಭ್ಯವಿರುವುದರಿಂದ ಈ ಮೇಲಿನ 20 ಪಟ್ಟಣ ಪ್ರದೇಶಗಳ ಗ್ರಾಹಕರು ಸಹಕರಿಸಬೇಕಾಗಿ ಬೆಸ್ಕಾಂ ಕೋರಿದೆ.

# ಎಲ್‌ಪಿಜಿ ಬೆಲೆ ಏರಿಕೆ: ಅಡುಗೆ ಮನೆಗೆಕೊಳ್ಳಿ

ಬೆಂಗಳೂರು: ದಿನನಿತ್ಯದ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಜನ ಸಾಮಾನ್ಯರು ತತ್ತರಿಸಿರುವಾಗ ಮತ್ತೊಮ್ಮೆ ಅಡುಗೆ ಅನಿಲದ ದರ ಏರಿಕೆ ಮಾಡುವ ಮೂಲಕ ಅಡುಗೆ ಮನೆಗೆ ಕೊಳ್ಳಿ ಇಟ್ಟಿದ್ದಾರೆ. ಉಜ್ವಲ ಯೋಜನೆಯಡಿ ಸಿಲೆಂಡರ್ ಗಳನ್ನು 4ಕ್ಕೆ ಇಳಿಸಿರುವುದು ಖಂಡನೀಯ. ಇದೇನಾ "ಸಬ್ ಕಾ ಸಾಥ್ ಸಬ್ ಕಾ ವಿಕಾಸ್" ಎಂದು ಎಐಸಿಸಿ ಎಸ್.ಸಿ ವಿಭಾಗದ ರಾಷ್ಟ್ರೀಯ ಸಂಯೋಜಕರು ಹಾಗೂ ಮಹಾರಾಷ್ಟ್ರ ಉಸ್ತುವಾರಿ ಟೀಕಿಸಿದ್ದಾರೆ.



ಉಜ್ವಲ ಯೋಜನೆಯಡಿ 14.2 ಕೆ.ಜಿ 12 ಸಿಲೆಂಡರ್ ಗಳನ್ನು ನೀಡಲಾಗುತ್ತಿತ್ತು. ಕಳೆದ ವರ್ಷ ಇದನ್ನು 9ಕ್ಕೆ ಇಳಿಸಿ, ಇದೀಗ 4ಕ್ಕೆ ತಗ್ಗಿಸಿರುವುದು ಖಂಡನೀಯ. ಡಾ. ಮನಮೋಹನ್ ಸಿಂಗ್ ಸರ್ಕಾರ ಮತ್ತೊಂದು ದುಬಾರಿ ಬದುಕಿನ ಕೊಡುಗೆ ನೀಡಿದ್ದು, ಮೂರು ತಿಂಗಳಲ್ಲಿ ಅಡುಗೆ ಬೆಲೆ ದರವನ್ನು 90 ರೂಪಾಯಿ ಹೆಚ್ಚಿಸಿದೆ. ಡಾ. ಮನಮೋಹನ್ ಸಿಂಗ್ ಅವಧಿಯಲ್ಲಿ 400 ರೂ ಇದ್ದ ಸಿಲೆಂಡರ್ ಬೆಲೆ ಇದೀಗ ಒಂದು ಸಾವಿರ ರೂ ಸನಿಹಕ್ಕೆ ಬಂದಿದೆ. ಈಸ್ಟ್ ಇಂಡಿಯಾ ಕಂಪೆನಿಯ ಮಾದರಿಯಂತೆ ದೇಶದ ಜನರ ಹಣವನ್ನು ಸರ್ಕಾರ ಕೊಳ್ಳೆ ಹೊಡೆಯುತ್ತಿದೆ. ಮುಂದೆ ಅಡುಗೆ ಮಾಡುವನ್ನು ಬಿಟ್ಟು ಸೊಪ್ಪು, ಸದೆ ತಿಂದು ಬದುಕುವಂತೆ ಕರೆ ಕೊಟ್ಟರೂ ಅಚ್ಚರಿಯಿಲ್ಲ ಎಂದಿದ್ದಾರೆ.

ಜನರ ಜೀವನಮಟ್ಟ ಸುಧಾರಿಸುವುದೇ ಸರ್ಕಾರದ ನಿಜವಾದ ಸಾಧನೆಯಾಗಬೇಕು. ಆದರೆ ಅಡುಗೆ ಮನೆಯ ಅಗ್ನಿಯನ್ನು ಉಳಿಸಿಕೊಳ್ಳುವುದೇ ಸವಾಲಾಗುತ್ತಿರುವ ಸಂದರ್ಭದಲ್ಲಿ ಎಲ್‌ಪಿಜಿ ದರ ಏರಿಕೆಗಳು ಮೋದಿ ಸರ್ಕಾರದ ಆರ್ಥಿಕ ನೀತಿಗಳ ಕುರಿತು ಗಂಭೀರ ಪ್ರಶ್ನೆಗಳನ್ನು ಹುಟ್ಟುಹಾಕುತ್ತಿವೆ. ಜನರ ಬದುಕಿನ ವಾಸ್ತವ ಸಮಸ್ಯೆಗಳಿಗೆ ಸ್ಪಂದಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ತಕ್ಷಣವೇ ಬೆಲೆ ನಿಯಂತ್ರಣ ಹಾಗೂ ಪರಿಣಾಮಕಾರಿ ಸಬ್ಸಿಡಿ ವ್ಯವಸ್ಥೆ ಜಾರಿಗೆ ತರಬೇಕೆಂಬ ಒತ್ತಾಯ ಮತ್ತಷ್ಟು ಬಲವಾಗುತ್ತಿದೆ ಎಂದಿದ್ದಾರೆ.

ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ಅವರು, ಸಿಲಿಂಡರ್ ದರಗಳು ನಿರಂತರವಾಗಿ ಏರಿದರೆ, ಅನೇಕ ಬಡ ಕುಟುಂಬಗಳು ಮತ್ತೆ ಕಟ್ಟಿಗೆ, ಸೌದೆ ಹಾಗೂ ಸಾಂಪ್ರದಾಯಿಕ ಇಂಧನಗಳತ್ತ ಮರಳುವ ಅಪಾಯವಿದೆ. ಸಂಪರ್ಕ ಪಡೆದ ನಂತರವೂ ಮರುಪೂರೈಕೆ ಸಿಲಿಂಡರ್ ಖರೀದಿಸಲು ಸಾಧ್ಯವಾಗದ ಕಾರಣ ಹಲವು ಉಜ್ವಲ ಫಲಾನುಭವಿಗಳು ಗ್ಯಾಸ್ ಬಳಕೆಯನ್ನು ಕಡಿಮೆ ಮಾಡಿರುವುದಾಗಿ ವಿವಿಧ ಅಧ್ಯಯನಗಳು ಮತ್ತು ವರದಿಗಳು ಸೂಚಿಸಿವೆ.

ಕಚ್ಚಾ ತೈಲದ ಬೆಲೆ ಇಳಿದಾಗ ಅದರ ಸಂಪೂರ್ಣ ಲಾಭವನ್ನು ಗ್ರಾಹಕರಿಗೆ ನೀಡದೆ, ಕೇಂದ್ರ ಸರ್ಕಾರ ವಿವಿಧ ತೆರಿಗೆಗಳ ಮೂಲಕ ಹೆಚ್ಚಿನ ಆದಾಯ ಸಂಗ್ರಹಿಸಿದೆ. ಜಾಗತಿಕವಾಗಿ ಬೆಲೆ ಏರಿದಾಗ ಅದರ ಹೊರೆ ನೇರವಾಗಿ ಜನರ ಮೇಲೆ ಬೀಳುತ್ತಿದೆ. ಪೆಟ್ರೋಲ್, ಡೀಸೆಲ್, ಅಡುಗೆ ಅನಿಲ ಸೇರಿದಂತೆ ಇಂಧನ ಕ್ಷೇತ್ರದಲ್ಲಿ ಸರ್ಕಾರದ ನೀತಿಗಳು ಜನಪರವಾಗಿರುವುದಕ್ಕಿಂತ ಬಡವರ ಜೇಬಿನಿಂದ ಹಣ ಕಿತ್ತು ಉಳ್ಳವರಿಗೆ ವರ್ಗಾಯಿಸುವ ನೀತಿ ಅನುಸರಿಸುತ್ತಿದೆ ಎಂದು ಟೀಕಿಸಿದ್ದಾರೆ.

ದೇಶದ ಮಧ್ಯಮ ವರ್ಗವು ತೆರಿಗೆ ಕಟ್ಟುವ ವರ್ಗವಾಗಿದ್ದರೂ, ಬೆಲೆ ಏರಿಕೆಯ ಸಂದರ್ಭದಲ್ಲಿ ಅವರಿಗೆ ಸಿಗುವ ನೆರವು ಅತ್ಯಂತ ಕಡಿಮೆ ಎಂಬ ಅಸಮಾಧಾನವಿದೆ. ಶಿಕ್ಷಣ, ಆರೋಗ್ಯ, ಮನೆ ಬಾಡಿಗೆ, ವಿದ್ಯುತ್, ಸಾರಿಗೆ ಸೇರಿದಂತೆ ಎಲ್ಲ ಕ್ಷೇತ್ರಗಳಲ್ಲಿಯೂ ವೆಚ್ಚ ಹೆಚ್ಚುತ್ತಿರುವ ಸಂದರ್ಭದಲ್ಲಿ ಅಡುಗೆ ಅನಿಲದ ದರ ಏರಿಕೆಯೂ ಕುಟುಂಬದ ಬಜೆಟ್‌ಗೆ ಮತ್ತೊಂದು ಹೊಡೆತವಾಗಿದೆ. ತಿಂಗಳ ಆದಾಯ ಸ್ಥಿರವಾಗಿದ್ದರೂ ಖರ್ಚು ಮಾತ್ರ ನಿರಂತರವಾಗಿ ಏರುತ್ತಿರುವುದರಿಂದ ಮಧ್ಯಮ ವರ್ಗದ ಉಳಿತಾಯ ಸಾಮರ್ಥ್ಯ ಕುಸಿಯುತ್ತಿದೆ. ಇದು ದೇಶದ ಆರ್ಥಿಕತೆಯ ಮೇಲೆಯೂ ದೀರ್ಘಾವಧಿಯಲ್ಲಿ ಪರಿಣಾಮ ಬೀರುವ ಸಾಧ್ಯತೆ ಇದೆ.

ಚುನಾವಣೆಗಳ ಸಮಯದಲ್ಲಿ ಮಾತ್ರ ಸಬ್ಸಿಡಿ, ಬೆಲೆ ಇಳಿಕೆ ಅಥವಾ ಜನಪರ ಘೋಷಣೆಗಳು ಮೊಳಗುತ್ತವೆ. ಚುನಾವಣೆ ಬಳಿಕ ಮತ್ತೆ ಬೆಲೆ ಏರಿಕೆಗಳ ಸರಣಿ ಆರಂಭವಾಗುತ್ತದೆ. ಜನರ ಬದುಕಿನ ಮೇಲೆ ನೇರ ಪರಿಣಾಮ ಬೀರುವ ಇಂಧನ ಮತ್ತು ಅಡುಗೆ ಅನಿಲದಂತಹ ವಿಷಯಗಳಲ್ಲಿ ಸರ್ಕಾರ ದೀರ್ಘಾವಧಿಯ ಸ್ಥಿರ ನೀತಿ ರೂಪಿಸಬೇಕೇ ಹೊರತು, ರಾಜಕೀಯ ಲಾಭ-ನಷ್ಟದ ಲೆಕ್ಕಾಚಾರದಲ್ಲಿ ನಿರ್ಧಾರಗಳನ್ನು ಕೈಗೊಳ್ಳಬಾರದು. ಅಡುಗೆ ಅನಿಲವು ಇಂದು ಐಷಾರಾಮಿ ವಸ್ತುವಲ್ಲ; ಪ್ರತಿಯೊಂದು ಮನೆಯ ಮೂಲಭೂತ ಅಗತ್ಯವಾಗಿದೆ. ಇಂತಹ ಅಗತ್ಯ ಸೇವೆಯ ಬೆಲೆ ನಿರಂತರವಾಗಿ ಏರಿಕೆಯಾಗುತ್ತಿರುವುದು ಬಡ ಹಾಗೂ ಮಧ್ಯಮ ವರ್ಗದ ಕುಟುಂಬಗಳ ಜೀವನವನ್ನು ಇನ್ನಷ್ಟು ಕಷ್ಟಕರಗೊಳಿಸುತ್ತಿದೆ. ಬೆಲೆ ಏರಿಕೆಯ ಭಾರದಿಂದ ನರಳುತ್ತಿರುವ ಜನರು ಅಭಿವೃದ್ಧಿಯ ಫಲವನ್ನು ಅನುಭವಿಸುತ್ತಿದ್ದಾರೆಯೇ ಎಂಬ ಪ್ರಶ್ನೆ ಉದ್ಭವಿಸಿದೆ. "ಅಚ್ಚೇ ದಿನ್" ಹಾಗೂ "ಬಡವರ ಪರ ಸರ್ಕಾರ" ಎಂಬ ಘೋಷಣೆಗಳ ಮೂಲಕ ಅಧಿಕಾರಕ್ಕೆ ಬಂತು. ಕಳೆದ ಹಲವು ವರ್ಷಗಳ ಬೆಳವಣಿಗೆಗಳನ್ನು ಗಮನಿಸಿದರೆ ಸಾಮಾನ್ಯ ಕುಟುಂಬಗಳ ಜೀವನ ನಿರ್ವಹಣೆಯ ವೆಚ್ಚ ಮಾತ್ರ ನಿರಂತರವಾಗಿ ಹೆಚ್ಚುತ್ತಲೇ ಬಂದಿದೆ. ಕಾಂಗ್ರೆಸ್ ಆಡಳಿತದಲ್ಲಿ ಅಡುಗೆ ಅನಿಲ ಸಬ್ಸಿಡಿ ಯೋಜನೆಗಳ ಮೂಲಕ ಬಡ ಹಾಗೂ ಮಧ್ಯಮ ವರ್ಗದ ಕುಟುಂಬಗಳಿಗೆ ನೆರವಾಗುತ್ತಿತ್ತು. ಇಂದು ಅದೇ ವರ್ಗಗಳ ಮೇಲೆ ಬೆಲೆ ಏರಿಕೆಯ ಭಾರವನ್ನು ಹೇರುತ್ತಿದೆ ಎಂದು ಟೀಕಿಸಿದ್ದಾರೆ.

ಮೋದಿ ಸರ್ಕಾರ ಎಲ್ಲಾ ರಂಗಗಳಲ್ಲೂ ವಿಫಲವಾಗಿದೆ. ಭಾರತದ ಮಾವಿಗೆ ಜಪಾನ್ ನಿಷೇಧ ಹೇರಿತು, ಅಕ್ಕಿಯನ್ನು ಚೀನಾ ನಿಷೇಧಿಸಿತು. ವೀಸಾ ಇಲ್ಲದವರಿಗೆ ತೈವಾನ್ ದೇಶದ ಪ್ರಯಾಣ ಬಂದ್ ಆಯಿತು. ಕೋರಿಯಾ ದೇಶಗಳು ಷೇರು ಮಾರುಕಟ್ಟೆಯಲ್ಲಿ ವಿಜೃಂಭಿಸುತ್ತಿವೆ. ರೂಪಾಯಿ ಮೌಲ್ಯ ಕುಸಿಯುತ್ತಿದ್ದರೂ ವಿಶ್ವಗುರು ಮೋದಿ ಚಕಾರ ಎತ್ತುತ್ತಿಲ್ಲ ಎಂದು ಡಾ. ಆನಂದ ಕುಮಾರ್ ವಾಗ್ದಾಳಿ ನಡೆಸಿದ್ದಾರೆ.

## ಕಾಂಪ್ಯಾಕ್ಟ್ ಕ್ವಾಂಟಿನೊ 20 ಡಬ್ಲ್ಯೂ ಲೇಸರ್ ವ್ಯವಸ್ಥೆ ಪರಿಚಯ

ಬೆಂಗಳೂರು

ಪುಣೆಯನ್ನು ಪ್ರಧಾನ ಕಚೇರಿಯಾಗಿಟ್ಟುಕೊಂಡಿರುವ ಜಾಗತಿಕ ವೈದ್ಯಕೀಯ ತಂತ್ರಜ್ಞಾನ ಸಂಸ್ಥೆಯಾದ ಬಯೋರ್ಯಾಡ್ಮೆ ಮೆಡಿಸಿಸ್, ಬೆಂಗಳೂರಿನಲ್ಲಿ ನಡೆಯುತ್ತಿರುವ ಯುರೋಲಿಥೊಕಾನ್ 2026 ಕಾರ್ಯಕ್ರಮದಲ್ಲಿ ಮೂತ್ರಪಿಂಡದ ಕಲ್ಲಿನ ನಿರ್ವಹಣೆಗೆ ಕ್ವಾಂಟಿನೊ 20 ಡಬ್ಲ್ಯೂ ಥುಲಿಯಮ್ ಫೈಬರ್ ಲೇಸರ್ ವ್ಯವಸ್ಥೆಯನ್ನು ಪರಿಚಯಿಸಿದೆ.




ಭಾರತದಲ್ಲಿ ಮೂತ್ರಪಿಂಡದ ಕಲ್ಲಿನ ಸಮಸ್ಯೆ ಹೆಚ್ಚುತ್ತಿರುವ ಆರೋಗ್ಯ ಸವಾಲಾಗಿ ಪರಿಣಮಿಸುತ್ತಿರುವ ಸಂದರ್ಭದಲ್ಲಿ ಈ ಹೊಸ ತಂತ್ರಜ್ಞಾನವನ್ನು ಪರಿಚಯಿಸಲಾಗಿದೆ. ಅಧ್ಯಯನಗಳ ಪ್ರಕಾರ, ಭಾರತೀಯ ಜನಸಂಖ್ಯೆಯ ಸುಮಾರು ಶೇಕಡಾ 12ರಷ್ಟು ಜನರು ತಮ್ಮ ಜೀವಿತಾವಧಿಯಲ್ಲಿ ಮೂತ್ರಪಿಂಡದ ಕಲ್ಲಿನ ಸಮಸ್ಯೆಗೆ ಒಳಗಾಗುವ ಸಾಧ್ಯತೆಯಿದೆ.

ಹೆಚ್ಚುತ್ತಿರುವ ತಾಪಮಾನ, ನಿರ್ಜಲೀಕರಣ, ಆಹಾರ ಪದ್ಧತಿಗಳ ಬದಲಾವಣೆ ಹಾಗೂ ಜಡ ಜೀವನಶೈಲಿ ಈ ಸಮಸ್ಯೆಯ ಪ್ರಮಾಣ ಹೆಚ್ಚಲು ಪ್ರಮುಖ ಕಾರಣಗಳಾಗಿವೆ. ರೋಗಿಗಳ ಸಂಖ್ಯೆ ಹೆಚ್ಚುತ್ತಿರುವ ಹಿನ್ನೆಲೆ, ಆಸ್ಪತ್ರೆಗಳು ಮತ್ತು ಮೂತ್ರಶಾಸ್ತ್ರ ತಜ್ಞರು ಪರಿಣಾಮಕಾರಿ ಕಲ್ಲು ಚಿಕಿತ್ಸೆ, ಕಡಿಮೆ ಆಸ್ಪತ್ರೆ ವಾಸ್ತವ್ಯ ಹಾಗೂ ವೇಗವಾದ ಚೇತರಿಕೆಗೆ ನೆರವಾಗುವ ಕನಿಷ್ಠ ಆಕ್ರಮಣಕಾರಿ ತಂತ್ರಜ್ಞಾನಗಳನ್ನು ಹೆಚ್ಚಾಗಿ ಅಳವಡಿಸಿಕೊಳ್ಳುತ್ತಿದ್ದಾರೆ.



ಬೆಂಗಳೂರಿನ ಆರ್ ಟಿ ನಗರದಲ್ಲಿರುವ ಮಾಜಿ ಸಿಎಂ ಜಗದೀಶ್ ಶೆಟ್ಟರ್ ಅವರ ನಿವಾಸಕ್ಕೆ ಸಿಎಂ ಡಿ.ಕೆ.ಶಿವಕುಮಾರ್ ಅವರು ಸೋಮವಾರ ಸಂಜೆ ಭೇಟಿ ನೀಡಿ ಆಶೀರ್ವಾದ ಪಡೆದರು. ಪತ್ನಿ ಶಿಲ್ಪಾ ಶೆಟ್ಟರ್, ಧೃವ ಜತ್ತಿ ಉಪಸ್ಥಿತರಿದ್ದರು.

# ಚದುರಂಗದ ಆಟದಲ್ಲಿ ಯಾವ ಕಾಯಿ ಮುನ್ನಡೆಸುತ್ತೇವೆ ಎಂದು ಯಾರೂ ಹೇಳುವುದಿಲ್ಲ: ಸಿಎಂ ಡಿ.ಕೆ.ಶಿವಕುಮಾರ್

ಬೆಂಗಳೂರು

"ರಾಜಕಾರಣದಲ್ಲಿ ಚದುರಂಗದ ಆಟ ಆಡುವಾಗ ಯಾರಾದರು ಯಾವ ರೀತಿ ಕಾಯಿ ನಡೆಸುತ್ತಾರೆ ಎಂದು ಹೇಳುತ್ತಾರೆಯೇ? ಯಾರು ಹೇಳುವುದಿಲ್ಲ " ಎಂದು ಸಿಎಂ ಡಿ.ಕೆ. ಶಿವಕುಮಾರ್ ಅವರು ಹೇಳಿದರು.

ವಿಧಾನಸೌಧದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಸೋಮವಾರ ಪ್ರತಿಕ್ರಿಯೆ ನೀಡಿದರು. ಪರಿಷತ್ ಚುನಾವಣೆಯಲ್ಲಿ ವಿನಯ್ ಕಾರ್ತಿಕ್ ಸ್ಪರ್ಧೆ, ಜೆಡಿಎಸ್ ಹೆಚ್ಚುವರಿ ಅಭ್ಯರ್ಥಿ ಸ್ಪರ್ಧೆ ಬಗ್ಗೆ ಕೇಳಿದಾಗ ಶಿವಕುಮಾರ್ ಅವರು ಈ ರೀತಿ ಪ್ರತಿಕ್ರಿಯೆ ನೀಡಿದರು.



ದೇವೇಗೌಡರಿಗೆ ರಾಜ್ಯಸಭೆ ಟಿಕೆಟ್ ತಪ್ಪಿಸಿ ಬಿಜೆಪಿ ಅನ್ಯಾಯ ಮಾಡಿದೆ ಎಂದು ಸುರ್ಜೆವಾಲ ಅವರು ಟೀಕೆ ಮಾಡಿರುವ ಬಗ್ಗೆ ಕೇಳಿದಾಗ, "ನಾನು ಸದ್ಯಕ್ಕೆ ಏನು ಮಾತನಾಡುವುದಿಲ್ಲ. ಅವರು ಮಾತಾಡಿದ್ದಾರೆ. ಆದರೆ ನಾನು ಮಾತಾಡಕ್ಕೆ ಹೋಗುವುದಿಲ್ಲ. ನಮ್ಮ ಪಕ್ಷದ ಚಿಂತನೆಯನ್ನು ನಾನು ಪಾಲನೆ ಮಾಡುತ್ತೇನೆ" ಎಂದರು.

ಸೂರಜ್ ಹೆಗ್ಡೆ ತ್ಯಾಗಕ್ಕೆ ಹೆಸರಾದವರು:

"ಸೂರಜ್ ಹೆಗ್ಡೆ ಆತ್ಮೀಯ ಸ್ನೇಹಿತ. ತ್ಯಾಗಕ್ಕೆ ಹೆಸರಾದವರು. ಇದೇ ಸ್ಥಾನ ಬೇಕು ಎಂದೂ ಕೇಳುತ್ತಿರಲಿಲ್ಲ. ನಾನು ಹಿಂದೆ ಅವರಿಗೆ ಮೈಸೂರು ಸಂಸದ ಸ್ಥಾನಕ್ಕೆ ಟಿಕೆಟ್ ಕೊಡಿಸಬೇಕು ಅಂತ ಬಹಳ ಹೋರಾಟ ಮಾಡಿದ್ದೆ. ಅವರು ದೇವರಾಜ ಅರಸು ಅವರ ಮೊಮ್ಮಗ. ಪಕ್ಷದ ನಿಷ್ಠಾವಂತ ಕಾರ್ಯಕರ್ತ. ನನ್ನ ಜೊತೆ ಪದಾಧಿಕಾರಿಯಾಗಿದ್ದವರು.

ಗ್ಯಾರಂಟಿ ಸಮಿತಿ ಉಪಾಧ್ಯಕ್ಷರಾಗಿದ್ದವರು. ನಮ್ಮ ಸರ್ಕಾರ ರಾಜ್ಯ ಮಟ್ಟದ ಸಚಿವ ಸ್ಥಾನ ಕೊಟ್ಟಿತ್ತು. ಅವರ ಮೇಲೆ ನಾನು ದೊಡ್ಡ ಆಕಾಂಕ್ಷೆ ಇಟ್ಟುಕೊಂಡಿದ್ದೆ. ಪಕ್ಷ ಅವರ ಮೇಲೆ ಅವಲಂಬಿಸಿತ್ತು" ಎಂದು ತಿಳಿಸಿದರು.

"ನಿಷ್ಠಾವಂತ ಕಾರ್ಯಕರ್ತ ಪಕ್ಷಕ್ಕೆ ಸಿಗುವುದು ಬಹಳ ವಿಶೇಷ. ಈಗಲೂ ಕೂಡ ಅನೇಕ ವಿಚಾರಗಳನ್ನು ಅವರ ವಿಚಾರದಲ್ಲಿ ಚಿಂತನೆ ಮಾಡಲಾಗಿತ್ತು. ಎಐಸಿಸಿ ನಮ್ಮ ಕಾರ್ಯದರ್ಶಿಗಳಾಗಿ, ನಮ್ಮ ರಾಜ್ಯ ಮಟ್ಟದ ಪದಾಧಿಕಾರಿಗಳಾಗಿ ಕೆಲಸ ಮಾಡುತ್ತಿದ್ದರು" ಎಂದರು.

"ಅವರ ಕುಟುಂಬದ ದುಃಖ ನೋಡಲು ಆಗುತ್ತಿಲ್ಲ. ಅವರ ತಂದೆ ಕೂಡ ಒಬ್ಬ ಹಿರಿಯ ದೊಡ್ಡ ರಾಜಕಾರಣಿ. ವೈಯಕ್ತಿಕವಾಗಿ ನಮ್ಮೆಲ್ಲರಿಗೂ ಕೂಡ ಬಹಳ ದುಃಖ ಉಂಟಾಗಿದೆ. ಪಕ್ಷದ ಹಾಗೂ ಸರ್ಕಾರದ ಪರವಾಗಿ ಗೌರವ ನಮನ ಸಲ್ಲಿಸುತ್ತೇನೆ.

ಕರ್ನಾಟಕ ಸರ್ಕಾರ ಅವರಿಗೆ ಸರ್ಕಾರಿ ಗೌರವದೊಂದಿಗೆ ಅಂತಿಮ ನಮನ ಸಲ್ಲಿಸಲಾಗುವುದು. ಅವರ ಕುಟುಂಬದವರು ಅಂತಿಮ ಕಾರ್ಯ ಯಾವಾಗ ತೀರ್ಮಾನ ಮಾಡುತ್ತಾರೋ ಆಗ ಗೌರವವನ್ನು ಕೊಡುತ್ತೇವೆ.

ಈ ವಿಚಾರವಾಗಿ ನಾನು ಈಗಾಗಲೇ ಮುಖ್ಯ ಕಾರ್ಯದರ್ಶಿಗಳಿಗೆ ಆದೇಶ ತಿಳಿಸಿದ್ದೇನೆ. ಅವರ ಅಂತ್ಯಕ್ರಿಯೆಯಲ್ಲಿ ನಾನು ಕೂಡ ಭಾಗಿಯಾಗುತ್ತೇನೆ" ಎಂದರು. ಈ ಸಂದರ್ಭದಲ್ಲಿ ಸೂರಜ್ ಹೆಗ್ಡೆ ಅವರು ಪಕ್ಷದ ಸಂಘಟನೆ ಬಲಪಡಿಸುವಲ್ಲಿ ಹಾಗೂ ಯುವ ಕಾರ್ಯಕರ್ತರನ್ನು ಪ್ರೋತ್ಸಾಹಿಸುವಲ್ಲಿ ಸಲ್ಲಿಸಿದ ಕೊಡುಗೆಯನ್ನು ಹಲವು ನಾಯಕರು ಸ್ಮರಿಸಿದರು.

ಸೂರಜ್ ಹೆಗ್ಡೆ ಅವರ ನಿಧನದ ಸುದ್ದಿ ತಿಳಿಯುತ್ತಿದ್ದಂತೆಯೇ ಹಲವು ಕಾಂಗ್ರೆಸ್ ನಾಯಕರು, ಕಾರ್ಯಕರ್ತರು ಹಾಗೂ ಅಭಿಮಾನಿಗಳು ಸಂತಾಪ ಸೂಚಿಸಿದರು. ರಾಜ್ಯ ರಾಜಕೀಯದಲ್ಲಿ ತಮ್ಮದೇ ಆದ ಛಾಪು ಮೂಡಿಸಿದ್ದ ಅವರು, ಎಲ್ಲ ವರ್ಗದ ಜನರೊಂದಿಗೆ ಆತ್ಮೀಯ ಸಂಬಂಧ ಹೊಂದಿದ್ದರು.

ಅವರ ಅಗಲಿಕೆಯಿಂದ ಕಾಂಗ್ರೆಸ್ ಪಕ್ಷಕ್ಕೆ ಅಪಾರ ನಷ್ಟ ಉಂಟಾಗಿದ್ದು, ಅವರ ಸರಳತೆ, ನಿಷ್ಠೆ ಹಾಗೂ ಸಂಘಟನಾ ಸಾಮರ್ಥ್ಯ ಸದಾ ಕಾರ್ಯಕರ್ತರ ನೆನಪಿನಲ್ಲಿ ಉಳಿಯಲಿದೆ ಎಂದು ಸಿಎಂ ಡಿ.ಕೆ. ಶಿವಕುಮಾರ್ ಹೇಳಿದರು.

## ಸುರಾಜ್ ಬಿಸ್ವಾಸ್ ಯಶಸ್ಸಿನ ಪಯಣ

ಬೆಂಗಳೂರು

ಜೀವನದಲ್ಲಿ ಯಶಸ್ಸು ಸಾಧಿಸಲು ಶ್ರೀಮಂತ ಹಿನ್ನೆಲೆ ಅಥವಾ ವಿಶೇಷ ಸೌಲಭ್ಯಗಳೇ ಬೇಕೆಂದಿಲ್ಲ ಎಂಬುದಕ್ಕೆ ಯುವ ಉದ್ಯಮಿ ಸುರಾಜ್ ಬಿಸ್ವಾಸ್ ಜೀವಂತ ಉದಾಹರಣೆ.

ಕಾಲೇಜು ದಿನಗಳಲ್ಲಿ ಆಹಾರ ವಿತರಣೆ ಸೇವೆಯಲ್ಲಿ ಕೆಲಸ ಮಾಡುತ್ತಿದ್ದ ಯುವಕನೊಬ್ಬ ಇಂದು ಕೃತಕ ಬುದ್ಧಿಮತ್ತೆ (ಎಐ) ಕ್ಷೇತ್ರದಲ್ಲಿ ಗಮನ ಸೆಳೆದಿರುವ ಸ್ಟಾರ್ಟ್‌ಅಪ್ ಸಂಸ್ಥೆಯ ಸಂಸ್ಥಾಪಕರಾಗಿ ಹೊರಹೊಮ್ಮಿದ್ದಾರೆ.

ಸಾಧಾರಣ ಕುಟುಂಬದಲ್ಲಿ ಜನಿಸಿದ ಸುರಾಜ್ ಬಿಸ್ವಾಸ್ ಅವರ ತಂದೆ ದಿನಗೂಲಿ ಕಾರ್ಮಿಕರಾಗಿದ್ದರು. ಮಗ ವೈದ್ಯನಾಗಬೇಕೆಂಬ ಕನಸನ್ನು ತಂದೆ ಕಂಡಿದ್ದರೂ, ಕುಟುಂಬದ ಆರ್ಥಿಕ ಪರಿಸ್ಥಿತಿಯು ಸುರಾಜ್ ಅವರನ್ನು ಬೇರೆ ದಾರಿಯತ್ತ ಕೊಂಡೊಯ್ದಿತು. ಕಾಲೇಜು ಶಿಕ್ಷಣ ಮುಂದುವರಿಸಲು ಹಾಗೂ ಬೆಂಗಳೂರಿನಲ್ಲಿ ಜೀವನ ನಿರ್ವಹಿಸಲು ಹಣದ ಅವಶ್ಯಕತೆ ಎದುರಾದಾಗ, 2019ರಲ್ಲಿ ಪದವಿ ವ್ಯಾಸಂಗ ಮಾಡುತ್ತಿದ್ದಾಗಲೇ ಅವರು ಜೊಮ್ಯಾಟೊ ಸಂಸ್ಥೆಯಲ್ಲಿ ಡೆಲಿವರಿ ಪಾರ್ಟ್‌ನರ್ ಆಗಿ ಕೆಲಸ ಆರಂಭಿಸಿದರು.

ಆರಂಭದಲ್ಲಿ ಕೇವಲ ಕಾಲೇಜು ಶುಲ್ಕ ಮತ್ತು ದೈನಂದಿನ ಖರ್ಚುಗಳನ್ನು ನಿರ್ವಹಿಸುವ ಉದ್ದೇಶದಿಂದ ಕೈಗೊಂಡ ಕೆಲಸ, ನಂತರ ಅವರ ಜೀವನದ ತಿರುವುಬಿಂದುವಾಯಿತು. ಡೆಲಿವರಿ ಕೆಲಸದ ಮೂಲಕ ತಿಂಗಳಿಗೆ 40 ಸಾವಿರದಿಂದ 50 ಸಾವಿರ ರೂಪಾಯಿವರೆಗೆ ಸಂಪಾದಿಸುತ್ತಿದ್ದ ಸುರಾಜ್, ತಮ್ಮ ಶಿಕ್ಷಣಕ್ಕೂ ಸಮಯ ಮೀಸಲಿಡಲು ಸಾಧ್ಯವಾಗುತ್ತಿತ್ತು. ಕೆಲಸದ ಸಮಯವನ್ನು ತಾವೇ ನಿರ್ವಹಿಸಬಹುದಾಗಿದ್ದರಿಂದ, ಡೆಲಿವರಿಗಳ ನಡುವೆ ಸಿಗುತ್ತಿದ್ದ ಬಿಡುವಿನ ಸಮಯವನ್ನು ಅವರು ಹೊಸ ಕೌಶಲ್ಯಗಳನ್ನು ಕಲಿಯಲು ಬಳಸಿಕೊಳ್ಳಲು ಆರಂಭಿಸಿದರು.

ಯಾವುದೇ ವಿಶೇಷ ತರಬೇತಿ ಅಥವಾ ದುಬಾರಿ ಕೋರ್ಸ್‌ಗಳ ನೆರವಿಲ್ಲದೆ, ಪ್ರೋಗ್ರಾಮಿಂಗ್ ಮತ್ತು ಕೃತಕ ಬುದ್ಧಿಮತ್ತೆ ತಂತ್ರಜ್ಞಾನಗಳನ್ನು ಅಧ್ಯಯನ ಮಾಡತೊಡಗಿದರು. ಹಗಲು ಡೆಲಿವರಿ ಕೆಲಸ ಮತ್ತು ರಾತ್ರಿ ಕಲಿಕೆಯ ಮೂಲಕ ತಮ್ಮ ಜ್ಞಾನವನ್ನು ವಿಸ್ತರಿಸಿಕೊಂಡರು.

ವರ್ಷಗಳ ಪರಿಶ್ರಮ ಮತ್ತು ನಿರಂತರ ಕಲಿಕೆಯ ಫಲವಾಗಿ, ಅವರು "ಅಸೆಸ್ಲಿ" ಎಂಬ ಎಐ ಆಧಾರಿತ ಸ್ಟಾರ್ಟ್‌ಅಪ್ ಸಂಸ್ಥೆಯನ್ನು ಆರಂಭಿಸಿದರು. ಇಂದಿಗೆ ಈ ಸಂಸ್ಥೆ ತಂತ್ರಜ್ಞಾನ ಕ್ಷೇತ್ರದಲ್ಲಿ ವೇಗವಾಗಿ ಬೆಳೆಯುತ್ತಿದ್ದು, ಸುರಾಜ್ ಬಿಸ್ವಾಸ್ ಯುವ ಉದ್ಯಮಿಗಳಿಗೆ ಮಾದರಿಯಾಗಿ ಹೊರಹೊಮ್ಮಿದ್ದಾರೆ.

# ಕರ್ನಾಟಕದಲ್ಲಿ 4 ಹೊಸ ಶಾಖೆಗಳು ಸೇರಿದಂತೆ 4 ರಾಜ್ಯಗಳಲ್ಲಿ 8 ಹೊಸ ಶಾಖೆಗಳನ್ನು ತೆರೆದ ಬಂಧನ್ ಬ್ಯಾಂಕ್

ಬೆಂಗಳೂರು: ಬಂಧನ್ ಬ್ಯಾಂಕ್ ಇಂದು ಕರ್ನಾಟಕದಲ್ಲಿ 4 ಹೊಸ ಶಾಖೆಗಳನ್ನು, ಭಾರತದ 4 ರಾಜ್ಯಗಳಲ್ಲಿ 8 ಹೊಸ ಶಾಖೆಗಳನ್ನು ತೆರೆದಿರುವುದಾಗಿ ಘೋಷಿಸಿದೆ. ಬ್ಯಾಂಕ್ ದೆಹಲಿಯಲ್ಲಿ 2, ಉತ್ತರ ಪ್ರದೇಶ ಮತ್ತು ಹರಿಯಾಣದಲ್ಲಿ ತಲಾ 1 ಶಾಖೆ ತೆರೆದಿದೆ.

ಕರ್ನಾಟಕದಲ್ಲಿ ಹೊಸ ಶಾಖೆಗಳು ಜುಬಿಲಿ ಸರ್ಕಲ್ ಶಾಖೆ(ಧಾರವಾಡ, ಕರ್ನಾಟಕ), ಸಿದ್ಧಾರ್ಥ ನಗರ ಶಾಖೆ(ಮೈಸೂರು, ಕರ್ನಾಟಕ), ಶಿವರಾಂಪೇಟೆ ಶಾಖೆ(ಮೈಸೂರು, ಕರ್ನಾಟಕ), ಜಕ್ಕೂರು ಶಾಖೆ(ಬೆಂಗಳೂರು, ಕರ್ನಾಟಕ) ತೆರೆಯಲಾಗಿದೆ. ಈ ಹೊಸ ಶಾಖೆಗಳ ಉದ್ಘಾಟನೆಯೊಂದಿಗೆ, ಕರ್ನಾಟಕದಲ್ಲಿ ಬ್ಯಾಂಕಿನ ಒಟ್ಟು ಬ್ಯಾಂಕಿಂಗ್ ಶಾಖೆಗಳ ಸಂಖ್ಯೆ 178ಕ್ಕೆ ತಲುಪಿದೆ. ಎಲ್ಲಾ ಹೊಸ ಶಾಖೆಗಳು ರಾಜ್ಯದ ನಗರ ಮತ್ತು ಅರೆ-ನಗರ ಪ್ರದೇಶಗಳಿಗೆ ಸೇವೆ ಸಲ್ಲಿಸಲಿವೆ. ದಕ್ಷಿಣ ಭಾರತದಲ್ಲಿ ಶಾಖೆಗಳ ಜಾಲದ ವಿಸ್ತರಣೆಯು ವ್ಯವಹಾರ ವೈವಿಧ್ಯೀಕರಣ, ಬಲವಾದ ರಾಷ್ಟ್ರೀಯ ಉಪಸ್ಥಿತಿ ಮತ್ತು ಆಳವಾದ ಪ್ರಾದೇಶಿಕ ಕೇಂದ್ರಗಳಲ್ಲಿ ವ್ಯವಹಾರ ಆರಂಭಿಸುವ ಬ್ಯಾಂಕಿನ ಕಾರ್ಯತಂತ್ರ ಗಮನವನ್ನು ಎತ್ತಿ ತೋರಿಸುತ್ತದೆ. ಹೊಸ ಶಾಖೆಗಳು ಬ್ಯಾಂಕ್ ಗ್ರಾಹಕರ ವೈವಿಧ್ಯಮಯ ಆರ್ಥಿಕ ಅಗತ್ಯಗಳನ್ನು ಉತ್ತಮವಾಗಿ ಪೂರೈಸಲು ಅನುವು ಮಾಡಿಕೊಡುತ್ತದೆ. ತನ್ನ ಉಪಸ್ಥಿತಿಯ ಹೆಜ್ಜೆಗುರುತು ವಿಸ್ತರಿಸುವ ಮೂಲಕ ಬ್ಯಾಂಕ್, ತನ್ನ ಗ್ರಾಹಕರಿಗೆ ನವೀನ ಬ್ಯಾಂಕಿಂಗ್ ಪರಿಹಾರಗಳಿಗೆ ಪ್ರವೇಶ ಹೆಚ್ಚಿಸುತ್ತದೆ.

ಈ ಸಂದರ್ಭದಲ್ಲಿ ಮಾತನಾಡಿದ ಬಂಧನ್ ಬ್ಯಾಂಕಿನ ಕಾರ್ಯ ನಿರ್ವಾಹಕ ನಿರ್ದೇಶಕ ಮತ್ತು ಮುಖ್ಯ ವ್ಯವಹಾರ ಅಧಿಕಾರಿ(ಇಡಿ ಮತ್ತು ಸಿಬಿಒ) ಶ್ರೀ ರಾಜಿಂದರ್ ಕುಮಾರ್ ಬಬ್ಬರ್ , "4 ರಾಜ್ಯಗಳಲ್ಲಿ 8 ಹೊಸ ಶಾಖೆಗಳನ್ನು ತೆರೆದಿರುವುದಾಗಿ ಘೋಷಿಸಲು ನಮಗೆ ಸಂತೋಷವಾಗಿದೆ, ವಿಶೇಷವಾಗಿ ದಕ್ಷಿಣ ಭಾರತದಲ್ಲಿ ನಮ್ಮ ಶಾಖೆಗಳ ಜಾಲವನ್ನು ಬಲಪಡಿಸಿ, ಗ್ರಾಹಕರಿಗೆ ಹೆಚ್ಚು ಪರಿಣಾಮಕಾರಿಯಾಗಿ ಸೇವೆ ಸಲ್ಲಿಸಲು ಸಹಾಯ ಮಾಡುತ್ತದೆ.

ನಮ್ಮ ಬ್ಯಾಂಕಿಂಗ್ ಜಾಲ ಬೆಳೆದಂತೆ, ನಾವು ಸುಸ್ಥಿರ ವ್ಯವಹಾರ ವಿಸ್ತರಣೆಗೆ ಮತ್ತು ವಿಕಸನವಾಗುತ್ತಿರುವ ಗ್ರಾಹಕರ ನಿರೀಕ್ಷೆಗಳನ್ನು ಪೂರೈಸುವ ನವೀನ, ಹೊಂದಿಕೊಳ್ಳುವ ಬ್ಯಾಂಕಿಂಗ್ ಪರಿಹಾರಗಳನ್ನು ನೀಡಲು ಬದ್ಧರಾಗಿದ್ದೇವೆ " ಎಂದು ಹೇಳಿದರು. ಬಂಧನ್ ಬ್ಯಾಂಕ್ ಪ್ರಸ್ತುತ ದೇಶದ 36 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಪೈಕಿ 35 ಕಡೆ ಹರಡಿದೆ.

ಭಾರತದಲ್ಲಿ 6,380ಕ್ಕೂ ಹೆಚ್ಚಿನ ಬ್ಯಾಂಕಿಂಗ್ ಶಾಖೆಗಳ ಬಲಿಷ್ಠ ಜಾಲವನ್ನು ಹೊಂದುವ ಮೂಲಕ ಬ್ಯಾಂಕ್ 3.2 ಕೋಟಿಗೂ ಹೆಚ್ಚಿನ ಗ್ರಾಹಕರಿಗೆ ಸೇವೆ ಸಲ್ಲಿಸುತ್ತಿದೆ.

# ಬಾಲಕಾರ್ಮಿಕ ವಿರೋಧಿ ಮಾಸಾಚರಣೆ



ಬೆಂ.ಗ್ರಾ ಜಿಲ್ಲೆ

"ಬಾಲಕಾರ್ಮಿಕ ವಿರೋಧಿ ಮಾಸಾಚರಣೆ" ಅಂಗವಾಗಿ ಜೂನ್–01 ರಿಂದ ಜೂನ್–30 ರವರೆಗೆ ಜಿಲ್ಲೆಯಾದ್ಯಂತ ಬಾಲಕಾರ್ಮಿಕ ಪದ್ಧತಿ ನಿಷೇಧ ಕಾಯ್ದೆ ಕುರಿತು ಜಾಗೃತಿ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ. ಜಿಲ್ಲಾ ಕಾರ್ಮಿಕ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ರೇಷ್ಮೆ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನೆ ಹಾಗೂ ಮಕ್ಕಳ ಸಹಾಯವಾಣಿ–1098 ಇವರು ಜಂಟಿಯಾಗಿ ದೇವನಹಳ್ಳಿ ತಾಲ್ಲೂಕಿನಲ್ಲಿ ಕಾರ್ಖಾನೆ, ಹೋಟೆಲ್, ಡಾಬಾ, ಗೋದಾಮು ಹಾಗೂ ವಾಣಿಜ್ಯ ಅಂಗಡಿಗಳಿಗೆ ಅನಿರೀಕ್ಷಿತವಾಗಿ ಭೇಟಿ ನೀಡಿ, ತಪಾಸಣೆಯನ್ನು ನಡೆಸುವ ಜೊತೆಗೆ ಯಾವುದೇ ಬಾಲಕಾರ್ಮಿಕರನ್ನು ಕೆಲಸಕ್ಕೆ ತಗೆದುಕೊಂಡು

ದುಡಿಸಿಕೊಳ್ಳದಂತೆ ಮಾಲೀಕರಲ್ಲಿ ಕಾಯ್ದೆ ಕುರಿತು ಅರಿವು ಮೂಡಿಸಲಾಯಿತು.

# ಮತದಾರರ ಪಟ್ಟಿ ಪರಿಷ್ಕರಣೆಗೆ ಸಾರ್ವಜನಿಕರ ಸಹಕಾರ ಅಗತ್ಯ: ತಹಶೀಲ್ದಾರ್ ರೂಪ

ಮಾಲೂರು

ತಾಲ್ಲೂಕಿನ ಸಾರ್ವಜನಿಕರು ಜೂನ್ 20 ರಿಂದ ನಡೆಯುವ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಸಂಬಂಧವಾಗಿ ಅಧಿಕಾರಿಗಳಿಗೆ ಸರಿಯಾದ ಮಾಹಿತಿ ನೀಡವ ಮೂಲಕ ಸಹಕರಿಸವಂತೆ ತಹಶೀಲ್ದಾರ್ ಎಂ.ವಿ.ರೂಪ ತಿಳಿಸಿದರು.

ನಗರದ ತಾಲೂಕು ಕಚೇರಿಯ ತಹಶೀಲ್ದಾರ್ ಸಭಾಂಗಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಭಾರತ ಚುನಾವಣಾ ಆಯೋಗದ ಪ್ರಕಟಣೆಯಂತೆ ಅರ್ಹತಾ ದಿನಾಂಕ 01/10/2026ಕ್ಕೆ ಅನುಗುಣವಾಗಿ ಕರ್ನಾಟಕ ರಾಜ್ಯದಲ್ಲಿ ಮತದಾರ ಪಟ್ಟಿಯ ವಿಶೇಷ ಸಮಗ್ರ ಪರೀಕ್ಷೆ 2020 ರನ್ನು ನಡೆಸಲು ನಿರ್ದೇಶಿಸಿದೆ. ಭಾರತ ಚುನಾವಣಾ ಆಯೋಗವು ಮತದಾರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ 2026 ರನ್ನು ಕರ್ನಾಟಕದಲ್ಲಿ ಮೂರನೇ ಹಂತದಲ್ಲಿ ನಡೆಸುತ್ತಿದೆ ಎಸ್‌ಐಆರ್ ಕುರಿತು ರಾಜಕೀಯ ಪಕ್ಷಗಳು ಮುಖಂಡರುಗಳ ಮುಖಾಂತರ ಚುನಾವಣಾ ಅಯೋಗವು ಹೊರಡಿಸಿರುವ ಕರಡು ಮತದಾರರ ಪಟ್ಟಿಯನ್ನು ನಿಡಲಾಗಿದೆ. ಈಗಾಗಲೇ ವಿಧಾನಸಭಾ ಕ್ಷೇತ್ರದಲ್ಲಿ 241 –ಮತಗಟ್ಟೆಗಳಿದ್ದು, ಮತದಾರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಯಶಸ್ವಿಗಾಗಿ ಈಗಾಗಲೇ ಬಿ ಎಲ್ ಓಗಳಿಗೆ ಹಾಗೂ ಮೇಲ್ವಿಚಾರಕರಿಗೆ ತಾಲೂಕು ಮಟ್ಟದ ಅಧಿಕಾರಿಗಳಿಗೆ ತರಬೇತಿ ಕಾರ್ಯಗಾರ ನಡೆಸಲಾಗಿದೆ. ರಾಜಕೀಯ ಪಕ್ಷಗಳ ಬಿ ಎಲ್ ಎ ಗಳಿಗೆ ರಾಜಕೀಯ ಪಕ್ಷಗಳ ಮುಖಂಡರಿಗೆ ಎಸ್‌ಐಆರ್ ಕುರಿತು ಜಾಗೃತಿ ಮೂಡಿಸುವ ಸಭೆಗಳನ್ನು ನಡೆಸಲಾಗಿದೆ.

ಭಾರತೀಯ ನಾಗರೀಕನಾಗಿರುವುದು ಮತ್ತು ಅರ್ಹತಾ ದಿನಾಂಕ–01–10–2026ಕ್ಕೆ 18 ವರ್ಷ ವಯಸ್ಸಿಗಿಂತ ಕಡಿಮೆ ಇಲ್ಲದವನಾಗಿರುವ ಕ್ಷೇತ್ರದಲ್ಲಿ ಸಾಮಾನ್ಯ ನಿವಾಸಿಯಾಗಿರಬೇಕು. ಮತ್ತು ಯಾವುದೇ ಕಾನೂನಿನ ಮೇರೆಗೆ ಅನ್ಯತಾ ಅನರ್ಹನಾಗಿಲ್ಲದ ಪ್ರತಿಯೊಬ್ಬ ವ್ಯಕ್ತಿಯು ಮತದಾರರ ಪಟ್ಟಿಯಲ್ಲಿ ಹೆಸರನ್ನು ನೊಂದಾಯಿಸಿಕೊಳ್ಳಲು ಹಕ್ಕುಳ್ಳವನಾಗಿರುತ್ತಾನೆ. ಕರ್ನಾಟಕ ರಾಜ್ಯದಲ್ಲಿ ಈ ಹಿಂದೆ 2002 ರಲ್ಲಿ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ನಡೆಸಲಾಗಿತ್ತು. ಕೆಲವು ಮತದಾರರು ಒಂದು ಸ್ಥಳದಲ್ಲಿ ಹೆಸರು ನೊಂದಾಯಿಸಿಕೊಂಡು ನಂತರ ಬೇರೆಡೆಗೆ ಸ್ಥಳಾಂತರಗೊಂಡು ಹಿಂದಿನ ನಿವಾಸ ಸ್ಥಳದಲ್ಲಿನ ಮತದಾರರ ಪಟ್ಟಿಯಲ್ಲಿರುವ ತಮ್ಮ ಹೆಸರನ್ನು ತೆಗೆದು ಹಾಕಿಸದೇ ಸ್ಥಳಾಂತರಗೊಂಡ ಸ್ಥಳದಲ್ಲಿಯೂ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳುವುದರಿಂದ ಹೆಸರುಗಳು ಮತದಾರರ ಪಟ್ಟಿಯಲ್ಲಿ ಹೆಚ್ಚುವರಿ ನಮೂದಾಗುತ್ತದೆ.

ಮತದಾರರ ಪಟ್ಟಿಯಲ್ಲಿ ಎಲ್ಲಾ ಅರ್ಹ ನಾಗರಿಕರು ಸೇರ್ಪಡೆಗೊಂಡಿರುವುದನ್ನು ಮತ್ತು ಯಾರೇ ಅರ್ಹ ನಾಗರೀಕರನ್ನು ಮತದಾರರ ಪಟ್ಟಿಯಿಂದ ಕೈ ಬಿಟ್ಟಿರುವುದನ್ನು ಖಚಿತ ಪಡಿಸಿಕೊಳ್ಳುವುದು. ಜೂನ್ 20 ರಿಂದ 29 ರವರೆಗೆ ಎಸ್‌ಐಆರ್ ಕುರಿತಂತೆ ಸಿದ್ಧತೆ ಮತ್ತು ಬಿ ಎಲ್ ಓ ಗಳಿಗೆ ತರಬೇತಿ ಜೂನ್ 30 ರಿಂದ ಜುಲೈ 29 ರವರೆಗೆ ಮತಗಟ್ಟೆ ಮಠದ ಅಧಿಕಾರಿಗಳಿಂದ ಮನೆಮನೆ ಭೇಟಿ ಜುಲೈ 29 ರೊಳಗೆ ಮತಗಟ್ಟೆಗಳ ರ್‍ಯಾಷನಲೈಜೇಷನ್, ಆಗಸ್ಟ್ 5 ಕರಡು ಮತದಾರರ ಪಟ್ಟಿಯ ಪ್ರಕಟಣೆ ಆಗಸ್ಟ್ 5 ರಿಂದ ಸೆಪ್ಟಂಬರ್ 4ರ ವರೆಗೆ ಹಕ್ಕು ಮತ್ತು ಆಕ್ಷೇಪಣಾ ಅರ್ಜಿಗಳ ಸಲ್ಲಿಕೆಯ ಅವಧಿ ಆಗಸ್ಟ್ 5ದರಿಂದ ಅಕ್ಟೋಬರ್ 3ರವರೆಗೆ ನೋಟಿಸ್ ಅಂತ್ಯ ಹಾಗೂ ಹಕ್ಕು ಮತ್ತು ಆಕ್ಷೇಪಣೆಗಳ ವಿಲೇವಾರಿ ಅಂತ್ಯ ಅಕ್ಟೋಬರ್ 7ರಂದು ಅಂತಿಮ ಮತದಾರರ ಪಟ್ಟಿಗಳ ಪ್ರಕಟಣೆ ಮಾಡಲಾಗುವುದು ಸಾರ್ವಜನಿಕರು ಮತಗಟ್ಟೆ ಮಟ್ಟದ ಅಧಿಕಾರಿಗಳು ಮನೆಮನೆಗೆ ಭೇಟಿ ನೀಡಿದ ವೇಳೆ ಮತದಾರ ಪಟ್ಟಿಯಂತೆ ನಮೂನೆಯಲ್ಲಿ ಭರ್ತಿ ಮಾಡಿ ಬಿ ಎಲ್ ಓಗಳಿಗೆ ನೀಡಬೇಕು ಎಂದರು.

# ಕೆರೆ ಸಂರಕ್ಷಣೆಯ ಪಾಠ ಕಲಿತ ನಿವೇದಿತಾ ಶಾಲಾ ಮಕ್ಕಳು

ದೊಡ್ಡಬಳ್ಳಾಪುರ

ವಿಶ್ವ ಪರಿಸರ ದಿನದ ಅಂಗವಾಗಿ ನಿವೇದಿತಾ ಇಂಗ್ಲೀಷ್ ಶಾಲೆಯ ಮಕ್ಕಳು ನಾಗರಕೆರೆ ವಿಕ್ಷಣೆ ಮಾಡಿದರು. ಕೆರೆ ಏರಿ ಮೇಲಿನ ಪ್ಲಾಸ್ಟಿಕ್ ತ್ಯಾಜ್ಯ ಸಂಗ್ರಹ ಮಾಡಿ ಸೂಕ್ತ ರೀತಿಯಲ್ಲಿ ವಿಲೇವಾರಿ ಮಾಡಿದರು.ಕೆರೆ ಏರಿ ಮೇಲೆ ಕುಳಿತ ಮಕ್ಕಳು ಶಿಕ್ಷಕರಿಂದ ಪರಿಸರದ ಪಾಠ ಕೇಳಿದರು.

ವಿಶ್ವ ಪರಿಸರ ದಿನದ ಅಂಗವಾಗಿ ನಿವೇದಿತಾ ಇಂಗ್ಲೀಷ ಶಾಲೆ (ರಾಜ್ಯ ಪಠ್ಯ ಕ್ರಮ) ಯ ವಿದ್ಯಾರ್ಥಿಗಳು ವಿಭಿನ್ನವಾಗಿ ಆಚರಣೆ ಮಾಡಿದರು. ದೊಡ್ಡಬಳ್ಳಾಪುರ ನಗರದ ಐತಿಹಾಸಿಕ ನಾಗರಕೆರೆಗೆ ಭೇಟಿ ನೀಡಿದ ವಿದ್ಯಾರ್ಥಿಗಳು ಕೆರೆ ಏರಿ ಮೇಲೆ ಸಸಿ ನೆಡುವ ಮೂಲಕ ಪರಿಸರ ದಿನಾಚರಣೆ ಆಚರಿಸಿದರು.

ಶಿಕ್ಷಕರ ಜೊತೆ ಕೆರೆಯ ವೀಕ್ಷಣೆ ಜೊತೆಗೆ ಕೆರೆಯ ಏರಿ, ಕೊಡಿ, ಕೆರೆಗೆ ಹರಿದು ಬರುವ ನೀರಿನ ಮೂಲ, ಕೆರೆ ಮತ್ತು ನೀರಿನ ಮಹತ್ವ ಈ ಕುರಿತ ಮಾಹಿತಿಯನ್ನ ವಿಜ್ಞಾನ ಶಿಕ್ಷಕರಿಂದ ಅಲಿಸಿದರು.

ನೀರಿನ ಪ್ರಮುಖ ಆಕರವಾದ ಕೆರೆ ನೀರು ಇವತ್ತು ನಗರೀಕರಣ ಮತ್ತು ಕೈಗಾರಿಕರಣದಿಂದ ಕಲುಷಿತವಾಗುತ್ತಿದೆ. ಕಲುಷಿತ ನೀರಿನಿಂದಾಗಿ ಕೆರೆಯಲ್ಲಿನ ಜಲಚರ ಜೀವಿಗಳ ಪ್ರಾಣಕ್ಕೆ ಕಂಠಕವಾಗಿದೆ. ಅಂತರ್ಜಲ ಸಹ ಕಲುಷಿತವಾಗುತ್ತಿರುವುದರಿಂದ ಕುಡಿಯುವ ನೀರು ವಿಷವಾಗುತ್ತಿದೆ.ಉತ್ತಮ ಆರೋಗ್ಯ ಮತ್ತು ಸ್ವಚ್ಛ ಪರಿಸರಕ್ಕಾಗಿ ನಾವು ಕೆರೆಗಳ ಸಂರಕ್ಷಣೆ ಮಾಡುವುದು ಅಗತ್ಯವಾಗಿದೆ ಮತ್ತು ಕೆರೆ ನೀರು ಮಾಲಿನ್ಯವಾಗದಂತೆ ಕಠಿಣ ಕಾನೂನು ಕ್ರಮ ತೆಗೆದುಕೊಳ್ಳ ಬೇಕಿದೆ ಎಂದು ಶಿಕ್ಷಕರು ವಿದ್ಯಾರ್ಥಿಗಳಿಗೆ ಪರಿಸರದ ಅರಿವು ಮೂಡಿಸಿದರು.

ಕಾರ್ಯಕ್ರಮದಲ್ಲಿ ನಿವೇದಿತಾ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಜಿ. ರಾಜಣ್ಣ, ಪ್ರಾಮ್ಶುಪಾಲ ಸಂತೋಷ್, ಉಪ ಪ್ರಾಮ್ಶುಪಾಲೆ ಆಶಾ ಸಂತೋಷ್ ಸೇರಿದಂತೆ ಶಾಲೆಯ ಬೋಧಕ ವರ್ಗ, ಸಿಬ್ಬಂದಿ ಹಾಜರಿದ್ದರು.

# ಅಪರ ಆಯುಕ್ತರಿಂದ ಸರ್ಕಾರಿ ಜಾಗ ಸರ್ವೆಗೆ ಸೂಚನೆ

ಬೆಂಗಳೂರು

ಬೆಂಗಳೂರು ದಕ್ಷಿಣ ನಗರ ಪಾಲಿಕೆ ಹೊರವಲಯದ ಬೇಗೂರು ಹೋಬಳಿ ವ್ಯಾಪ್ತಿಯ ವಿಟ್ಟಸಂದ್ರ ಗ್ರಾಮದಲ್ಲಿರುವ ಪಾಲಿಕೆಯ ಕಸ ವರ್ಗಾವಣೆ ಕೇಂದ್ರಕ್ಕೆ ಪಾಲಿಕೆಯ ಅಪರ ಆಯುಕ್ತರಾದ ಡಾ. ನವೀನ್ ಕುಮಾರ್ ರಾಜು ಅವರು ಸೋಮವಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ವಿಟ್ಟಸಂದ್ರ ಗ್ರಾಮದಲ್ಲಿ ಸುಮಾರು 65 ಎಕರೆ ವಿಸ್ತೀರ್ಣದ ಸರ್ಕಾರಿ ಜಾಗವಿದ್ದು, ಅದರಲ್ಲಿ 4 ಎಕರೆ ಪ್ರದೇಶವನ್ನು ಕಸ ವರ್ಗಾವಣೆ ಕೇಂದ್ರಕ್ಕಾಗಿ ಗುರುತಿಸಬೇಕಾಗಿದೆ.



ಈ ಹಿನ್ನೆಲೆಯಲ್ಲಿ ಸಂಪೂರ್ಣ ಪ್ರದೇಶಕ್ಕೆ ತಕ್ಷಣವೇ ಗಡಿ ಗುರುತಿಸಿ ಸರ್ವೇ ಕಾರ್ಯ ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಅಪರ ಆಯುಕ್ತರು ಸೂಚನೆ ನೀಡಿದರು.

ಕಸ ವರ್ಗಾವಣೆ ಕೇಂದ್ರದ ಸುತ್ತಮುತ್ತಲಿನ ಪ್ರದೇಶದಲ್ಲಿ ಹೂಳು ಹಾಗೂ ವಾಣಿಜ್ಯ ಮಳಿಗೆಗಳ ತ್ಯಾಜ್ಯವನ್ನು ಕೆಲವರು ಅಕ್ರಮವಾಗಿ ಸುರಿದಿರುವುದನ್ನು ಗಮನಿಸಿದ ಅಪರ ಆಯುಕ್ತರು, ಅನಧಿಕೃತ ವ್ಯಕ್ತಿಗಳ ಪ್ರವೇಶ ತಡೆಯಲು ಸ್ಥಳಕ್ಕೆ ಸೂಕ್ತ ಭದ್ರತಾ ವ್ಯವಸ್ಥೆ ಕಲ್ಪಿಸುವಂತೆ ಸೂಚಿಸಿದರು. ಜೊತೆಗೆ, ಈ ಪ್ರದೇಶದಲ್ಲಿ ಅಕ್ರಮವಾಗಿ ಹೂಳು ಹಾಗೂ ವಾಣಿಜ್ಯ ತ್ಯಾಜ್ಯ ಸುರಿಯುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಈ ಕಸ ವರ್ಗಾವಣೆ ಕೇಂದ್ರದಲ್ಲಿ ಸುಸಜ್ಜಿತ ಪ್ಲಾಂಟ್ ಹಾಗೂ ಕಾಂಪೋಸ್ಟ್ ಕೇಂದ್ರ ನಿರ್ಮಾಣ ಮಾಡಲು ಸುಮಾರು 2 ಎಕರೆ ಜಾಗದ ಅಗತ್ಯವಿದ್ದು, ಅದಕ್ಕೆ ಪೂರಕವಾದ ಸಿದ್ಧತೆಗಳಿಗಾಗಿ ಕ್ರಿಯಾ ಯೋಜನೆ ರೂಪಿಸಲಾಗುತ್ತಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು. ಕಾಂಪೋಸ್ಟ್ ಕೇಂದ್ರ ನಿರ್ಮಾಣ ಸಂಬಂಧ ತ್ವರಿತವಾಗಿ ಕ್ರಮ ಕೈಗೊಳ್ಳುವಂತೆ ಸ್ಥಳದಲ್ಲಿದ್ದ ಅಧಿಕಾರಿಗಳಿಗೆ ಅಪರ ಆಯುಕ್ತರು ಸೂಚನೆ ನೀಡಿದರು.

ಸ್ಥಳ ಪರಿಶೀಲನೆ ವೇಳೆ ಡಿಜಿಎಂ ತನುಜಾ, ಎಜಿಎಂ ನೀಲಕಂಠ ಹಾಗೂ ಶ್ವೇತಾ, ಎಇಇ ವೀರೇಶ್ ಹಲದಕಟ್ಟಿ, ಬೇಗೂರು ವಿಭಾಗದ ಸಹಾಯಕ ಕಂದಾಯ ಅಧಿಕಾರಿ ನಾಗಭೂಷಣ್ ಸೇರಿದಂತೆ ಇತರ

# ಮುಂಗಾರು ಆಗಮನ.. ಚುರುಕು ಗೊಂಡ ಕೃಷಿ ಚಟುವಟಿಕೆ

ದೊಡ್ಡಬಳ್ಳಾಪುರ

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಕೃಷಿ ಚಟುವಟಿಕೆಗಳು ಬಿರುಸುಗೊಂಡಿದ್ದು, ರೈತರು ಡಿಎಪಿ ರಸಗೊಬ್ಬರ ಬದಲಿಗೆ ಸಂಯುಕ್ತ ರಸಗೊಬ್ಬರ ಬಳಕೆ ಮಾಡಲು ಕೃಷಿ ಇಲಾಖೆ ಸಲಹೆ ನೀಡಲಾಗಿದೆ.

ಸಸ್ಯಗಳ ಬೆಳವಣಿಗೆಗೆ 17 ಪೋಷಕಾಂಶಗಳ ಅಗತ್ಯವಿದೆ. ಅವುಗಳಲ್ಲಿ ಗಾಳಿ ಮತ್ತು ನೀರಿನ ಮೂಲಕ ಇಂಗಾಲ, ಜಲಜನಕ ಮತ್ತು ಆಮ್ಲಜನಕವು ಸ್ವಾಭಾವಿಕವಾಗಿ ದೊರೆಯಲಿದ್ದು, ಉಳಿದ 14 ಪೋಷಕಾಂಶಗಳಿಗೆ ಸಂಯುಕ್ತ ರಸಗೊಬ್ಬರ ಬಳಕೆ ಮಾಡಬೇಕು ಎಂದು ಮಾಹಿತಿ ನೀಡುವುದರ ಜೊತೆಯಲ್ಲಿ ಸಾರಜನಕ, ರಂಜಕ, ಪೊಟ್ಯಾಷ್, ಕ್ಯಾಲ್ಸಿಯಂ, ಮೆಗ್ನಿಷಿಯಂ, ಗಂಧಕ, ಕಬ್ಬಿಣ, ಜಿಂಕ್, ಬೋರಾನ್, ತಾಮ್ರ ಮ್ಯಾಂಗನೀಸ್, ಮಾಲಿಬಿನಂ ಕ್ಲೋರಿನ್ ಹಾಗೂ ನಿಕ್ಕಲ್ ಅಗತ್ಯವಿದ್ದು, ಇವುಗಳಲ್ಲಿ ಯಾವುದೇ ಒಂದು ಪೋಷಕಾಂಶದ ಕೊರತೆಯಾದರೂ ಸಸ್ಯಗಳ ಬೆಳವಣಿಗೆ ಮತ್ತು ಅಭಿವೃದ್ಧಿಯ ಮೇಲೆ ಪರಿಣಾಮ ಬೀರಲಿದ್ದು, ಇಳುವರಿ ಕುಂಠಿತವಾಗುತ್ತದೆ. ಆದ್ದರಿಂದ ಬಿತ್ತನೆಗೆ ಕೊಟ್ಟಿಗೆ ಗೊಬ್ಬರ/ಹಸಿರೆಲೆ ಗೊಬ್ಬರ/ಹಿಂಡಿ ಇತ್ಯಾದಿ ಸಾವಯವ ಗೊಬ್ಬರ ಬಳಕೆ ಮಾಡಬೇಕು. ಇದರಿಂದ ಇಳುವರಿ ಹೆಚ್ಚಾಗಲಿದೆ.

ಬಿತ್ತನೆ ಸಮಯದಲ್ಲಿ ಬೆಳೆಗಳಿಗೆ ಶಿಫಾರಸ್ಸಿನಂತೆ ಸಮತೋಲನಾತ್ಮಕ ರಸಗೊಬ್ಬರ ಬಳಸುವುದರಿಂದ ಸರಿದೂಗಿಸಬಹುದು. ಇದಕ್ಕಾಗಿ ರೈತರು ಕೇವಲ



ಒಂದೇ ಸಂಸ್ಥೆಯ ಅಥವಾ ಒಂದೇ ವಿಧದ ರಸಗೊಬ್ಬರಕ್ಕೆ ಆದ್ಯತೆ ನೀಡದೆ ಮಾರುಕಟ್ಟೆಯಲ್ಲಿ ದೊರೆಯುವ ಡಿ.ಎ.ಪಿ ರಸಗೊಬ್ಬರಕ್ಕೆ ಪರ್ಯಾಯವಾಗಿ ಗಂಧಕ ಒದಗಿಸುವ 20:20:0:13 ಹಾಗೂ ಇತರೆ ಸಂಯುಕ್ತ ರಸಗೊಬ್ಬರಗಳಾದ 15:15:15, 10:26:26, 12:32:16, 22:22:11, 17:17:17, 14:28:14, 19:19:19, 20:10:10, 14:35:14 ಸಹ ಬಳಸಬಹುದು. ಬಿತ್ತನೆ ನಂತರ ನ್ಯಾನೋ ಡಿಎಪಿ ಮತ್ತು ನ್ಯಾನೋ ಯೂರಿಯಾ ಪ್ಲಸ್ಗಳನ್ನು ಸಹ ಅವಶ್ಯಕತೆಗೆ ಅನುಗುಣವಾಗಿ ಸಿಂಪರಣೆಯಾಗಿ ಬಳಸಬಹುದು ಎಂದು ತಿಳಿಸಿದೆ.

ಸಾಮಾನ್ಯವಾಗಿ 1 ಹಕ್ಟೇರ್ ರಾಗಿ ಬೆಳೆ ಬೆಳೆಯಲು ಯೂರಿಯಾ ಮತ್ತು ಡಿ.ಎ.ಪಿ ಬಳಸಿದರೆ 1630ರೂ. ಬೇಸಾಯ ವೆಚ್ಚವಾಗುತ್ತದೆ. ರೈತರು ಯೂರಿಯಾ ಹಾಗೂ ಡಿಎಪಿಯನ್ನು ಹೆಚ್ಚಾಗಿ ಬಳಸುತ್ತಿದ್ದು, ಇವುಗಳಲ್ಲಿ ಸಾರಜನಕ ಮತ್ತು ರಂಜಕದ ಅಂಶ ಮಾತ್ರವಿರುತ್ತದೆ. ಆದರೆ ಬೆಳೆಗಳಿಗೆ ರೋಗ ನಿರೋಧಕ ಶಕ್ತಿ ನೀಡಿ ಕಾಳಿನ ತೂಕ ಹೆಚ್ಚಿಸಲು ಅತ್ಯಂತ ಅವಶ್ಯಕವಾಗಿರುವ ಪೊಟ್ಯಾಷ್ ಲಭ್ಯವಿರುವುದಿಲ್ಲ. ಪ್ರತ್ಯೇಕವಾಗಿ ಪೊಟ್ಯಾಷ್ ಪೋಷಕಾಂಶ ಸೇರಿಸಲು 33 ಕೆ.ಜಿ ಎಂಒಪಿ ಬೇಕಾಗುತ್ತದೆ. 33 ಕೆ.ಜಿ ಎಂಒಪಿಗೆ 1132 ರೂ. ವೆಚ್ಚವಾಗುತ್ತದೆ. ಒಟ್ಟಾರೆ ಪ್ರತಿ ಹೆಕ್ಟೇರಿಗೆ 2761 ರೂ. ವೆಚ್ಚವಾಗುತ್ತದೆ.

ಇತರೆ ಸಂಯುಕ್ತ ರಸಗೊಬ್ಬರಗಳಾದ 14:35:14, 11:30:14, 10:26:26 ಬಳಸಿದ್ದಲ್ಲಿ ಎಲ್ಲಾ ಎನ್.ಪಿ.ಕೆ ಪೋಷಕಾಂಶಗಳು ಲಭ್ಯವಿದೆ. ಪ್ರತಿ ಹೆಕ್ಟೇರಿಗೆ 2500ರೂ. ಗಿಂತ ಕಡಿಮೆ ವೆಚ್ಚವಾಗುತ್ತದೆ. ಸಂಯುಕ್ತ ರಸಗೊಬ್ಬರಗಳನ್ನು ಬಳಸುವುದರಿಂದ ಸಸಿಗಳಿಗೆ ಅವಶ್ಯವಿರುವ ಪೊಟ್ಯಾಷ್ ಪೋಷಕಾಂಶವು ಲಭ್ಯವಾಗಿ ಸಸಿಗಳಲ್ಲಿ ಕಿಣ್ವಗಳನ್ನು ಸಕ್ರಿಯಗೊಳಿಸಿ ನೀರು ಮತ್ತು ಪೋಷಕಾಂಶಗಳ ಸಾಗಣೆಗೆ ಸಹಾಯ ಮಾಡುವುದಲ್ಲದೇ ಬರ ಪರಿಸ್ಥಿತಿಯಲ್ಲೂ ಬೆಳೆಗಳನ್ನು ಹಸಿರಾಗಿಡಲು ಸಹಾಯ ಮಾಡುತ್ತದೆ ಹಾಗೂ ಬೆಳೆ ಉತ್ಪಾದಕತೆ, ಗುಣಮಟ್ಟ ಸುಧಾರಿಸಲು ಕಾರಣವಾಗುತ್ತದೆ. ಆದ್ದರಿಂದ ಜಿಲ್ಲೆಯ ಪ್ರಮುಖವಾದ ರಾಗಿ ಬೆಳೆಯ ಬೇಸಾಯ ವೆಚ್ಚ ಕಡಿಮೆ ಮಾಡಲು ಹಾಗೂ ಮಣ್ಣಿಗೆ ರಂಜಕದ ಪೋಷಕಾಂಶ ಸೇರಿಸುವ ಉದ್ದೇಶದಿಂದ ಡಿಎಪಿ ರಸಗೊಬ್ಬರದ ಬದಲಾಗಿ ಅಥವಾ ಪರ್ಯಾಯವಾಗಿ ಕಾಂಪ್ಲೆಕ್ಸ್ ರಸಗೊಬ್ಬರಗಳನ್ನು ಬಳಸಬೇಕು ಎಂದು ಕೃಷಿ ಇಲಾಖೆಯ ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

# ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿ: ಡಾ. ನಾಗಭೂಷಣ ರೆಡ್ಡಿ



ವೈ.ಎನ್. ಹೊಸಕೋಟೆ

ಜಾಗತಿಕವಾಗಿ ಮರಗಳ ಅತಿಯಾದ ನಾಶ ಮತ್ತು ಪರಿಸರ ವಿರೋಧಿ ಅಭಿವೃದ್ಧಿ ಕಾರ್ಯಗಳು ಪ್ರಕೃತಿಯ ಸಮತೋಲನವನ್ನು ಕೆಡಿಸುತ್ತಿರುವುದು ತೀವ್ರ ಆತಂಕದ ಸಂಗತಿಯಾಗಿದೆ ಎಂದು ರಾಷ್ಟ್ರೀಯ ಕಿಸಾನ್ ಸಂಘದ ರಾಜ್ಯಾಧ್ಯಕ್ಷ ಡಾ. ವಿ. ನಾಗಭೂಷಣ ರೆಡ್ಡಿ ತಿಳಿಸಿದ್ದಾರೆ.

ಹೋಬಳಿಯ ಪೋತಗಾನಹಳ್ಳಿ ಗ್ರಾಮ ಪಂಚಾಯಿತಿಯ ವ್ಯಾಪ್ತಿಯ ಕುಣಿಹಳ್ಳಿ ಸರ್ಕಾರಿ ಪ್ರಾಥಮಿಕ ಪಾಠಶಾಲೆಯಲ್ಲಿ ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಹಮ್ಮಿಕೊಂಡಿದ್ದ ಕಾರ್ಯಕ್ರಮವನ್ನು ಗಿಡ ನೆಡುವುದರ ಮೂಲಕ ಉದ್ಘಾಟಿಸಿದರು.

ಪರಿಸರ ನಾಶದ ದುಷ್ಪರಿಣಾಮವಾಗಿ ಇಂದು ಋತುಚಕ್ರದಲ್ಲಿ ಭಾರೀ ವ್ಯತ್ಯಾಸ ಉಂಟಾಗುತ್ತಿದೆ. ಮಳೆಯ ಪ್ರಮಾಣ ಮತ್ತು ಸಮಯದಲ್ಲೂ ತೀವ್ರ ಅನಿಶ್ಚಿತತೆ ಕಂಡುಬರುತ್ತಿದೆ.

ಕೃಷಿ ಮಾಡುವ ದೇಶದ ಕೋಟ್ಯಾಂತರ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಅವರು ಅಭಿಪ್ರಾಯಪಟ್ಟರು.

ವಿಶ್ವ ಗ್ರಾಮೋದಯ ಸಂಸ್ಥೆಯ ಕಾರ್ಯದರ್ಶಿ ವಿ. ದಾಸಣ್ಣ ಮಾತನಾಡಿ, ಪರಿಸರ ಸಂರಕ್ಷಣೆ ಪ್ರತಿಯೊಬ್ಬ ನಾಗರಿಕನ ಕರ್ತವ್ಯವಾಗಿದ್ದು, ಮಕ್ಕಳಲ್ಲಿ ಪರಿಸರದ ಬಗ್ಗೆ ಪ್ರೀತಿ ಮತ್ತು ಕಾಳಜಿ ಬೆಳೆಸುವ ಅಗತ್ಯವಿದೆ ಎಂದರು.

ಕಾರ್ಯಕ್ರಮದ ಮುಖ್ಯ ಶಿಕ್ಷಕರಾದ ರವಿ, ಶಿಕ್ಷಕ ಭೀಮಯ್ಯ, ವಿಶ್ವ ಗ್ರಾಮೋದಯ ಸಂಸ್ಥೆಯ ಹೆಚ್.ಆರ್. ದೇವರಾಜು, ರಾಷ್ಟ್ರೀಯ ಕಿಸಾನ್ ಸಂಘದ ತಾಲ್ಲೂಕು ಕಾರ್ಯದರ್ಶಿ ವೆಂಕಟ ರೆಡ್ಡಿ, ಮುಖಂಡರಾದ ಸುಬ್ಬಪ್ಪ, ಧರ್ಮಪಾಲ್, ಮಂಜುನಾಥ, ಧನುರಾಜ್, ಗ್ರಾಮಸ್ಥರು ಉಪಸ್ಥಿತರಿದ್ದರು.

# 2ನೇ ಪಟ್ಟಿಯಲ್ಲಿ ನನ್ನ ಹೆಸರು ಇರೋದು ಖಚಿತ

ಗುಡಿಬಂಡೆ

ರಾಜ್ಯ ಸಚಿವ ಸಂಪುಟ ವಿಸ್ತರಣೆ ಕುರಿತು ಚರ್ಚೆಗಳು ಜೋರಾಗಿರುವ ನಡುವೆಯೇ, ಬಾಗೇಪಲ್ಲಿ–ಗುಡಿಬಂಡೆ ಕ್ಷೇತ್ರದ ಶಾಸಕ ಸುಬ್ಬಾರೆಡ್ಡಿ ಅವರು ಈ ಬಾರಿ ಸಚಿವ ಸ್ಥಾನ ಸಿಗುವ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಶೀಘ್ರದಲ್ಲೇ ಸಚಿವ ಸಂಪುಟದ ಎರಡನೇ ಪಟ್ಟಿ ಬಿಡುಗಡೆಯಾಗಲಿದ್ದು, ಅದರಲ್ಲಿ ನನ್ನ ಹೆಸರು ಇರುತ್ತೆ ಎಂದು ಹೇಳಿಕೆ ನೀಡಿದ್ದಾರೆ.

ಸಚಿವ ಸ್ಥಾನದ ಕುರಿತು ಮಾತನಾಡಿರುವ ಶಾಸಕ ಸುಬ್ಬಾರೆಡ್ಡಿಯವರು, ನಾನು ಪಕ್ಷದ ಶಿಸ್ತಿನ ಸಿಪಾಯಿ. ಸತತವಾಗಿ ಮೂರು ಬಾರಿ ಶಾಸಕನಾಗಿ ಆಯ್ಕೆಯಾಗಿದ್ದು, ಕ್ಷೇತ್ರದ ಅಭಿವೃದ್ದಿಗೆ ಶ್ರಮಿಸಿದ್ದೇನೆ. ಜೊತೆಗೆ ಪಕ್ಷದ ಬಲವರ್ಧನೆಯಲ್ಲೂ ಮುಂದಿದ್ದೇನೆ. ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗುವ ಸಮಯದಲ್ಲಿ ನಾನು ಸಹ ವರಿಷ್ಟರಲ್ಲಿ ಸಚಿವ ಸ್ಥಾನದ ಬೇಡಿಕೆ ಇಟ್ಟಿದ್ದೆ. ಆಗ ಅವರು ನನಗೆ ಸಚಿವ ಸ್ಥಾನ ನೀಡುವ ಭರವಸೆ ನೀಡಿದ್ದರು. ಆದರೆ ಕಾರಣಾಂತರಗಳಿಂದ ಮೊದಲ ಪಟ್ಟಿಯಲ್ಲಿ



ನನಗೆ ಸಚಿವ ಸ್ಥಾನ ಸಿಗಲಿಲ್ಲ. ಮತ್ತೊಮ್ಮೆ ಸಿಎಂ ಶಿವಕುಮಾರ್ ಹಾಗೂ ಹಿರಿಯ ನಾಯಕರಾದ ಸಿದ್ದರಾಮಯ್ಯನವರ ಬಳಿ ನೀವು ಕೊಟ್ಟ ಮಾತಿನಂತೆ ನನಗೆ ಸಚಿವ ಸ್ಥಾನ ಕೊಡಿ ಎಂದು ಕೇಳಿದ್ದೇನೆ. ಎರಡನೇ ಪಟ್ಟಿಯಲ್ಲಿ ನನಗೆ ಸಚಿವ ಸ್ಥಾನ ಕೊಡುತ್ತೇವೆ ಎಂದು ಮಾತು ಕೊಟ್ಟಿದ್ದಾರೆ ಎಂದರು.

ಇನ್ನೂ ಕ್ಷೇತ್ರದಲ್ಲಿನ ಸಾಕಷ್ಟು ಮುಖಂಡರು ಈ ಬಗ್ಗೆ ಪ್ರತಿಕ್ರಿಯೆ ನೀಡಿದ್ದು, ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಹಿರಿಯ ಶಾಸಕರಾಗಿರುವ ಸುಬ್ಬಾರೆಡ್ಡಿಯವರಿಗೆ ಸಚಿವ ಸ್ಥಾನ ನೀಡಲೇಬೇಕು. ಆಪರೇಷನ್ ಕಮಲದ ಸಮಯದಲ್ಲೂ ಸಹ ಅವರು ಪಕ್ಷಕ್ಕೆ ದ್ರೋಹ ಬಗೆಯುವ ಕೆಲಸ ಮಾಡಿಲ್ಲ.

ಒಂದು ವೇಳೆ ಅವರಿಗೆ ಅಧಿಕಾರದ ಆಸೆಯಿದ್ದರೇ ಅಂದೇ ಅವರು ಪಕ್ಷ ಬಿಟ್ಟು ಬಿಜೆಪಿಯಲ್ಲಿ ಸಚಿವರಾಗುತ್ತಿದ್ದರು. ಈ ಭಾಗದ ಜನರ ನಂಬಿಕೆ ಉಳಿಸಿಕೊಳ್ಳುವ ನಿಟ್ಟಿನಲ್ಲಿ ಅವರು ಪಕ್ಷಕ್ಕೆ ನಿಷ್ಟೆಯಾಗಿದ್ದಾರೆ. ಗಡಿ ಭಾಗ ಹಾಗೂ ಹಿಂದುಳಿದ ಭಾಗವಾದ ಈ ಕ್ಷೇತ್ರಕ್ಕೆ ತಪ್ಪದೇ ಸಚಿವ ಸ್ಥಾನ ನೀಡಬೇಕು. ಇಲ್ಲವಾದರೇ ಮುಂದಿನ ದಿನಗಳಲ್ಲಿ ನಾವು ಎಂತಹ ಹೋರಾಟಕ್ಕಾದರೂ, ಪಕ್ಷ ತೊರೆಯಲೂ ಸಹ ಸಿದ್ದವಾಗಿದ್ದೇವೆ ಎಂದು ಆಕ್ರೋಶವಾಗಿ ಅಭಿಪ್ರಾಯ ಹಂಚಿಕೊಂಡಿದ್ದಾರೆ.

# ಜಗದೇನಹಳ್ಳಿ–ಲಕ್ಕಸಂದ್ರ ಸಂಪರ್ಕ ರಸ್ತೆ ನಿರ್ಮಾಣಕ್ಕೆ ಮನವಿ

ಮಾಲೂರು

ಜಗದೇನಹಳ್ಳಿ ಗ್ರಾಮದಿಂದ ಲಕ್ಕಸಂದ್ರ ಗ್ರಾಮಕ್ಕೆ ನಕಾಶೆಯಂತೆ ರಸ್ತೆ ಮಾಡಿ ಗ್ರಾಮಸ್ಥರಿಗೆ ಅನುಕೂಲ ಮಾಡಿಕೊಡುವಂತೆ ತಹಶೀಲ್ದಾರ್ ಎಂ ವಿ ರೂಪ ಅವರಿಗೆ ಗ್ರಾಮದ ಮುಖಂಡರು ಮನವಿ ಪತ್ರ ಸಲ್ಲಿಸಿದರು.

ಚಿಕ್ಕ ತಿರುಪತಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಜಗದೇನಹಳ್ಳಿ ಹಾಗೂ ಲಕ್ಕಸಂದ್ರ ಗ್ರಾಮಗಳಿಗೆ ಸಂಪರ್ಕಿಸುವ ನಕಾಶೆ ಅಂತಿರುವ ರಸ್ತೆಯು ಹಲವಾರು ವರ್ಷಗಳಿಂದ ರಸ್ತೆಯಲ್ಲಿ ರೈತರು ತೋಟಗಳಿಗೆ ಸಾರ್ವಜನಿಕರು ಹಾಗೂ ವಾಹನ ಸಂಚಾರ ನಡೆಯುತ್ತಿತ್ತು ಆದರೆ ಮುನಿರೆಡ್ಡಿ ಎಂಬುವರು ರಸ್ತೆಗೆ ಅಡ್ಡಲಾಗಿ ಕಾಲುವೆ ತೆಗೆದು ಸಾರ್ವಜನಿಕರ ಸಂಚಾರಕ್ಕೆ ತೊಂದರೆ ಮಾಡುತ್ತಿದ್ದು, ತಾವುಗಳು ಸ್ಥಳಕ್ಕೆ ಭೇಟಿ ನೀಡಿ ವೀಕ್ಷಿಸುವವ ಮೂಲಕ ಜಗದೇನಹಳ್ಳಿ, ಲಕ್ಕಸಂದ್ರ ಗ್ರಾಮಗಳಿಗೆ ಸಂಪರ್ಕಿಸುವ ರಸ್ತೆಯು ನಕಾಶೆ ಯಂತೆ ರಸ್ತೆ ಮಾಡಿಸಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸುವಂತೆ ಹೇಳಿದರು. ತಹಶೀಲ್ದಾರ್ ರೂಪ ಮಾತನಾಡಿ ಜಗದೇನಹಳ್ಳಿ ಗ್ರಾಮಸ್ಥರು ನೀಡಿರುವ ಮನವಿಯನ್ನು ಪರಿಗಣಿಸಿ ಸ್ಥಳಕ್ಕೆ ಭೇಟಿ ನೀಡಿ ನಕಾಶೆ ಎರಡು ಗ್ರಾಮಗಳಿಗೆ ಸಂಪರ್ಕಿಸುವ ರಸ್ತೆಯನ್ನು ಮಾಡಿಸಿಕೊಡಲಾಗುವುದು ಎಂದರು

ಈ ಸಂದರ್ಭದಲ್ಲಿ ಗ್ರಾಮದ ಮುಖಂಡರಾದ ಸುಬ್ರಮಣಿ ರೆಡ್ಡಿ, ತಿಮ್ಮರಾಜು, ಶ್ರೀಧರ್ ರೆಡ್ಡಿ, ಪ್ರಭಾಕರ್ ರೆಡ್ಡಿ, ಪಿಳ್ಳಪ್ಪ, ಶ್ರೀನಿವಾಸ್, ಮನೋಜ್, ಲಕ್ಕಸಂದ್ರ ಗ್ರಾಮಸ್ಥರು ಇನ್ನಿತರರು ಹಾಜರಿದ್ದರು.

# ಕಲಾ ತಂಡಗಳಿಂದ ಆಹ್ವಾನ

ಬೆಂ.ಗ್ರಾ ಜಿಲ್ಲೆ

ಬೆಂಗಳೂರು ಗ್ರಾಮಾಂತರ ಜಿಲ್ಲಾ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಏರ್ಪಡಿಸುವ ಕಾರ್ಯಕ್ರಮಗಳಿಗೆ ಹಾಗೂ ಸಂಘ–ಸಂಸ್ಥೆಗಳು ಪ್ರಯೋಜನೆ ಕೋರಿದಾಗ ಕಲಾವಿದರು/ ಕಲಾ ತಂಡಗಳಿಗೆ ಅವಕಾಶ ಮಾಡಿಕೊಡಲು ಜಿಲ್ಲೆಯ ಕಲಾತಂಡ, ಕಲಾವಿದರುಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಜಿಲ್ಲೆಯ ಕಲಾವಿದರು, ಕಲಾತಂಡಗಳು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಅರ್ಜಿ ನಮೂನೆಯನ್ನು ಪಡೆದು, ಕಲಾ ತಂಡಗಳ ಸದಸ್ಯರ ವಿವರಗಳು ಹಾಗೂ ಪ್ರದರ್ಶನ ನೀಡುತ್ತಿರುವ ಛಾಯಾ ಚಿತ್ರಗಳನ್ನು ಲಗತ್ತಿಸಿ ಜೂ. 23ರ ರೊಳಗೆ ನೋಂದಣಿ ಮಾಡಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಬೆಂ. ಗ್ರಾ. ಜಿಲ್ಲೆ, ದೇವನಹಳ್ಳಿ ತಾಲ್ಲೂಕು, ಚಪ್ಪರದಕಲ್ಲು, ಬೀರಸಂದ್ರ ಗ್ರಾಮ, ಜಿಲ್ಲಾಡಳಿತ ಭವನ, ಕೊಠಡಿ ಸಂಖ್ಯೆ: 118 ಇಲ್ಲಿ ಸಂಪರ್ಕಿಸಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

# ವಿದ್ಯಾರ್ಥಿನಿಲಯಕ್ಕೆ ಆಹ್ವಾನ

ಬೆಂ.ಗ್ರಾ ಜಿಲ್ಲೆ

2026–27ನೇ ಸಾಲಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದ ಮೆಟ್ರಿಕ್ ನಂತರ ವಿದ್ಯಾರ್ಥಿ ನಿಲಯಗಳಲ್ಲಿ (ಪಿ.ಯು.ಸಿ, ಡಿಪ್ಲೋಮಾ ಹಾಗೂ ಐಟಿಐ ಕೋರ್ಸ್) ಮಾಡುವ ಅರ್ಹ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. https://shp.karnataka.gov.in ವೆಬ್ಸೈಟ್ ಮೂಲಕ ಆನ್ಲೈನಲ್ಲಿ ಜೂ. 30ರವರೆಗೂ ಅರ್ಜಿಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ..

ಹೆಚ್ಚಿನ ಮಾಹಿತಿಗಾಗಿ ದೂ. ಸಂಖ್ಯೆ: 080–29787455 ಅಥವಾ ಇ–ಮೇಲ್: dombengalururural.com ನಂ.216, 2ನೇ ಮಹಡಿ, ಜಿಲ್ಲಾಧಿಕಾರಿಗಳ ಹೊಸ ಸಂಕೀರ್ಣ, ಬೀರಸಂದ್ರ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಮಾಂತರ ಜಿಲ್ಲೆ ಇಲ್ಲಿ ಸಂಪರ್ಕಿಸಲು ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

# ಬ್ರಾಹ್ಮಣರು ಸಮಾಜಕ್ಕೆ ನೀಡಿರುವ ಕೊಡುಗೆ ಅಪಾರ: ಆನಂದಮೂರ್ತಿ

ಕೋಲಾರ

ಭಾರತ ಮಾತ್ರವಲ್ಲದೇ ಪ್ರಪಂಚದಾದ್ಯಂತವಿರುವ ಬ್ರಾಹ್ಮಣ ಸಮುದಾಯದವರು ಸಮಾಜಕ್ಕೆ ನೀಡಿರುವ ಧಾರ್ಮಿಕ, ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಕೊಡುಗೆಗಳು ಅಪಾರವಾಗಿದ್ದು, ಸಮುದಾಯ ಸಂಘಟಿತವಾಗಬೇಕು ಎಂದು ಅಖಿಲಕರ್ನಾಟಕ ಬ್ರಾಹ್ಮಣ ಮಹಾಸಭಾ ಜಿಲ್ಲಾ ಪ್ರತಿನಿಧಿ ಕೆ.ಎನ್.ಆನಂದಮೂರ್ತಿ ತಿಳಿಸಿದರು.

ಕೋಲಾರ ಜಿಲ್ಲಾ ಬ್ರಾಹ್ಮಣ ಮಹಾಸಭಾ ಆಶ್ರಯದಲ್ಲಿ ನಗರದ ಪಿಸಿ ಬಡಾವಣೆಯ ಗಾಯತ್ರಿ ಪ್ರಾರ್ಥನಾ ಮಂದಿರದಲ್ಲಿ ಹಮ್ಮಿಕೊಂಡಿದ್ದ ವಿಶ್ವ ವಿಪ್ರರ ದಿನಾಚರಣೆ ಕಾರ್ಯಕ್ರಮದಲ್ಲಿ ಸಮುದಾಯದ ಸಾಧಕರಾದ ಬ್ರಾಹ್ಮಣ ಸಂಘದ ನಿಕಟಪೂರ್ವ ಕಾಯದರ್ಶಿ ಜೆ.ಎಸ್.ಜಯತೀರ್ಥ, ಕೋಲಾರಮ್ಮ ದೇವಾಲಯದ ಅರ್ಚಕರಾದ ಸೋಮಶೇಖರ ದೀಕ್ಷಿತ್ ಅವರನ್ನು ಸನ್ಮಾನಿಸಿ ಅವರು ಮಾತನಾಡುತ್ತಿದ್ದರು. ವೇದಾಧ್ಯಯನಕ್ಕೆ ಒತ್ತು ನೀಡಿ, ಸಂಧ್ಯಾವಂದನೆ ನಿತ್ಯ ಮಾಡಬೇಕು, ನಮ್ಮ ಬ್ರಾಹ್ಮಣ್ಯ ಉಳಿಸಿಕೊಳ್ಳಲು ಒಂದಾಗಬೇಕು, ಸಮುದಾಯದ ವಿರುದ್ದ ನಡೆಯುವ ಕುಚೋದ್ಯದ ಹೇಳಿಕೆಗಳ ವಿರುದ್ದ ಸಂಘಟಿತರಾಗಿ ನಾವುಹೋರಾಡಲು ಸಜ್ಜುಗೊಳ್ಳಬೇಕು ಎಂದರು.

ಸನ್ಮಾನ ಸ್ವೀಕರಿಸಿದ ಬ್ರಾಹ್ಮಣ ಸಂಘದ ನಿಕಟಪೂರ್ವ ಕಾಯದರ್ಶಿ ಜೆ.ಎಸ್.ಜಯತೀರ್ಥ ಮಾತನಾಡಿ, ನಿತ್ಯ ಅನುಷ್ಠಾನಗಳ ಮೂಲಕವೇ ಒಬ್ಬ ಬ್ರಾಹ್ಮಣ



ವಿಪ್ರನಾಗುತ್ತಾನೆ, ಸಮುದಾಯದಲ್ಲಿ ಭಿನ್ನಮತ ಅಗತ್ಯವಿಲ್ಲ, ನಾವೆಲ್ಲಾ ಒಂದೇ ಎಂಬ ಸತ್ಯ ಅರಿತು ಮುನ್ನಡೆಯೋಣ ಎಂದರು. ಜಿಲ್ಲಾ ಬ್ರಾಹ್ಮಣ ಸಂಘದ ಗೌರವಾಧ್ಯಕ್ಷ ಹಾಗೂ ರಾಷ್ಟ್ರೀಯ,ಅಂತರರಾಷ್ಟ್ರೀಯ ನಂದವರಿಕ ಬ್ರಾಹ್ಮನ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ಕಾಳಹಸ್ತಿಪುರ ಕೆ.ವಿ.ನಾಗರಾಜ್ ಮಾತನಾಡಿ, ಬ್ರಾಹ್ಮಣ್ಯ ಪಾಲಿಸೋಣ, ಉಳಿಸೋಣ ಈ ವಿಷಯದಲ್ಲಿ ಯುವಕರು ಹೆಚ್ಚು ಕಾರ್ಯಪ್ರವೃತ್ತರಾಗಿ ವೇದಾಧ್ಯಯನ ಮುಂದುವರೆಸಿ, ಉತ್ತಮ ಶಿಕ್ಷಣ ಪಡೆದು ಸಾಧಕರಾಗಿ ರಂದು ಕಿವಿಮಾತು ಹೇಳಿದರು.

ಸನ್ಮಾನ ಸ್ವೀಕರಿಸಿದ ಕೋಲಾರಮ್ಮ ದೇವಾಲಯದ ಅರ್ಚಕರಾದ ಸೋಮಶೇಖರ ದೀಕ್ಷಿತ್ ಮಾತನಾಡಿ, ನಮ್ಮ ಅರ್ಷ ಪರಂಪರೆಯನ್ನು ಮುಂದಿನ ಪೀಳಿಗೆಗೆ ನೀಡುವ ಗುರುತರ ಜವಾಬ್ದಾರಿ ನಮ್ಮ ಮೇಲಿದೆ, ನಾವು ನಮ್ಮ ಸಂಸ್ಕೃತಿ,ಪರಂಪರೆ ಉಳಿಸಿ ಬೆಳೆಸಿಕೊಂಡು ಹೋಗುವ ಕಾರ್ಯಚಟುವಟಿಕೆ ಮುಂದುವರೆಸಬೇಕು ಎಂದರು. ಜಿಲ್ಲಾ ಬ್ರಾಹ್ಮಣ ಮಹಾಸಭಾ ಅಧ್ಯಕ್ಷ ವಿ.ಎಸ್. ಚಂದ್ರಶೇಖರ್ ಮಾತನಾಡಿ, ಯುವಕರು ಸಂಘಟನೆಗೆ ಬನ್ನಿ, ಸಂಘ ಸಂಸ್ಥೆಗಳಲ್ಲಿ ಕೆಲಸ ಮಾಡುವ ಮೂಲಕ, ಸಂಘಟನೆಯನ್ನು ಬಲಪಡಿಸಲು ಪ್ರಯತ್ನಿಸಬೇಕು, ಸಕ್ರಿಯವಾಗಿ ಸಮುದಾಯದ ಕಾರ್ಯಕ್ರಮಗಳಲ್ಲಿ ತೊಡಗಿಕೊಳ್ಳಿ ಎಂದು ತಿಳಿಸಿದರು.

ವಿಪ್ರದಿನಾಚರಣೆ ಕುರಿತು ಉಪನ್ಯಾಸ ನೀಡಿದ ಗುರುಗಾಳದ ರಾಮಕೃಷ್ಣಭಟ್ಟರು ಮತ್ತು ಶಂಕರ ಮಠದ ಧರ್ಮಾಧಿಕಾರಿ ಜೆ.ಎನ್.ರಾಮಕೃಷ್ಣ, ಭಾರತೀಯ ದಾರ್ಶನಿಕ, ರಾಜತಾಂತ್ರಿಕ ಹಾಗೂ ಅರ್ಥಶಾಸ್ತ್ರಜ್ಞರಾದ ಆಚಾರ್ಯ ಚಾಣಕ್ಯರವರ ಜನ್ಮದಿನದ ನೆನಪಿಗಾಗಿ ಈ ದಿನವನ್ನು ಸಮುದಾಯದ ಹೆಮ್ಮೆಯ ಸಂಕೇತವಾಗಿ ಆಚರಿಸಲಾಗುತ್ತದೆ ಎಂದು ತಿಳಿಸಿದರು.

ಆಚಾರ್ಯ ಚಾಣಕ್ಯರ ಸ್ಮರಣೆ ಮೂಲಕ ಕೌಟಿಲ್ಯ ಎಂದೂ ಪ್ರಸಿದ್ಧರಾಗಿರುವ ಚಾಣಕ್ಯರು, ಪ್ರಾಚೀನ ಭಾರತದಲ್ಲಿ ಸುಶಾಸನ ಮತ್ತು ರಾಷ್ಟ್ರ ನಿರ್ಮಾಣಕ್ಕೆ ಬುನಾದಿ ಹಾಕಿದವರು. ಅವರ ಆದರ್ಶಗಳು ಮತ್ತು ಚಿಂತನೆಗಳನ್ನು ಸ್ಮರಿಸುವುದು ವಿಪ್ರರಾದ ನಮ್ಮ ಕರ್ತವ್ಯ ಮತ್ತು ಅವರು ಮಾಡಿದ ಸಾಧನೆ ವಿಪ್ರರ ಹೆಮ್ಮೆ ಎಂದು ತಿಳಿಸಿ, ವೇದ ಮತ್ತು ಸಂಸ್ಕೃತ ಅಧ್ಯಯನಕ್ಕೆ ಪ್ರೋತ್ಸಾಹ ನೀಡುವ ಅಗತ್ಯವಿದೆ ಎಂದರು.

ಕಾರ್ಯಕ್ರಮದಲ್ಲಿ ಮುಖಂಡ ಹೆಚ್.ಉದಯಕುಮಾರ್ ಮಾತನಾಡಿದರು. ಸಮುದಾಯದ ಮುಖಂಡರಾದ ಡಾ. ಎಂ.ವಿ.ಜಯರಾಂ, ಡಾ. ವಿ. ಎಸ್. ಕೃಷ್ಣಮೂರ್ತಿ, ಹೋಳಲಿ ಪ್ರಕಾಶ್, ಹಿರಿಯ ವಕೀಲ ಸಾ.ನಾ.ಮೂರ್ತಿ, ಹೆಚ್ ಕೆ ರಾಘವೇಂದ್ರ, ಹಾಬಿ ರಮೇಶ್, ವಿನಯ ದೀಕ್ಷಿತ್, ಶ್ರೀನಿವಾಸಪುರದ ದಿವಾಕರ, ಸುಬ್ರಹ್ಮಣ್ಯ ಮತ್ತು ಇತರೆ ಅಸಂಖ್ಯಾತ ಅಭಿಮಾನಿಗಳಿದ್ದರು.

ಕಾರ್ಯಕ್ರಮ ರಾಮಕೃಷ್ಣ ಭಟ್ಟರು ಮತ್ತು ಜೆ.ಎನ್. ರಾಮಕೃಷ್ಣರ ವೇದಘೋಷದೊಂದಿಗೆ ಆರಂಭವಾಯಿತು. ಮಹಾಸಭಾದ ಸವಿನಯ್ ಸ್ವಾಗತಿಸಿ, ಧನ್ಯ ಪ್ರಾರ್ಥಿಸಿ,ಜೆ.ಎನ್.ರಾಮಕೃಷ್ಣ, ಸಂಧ್ಯಾರಾವ್, ಶ್ರೀನಿಧಿ, ಎಂ.ಪಿ.ಆನಂದರಿಂದ ಗಾಯನ ನಡೆಯಿತು.

10/06/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# 8770 ಖಾಲಿ ಹುದ್ದೆಗಳ ಪೈಕಿ 4000 ಹುದ್ದೆ ಭರ್ತಿಗೆ ಕ್ರಮ

ಬೆಂಗಳೂರು

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ 25540 ಮಂಜೂರಾದ ಹುದ್ದೆಗಳಿದ್ದು, ಈ ಪೈಕಿ ಖಾಲಿ ಇರುವ 8770 ಹುದ್ದೆ ಪೈಕಿ 4 ಸಾವಿರ ಹುದ್ದೆಯ ಭರ್ತಿಗೆ ಕ್ರಮ ಕೈಗೊಳ್ಳಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಇಲಾಖೆಯ ಉನ್ನತಾಧಿಕಾರಿಗಳೊಂದಿಗೆ ನಡೆದ ಪರಿಚಯಾತ್ಮಕ ಸಭೆಯ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಎ ವರ್ಗದ 268, ಬಿ ವರ್ಗದ 1079, ಸಿ ವರ್ಗದ 5294, ಡಿ ವರ್ಗದ 2129 ಹುದ್ದೆಗಳು ಖಾಲಿ ಇದ್ದು, ಈ ಪೈಕಿ ಎಲ್ಲ ವರ್ಗದ ಹುದ್ದೆಗಳ ಪೈಕಿ 4 ಸಾವಿರ ಹುದ್ದೆಗಳ ಭರ್ತಿಗೆ ಕ್ರಮ ವಹಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ತಿಳಿಸಿದರು.

ಕರ್ನಾಟಕ ಲೋಕಸೇವಾ ಆಯೋಗ ಮತ್ತು ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಈ ಎಲ್ಲ ಹುದ್ದೆಗಳನ್ನು ಪಾರದರ್ಶಕವಾಗಿ ಭರ್ತಿ ಮಾಡಲು ಸೂಚಿಸಲಾಗಿದೆ ಎಂದು ಹೇಳಿದರು.

ಕಲ್ಯಾಣ ಕರ್ನಾಟಕದ ಎಲ್ಲ ಹುದ್ದೆಗಳ ಭರ್ತಿಗೆ ಸೂಚನೆ:

ಕಲ್ಯಾಣ ಕರ್ನಾಟಕ ಭಾಗದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಖಾಲಿ ಇರುವ ಎಲ್ಲ ಹುದ್ದೆಗಳ ಭರ್ತಿಗೂ ಕ್ರಮ ವಹಿಸುವಂತೆ ಸೂಚನೆ ನೀಡಿರುವುದಾಗಿ ಈಶ್ವರ ಖಂಡ್ರೆ ತಿಳಿಸಿದರು.

ಈಗಾಗಲೇ ಜೂನ್ 3ರಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟದ ಸಭೆಯಲ್ಲಿ 56 ಸಾವಿರ ಹುದ್ದೆಗಳ ನೇಮಕಾತಿಗೆ ಸಮ್ಮತಿ ಸೂಚಿಸಿದ್ದು, 1400 ಹುದ್ದೆಗಳ ಭರ್ತಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಅನುಮತಿ ನೀಡಲಾಗಿದೆ. ಈ ಹುದ್ದೆಗಳ ಭರ್ತಿಗೆ ಶೀಘ್ರವೇ ಪ್ರಕ್ರಿಯೆ ಆರಂಭಿಸಲಾಗುವುದು ಎಂದರು.

ಸುದ್ದಿಗೋಷ್ಠಿಯಲ್ಲಿ ಇಲಾಖೆಯ ಕಾರ್ಯದರ್ಶಿಗಳಾದ ಸಮೀರ್ ಶುಕ್ಲ, ರಂದೀಪ್ ಡಿ, ಪಂಚಾಯತ್ ರಾಜ್ ಆಯುಕ್ತರಾದ ಡಾ ಅರುಂಧತಿ, ಕೆ.ಆರ್.ಐ.ಡಿ.ಎಲ್. ವ್ಯವಸ್ಥಾಪಕ ನಿರ್ದೇಶಕ ರಾಜೇಶ್ ಗೌಡ, ಕುಡಿಯುವ ನೀರು ಪೂರೈಕೆ ವಿಭಾಗದ ಆಯುಕ್ತರಾದ ಫೌಜಿಯಾ ತರುನ್ನುಂ ಮತ್ತಿತರರು ಪಾಲ್ಗೊಂಡಿದ್ದರು.

# ಪಂಚಾಯ್ತಿಗಳಿಗೆ ವರ್ಷಾಂತ್ಯದೊಳಗೆ ಚುನಾವಣೆ

ಬೆಂಗಳೂರು

ಅಧಿಕಾರ ವಿಕೇಂದ್ರೀಕರಣ ದಿವಂಗತ ರಾಜೀವ್ ಗಾಂಧೀ ಅವರ ಕಲ್ಪನೆಯಾಗಿದ್ದು, ಈ ವರ್ಷಾಂತ್ಯದೊಳಗೆ ಎಲ್ಲ ಪಂಚಾಯ್ತಿಗಳಿಗೆ ಚುನಾವಣೆ ನಡೆಸಲು ಕ್ರಮವಹಿಸಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ತಿಳಿಸಿದ್ದಾರೆ.



ಬೆಂಗಳೂರಿನಲ್ಲಿ ಇಲಾಖೆಯ ಉನ್ನತಾಧಿಕಾರಿಗಳೊಂದಿಗೆ ಪರಿಚಯಾತ್ಮಕ ಸಭೆ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಂದಿನ 8 ವಾರಗಳಲ್ಲಿ ಕ್ಷೇತ್ರ ಪುನರ್ವಿಂಗಡಣೆ ಕಾರ್ಯ ಹಾಗೂ ಮೀಸಲಾತಿ ಪ್ರಕ್ರಿಯೆ ಪೂರ್ಣಗೊಳಿಸಲಾಗುವುದು. ನಂತರ ರಾಜ್ಯ ಚುನಾವಣೆ ಆಯೋಗ ಚುನಾವಣೆ ಪ್ರಕ್ರಿಯೆ ನಡೆಸಲಿದೆ ಎಂದರು.

ಸಭೆಯಲ್ಲಿ ಇಲಾಖೆಯ ಕಾರ್ಯದರ್ಶಿಗಳಾದ ಸಮೀರ್ ಶುಕ್ಲ, ರಂದೀಪ್ ಡಿ, ಪಂಚಾಯತ್ ರಾಜ್ ಆಯುಕ್ತರಾದ ಡಾ ಅರುಂಧತಿ, ಕೆ.ಆರ್.ಐ.ಡಿ.ಎಲ್. ವ್ಯವಸ್ಥಾಪಕ ನಿರ್ದೇಶಕ ರಾಜೇಶ್ ಗೌಡ, ಕುಡಿಯುವ ನೀರು ಪೂರೈಕೆ ವಿಭಾಗದ ಆಯುಕ್ತರಾದ ಫೌಜಿಯಾ ತರುನ್ನುಂ ಮತ್ತಿತರರು ಪಾಲ್ಗೊಂಡಿದ್ದರು.

# ಸರಗಳ್ಳತನ ಪ್ರಕರಣದಲ್ಲಿ 24 ಗಂಟೆಯೊಳಗೆ ಆರೋಪಿ ಬಂಧನ

ಬಂಗಾರಪೇಟೆ

ಬಂಗಾರಪೇಟೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದ್ದ ಸರಗಳ್ಳತನ ಪ್ರಕರಣವನ್ನು ಪೊಲೀಸರು ಕೇವಲ 24 ಗಂಟೆಗಳೊಳಗೆ ಭೇದಿಸಿ ಆರೋಪಿಯನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ಬಂಧಿತ ಆರೋಪಿಯಿಂದ ರೂ.1,20,500 ಮೌಲ್ಯದ 10 ಗ್ರಾಂ ಚಿನ್ನದ ಸರ ಹಾಗೂ ಕೃತ್ಯಕ್ಕೆ ಬಳಸಿದ್ದ ದ್ವಿಚಕ್ರ ವಾಹನವನ್ನು ವಶಪಡಿಸಿಕೊಳ್ಳಲಾಗಿದೆ.

ಜೂನ್ 6ರಂದು ಬಂಗಾರಪೇಟೆ ಪೊಲೀಸ್ ಠಾಣೆ ಸರಹದ್ದಿನ ದೊಡ್ಡ ಚಿನ್ನಹಳ್ಳಿ ಗ್ರಾಮಕ್ಕೆ ಹೋಗುವ ರಸ್ತೆಯಲ್ಲಿ ಐಮರಸಪುರ ಗ್ರಾಮದ ನಿವಾಸಿ ತುಳಸಿಬಾಯಿ ಅವರು ವಾಕಿಂಗ್‌ಗೆ ತೆರಳಿದ್ದ ವೇಳೆ, ದ್ವಿಚಕ್ರ ವಾಹನದಲ್ಲಿ ಬಂದ ಇಬ್ಬರು ದುಷ್ಕರ್ಮಿಗಳು ಮುಖಕ್ಕೆ ಮಾಸ್ಕ್ ಧರಿಸಿ ಅವರ ಕುತ್ತಿಗೆಯಲ್ಲಿದ್ದ 10 ಗ್ರಾಂ ಚಿನ್ನದ ಸರವನ್ನು ಕಿತ್ತು ಪರಾರಿಯಾಗಿದ್ದರು. ಈ ಸಂಬಂಧ ಬಂಗಾರಪೇಟೆ ಪೊಲೀಸ್ ಠಾಣೆಯಲ್ಲಿ ಮೊ.ಸಂ.136/2026ರ ಅಡಿಯಲ್ಲಿ ಪ್ರಕರಣ ದಾಖಲಾಗಿತ್ತು. ಪ್ರಕರಣದ ತನಿಖೆಗಾಗಿ ಬಂಗಾರಪೇಟೆ ಪೊಲೀಸ್ ಠಾಣೆಯ ಪೊಲೀಸ್ ನಿರೀಕ್ಷಕ



ರವಿಕುಮಾರ್ ಸಿ. ಅವರ ನೇತೃತ್ವದಲ್ಲಿ ಹಾಗೂ ಕಾಮಸಮುದ್ರಂ ಪೊಲೀಸ್ ಠಾಣೆಯ ಪಿ.ಎಸ್.ಐ. ಕಿರಣ್ ಕುಮಾರ್ ಬಿ.ವಿ. ಅವರನ್ನೊಳಗೊಂಡ ವಿಶೇಷ ಅಪರಾಧ ಪತ್ತೆ ದಳವನ್ನು ರಚಿಸಲಾಗಿತ್ತು.

ವಿಶೇಷ ತಂಡವು ತ್ವರಿತ ಕಾರ್ಯಾಚರಣೆ ನಡೆಸಿ, ಪ್ರಕರಣ ದಾಖಲಾದ 24 ಗಂಟೆಗಳೊಳಗೆ ಕೆಜಿಎಫ್‌ನ ಕೋರಮಂಡಲ್ ನಿವಾಸಿ ಲೋಕನಾಥ್ ಮಗ ವಿಘ್ನೇಶ್ ಅಲಿಯಾಸ್ ವಿಕ್ಕಿ (29) ಎಂಬ ಆರೋಪಿಯನ್ನು ಬಂಧಿಸಿದ್ದಾರೆ. ಆರೋಪಿಯಿಂದ ರೂ.1,20,500 ಮೌಲ್ಯದ 10 ಗ್ರಾಂ ಚಿನ್ನದ ಸರ ಹಾಗೂ ಕೃತ್ಯಕ್ಕೆ ಬಳಸಿದ್ದ ದ್ವಿಚಕ್ರ ವಾಹನವನ್ನು ವಶಪಡಿಸಿಕೊಳ್ಳಲಾಗಿದೆ. ನಂತರ ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ಡಿ.ವೈ.ಎಸ್.ಪಿ. ಲಕ್ಷ್ಮಯ್ಯ ವಿ. ಅವರ ಮಾರ್ಗದರ್ಶನದಲ್ಲಿ ನಡೆದ ಈ ಕಾರ್ಯಾಚರಣೆಯಲ್ಲಿ ಬಂಗಾರಪೇಟೆ ಪೊಲೀಸ್ ಠಾಣೆಯ ಪೊಲೀಸ್ ನಿರೀಕ್ಷಕ ರವಿಕುಮಾರ್ ಸಿ., ಕಾಮಸಮುದ್ರಂ ಪೊಲೀಸ್ ಠಾಣೆಯ ಪಿ.ಎಸ್.ಐ. ಕಿರಣ್ ಕುಮಾರ್ ಬಿ.ವಿ. ಹಾಗೂ ಸಿಬ್ಬಂದಿಗಳಾದ ಮಂಜುನಾಥರೆಡ್ಡಿ, ಮುನಾವರ್ ಪಾಷಾ, ರಾಮರಾವ್, ರಾಮಕೃಷ್ಣಾರೆಡ್ಡಿ, ಮಂಜುನಾಥ, ಲಕ್ಷಣತೇಲಿ, ಮುರಳಿ, ರಘು, ಮುನೇಂದ್ರ, ಮುನಿರಾಜು, ಸುನೀಲ್ ಮತ್ತು ಶಿವರಾಜ್ ಭಾಗವಹಿಸಿದ್ದರು.

ಪ್ರಕರಣವನ್ನು ಶೀಘ್ರವಾಗಿ ಭೇದಿಸಿ ಆರೋಪಿಯನ್ನು ಬಂಧಿಸಿದ ವಿಶೇಷ ತಂಡದ ಕಾರ್ಯವನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಿವಾಂತು ರಜಪೂತ್ ಅವರು ಪ್ರಶಂಸೆ ವ್ಯಕ್ತಪಡಿಸಿದ್ದಾರೆ.

# ಕಲುಷಿತ ನೀರು ಸರಬರಾಜಾಗದಂತೆ ಕಟ್ಟೆಚ್ಚರ ವಹಿಸಿ: ಈಶ್ವರ ಖಂಡ್ರೆ

ಬೆಂಗಳೂರು

ಗ್ರಾಮೀಣ ಕರ್ನಾಟಕದ ಜನರಿಗೆ ಶುದ್ಧ ಕುಡಿಯುವ ನೀರು ಪೂರೈಕೆ ಮಾಡುವುದು ಎಲ್ಲ ಪಂಚಾಯ್ತಿಗಳ ಆದ್ಯ ಕರ್ತವ್ಯವಾಗಿದ್ದು, ಯಾವುದೇ ಕಾರಣಕ್ಕೂ ಕಲುಷಿತ ನೀರು ಸರಬರಾಜಾಗದಂತೆ ಎಚ್ಚರ ವಹಿಸಿ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಅಧಿಕಾರಿಗಳಿಗೆ ಸೂಚಿಸಿರುವುದಾಗಿ ತಿಳಿಸಿದ್ದಾರೆ.

ಕರ್ನಾಟಕ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ಮಂಡಳಿಯ ಸಭಾಂಗಣದಲ್ಲಿಂದು ಇಲಾಖೆಯ ಉನ್ನತಾಧಿಕಾರಿಗಳ ಪರಿಚಯಾತ್ಮಕ ಸಭೆಯ ಬಳಿಕ ಅವರು ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಕಲುಷಿತ ನೀರು ಸೇವನೆಯಿಂದ ಮುಗ್ಧ ಜನರು ಮೃತಪಟ್ಟ ಘಟನೆಗಳು ಹಲವೆಡೆ ನಡೆದಿವೆ. ಇಂತಹ ಘಟನೆ ಮರುಕಳಿಸದಂತೆ ನೀರಿನ ಪರೀಕ್ಷೆಯನ್ನು ಎನ್.ಎ.ಬಿ.ಎಲ್. ಮಾನ್ಯತೆ ಪಡೆದ ಪ್ರಯೋಗಾಲಯಗಳಲ್ಲಿ ನಿಯಮಿತವಾಗಿ ಮಾಡುವಂತೆ ಆದೇಶಿಸಿರುವುದಾಗಿ ತಿಳಿಸಿದರು.

ಎಲ್ಲ ನಾಗರಿಕತೆಗಳೂ ಹುಟ್ಟಿದ್ದು ನದಿಗಳ ತಟದಲ್ಲಿ. ನೀರು ಜೀವಜಲ. ನೀರಿಲ್ಲದೆ ಬದುಕಲು ಸಾಧ್ಯವಿಲ್ಲ. ಹೀಗಾಗಿ ಪಂಚಾಯ್ತಿಗಳಿಂದ ಪೂರೈಕೆ ಮಾಡುವ ಕುಡಿಯುವ ನೀರಿನಲ್ಲಿ ಯಾವುದೇ ಲೋಪ ಆಗದಂತೆ ಬಹು ಹಂತದ ಪರಿಶೀಲನೆ ನಡೆಸಲು ಸೂಚಿಸಿರುವುದಾಗಿ ತಿಳಿಸಿದರು.

ಮೇಲ್ಮೈ ನೀರಿನಿಂದ ಮುಂದಿನ 30 ವರ್ಷಗಳ ಕಾಲ ನೀರು ಪೂರೈಸಲು ಕ್ರಮ ವಹಿಸಲಾಗಿದೆ.



ಹೀಗಾಗಿ ನದಿ, ಕೆರೆ, ಸರೋವರ ಸೇರಿದಂತೆ ಯಾವುದೇ ಜಲಮೂಲ ಕಲುಷಿತವಾಗದಂತೆ ಸೂಚಿಸಿರುವುದಾಗಿ ಹೇಳಿದರು.

ಇಲಾಖೆಯ ವ್ಯಾಪ್ತಿಯಲ್ಲಿರುವ ಕೆರೆ ಒತ್ತುವರಿ ತೆರವು ಗೊಳಿಸಲು ಕ್ರಮ ವಹಿಸುವಂತೆ ಸೂಚಿಸಿದ ಅವರು, ಜಲ ಮೂಲಗಳಿಗೆ ನೇರವಾಗಿ ಮಲತ್ಯಾಜ್ಯ ಮತ್ತು ಕೈಗಾರಿಕಾ ತ್ಯಾಜ್ಯ ಸೇರದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಇ-ಸ್ವತ್ತಿಗೆ ಅರ್ಜಿ ಸಲ್ಲಿಸಿದವರಿಗೆ ಖಾತಾ ವಿಳಂಬವಾಗುತ್ತಿರುವುದು ತಮ್ಮ ಗಮನಕ್ಕೆ ಬಂದಿದ್ದು, ಸರ್ವರ್ ಸಮಸ್ಯೆ ಪರಿಹರಿಸಲು ಕ್ರಮ ಕೈಗೊಳ್ಳುವಂತೆ ಸೂಚಿಸಿರುವುದಾಗಿ ಹೇಳಿದರು. ಗ್ರಾಮೀಣಾಭಿವೃದ್ಧಿ ಇಲಾಖೆಯಿಂದ ಮತ್ತು ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ನಿಗಮದಿಂದ ಸೃಜಿಸಲಾಗಿರುವ ಎಲ್ಲ ಆಸ್ತಿಗಳ ದಾಖಲೀಕರಣ ಆಗಬೇಕು. ಈ ಎಲ್ಲ ಆಸ್ತಿಗಳೂ ಗುಣಮಟ್ಟದಿಂದ ಕೂಡಿರಬೇಕು, ಇದರಲ್ಲಿ ಯಾವುದೇ ರಾಜೀಗೆ ಅವಕಾಶವಿಲ್ಲ. ಜೊತೆಗೆ ಎಲ್ಲ ಅಸ್ತಿಯನ್ನು ಜಿಯೋ ಟ್ಯಾಗ್ ಮಾಡಿ ಸರ್ಕಾರಿ ಆಸ್ತಿ ಸಂರಕ್ಷಣೆ ಮಾಡಿ, ಅದನ್ನು ಅಪ್ ಲೋಡ್ ಮಾಡುವಂತೆ ತಿಳಿಸಿದರು.

ಮನ್ರೇಗಾ ಸಂಯೋಜನೆಯಲ್ಲಿ ಸಾಮಾಜಿಕ ಅರಣ್ಯಕ್ಕೆ ಆರ್ಥಿಕ ನೆರವು ಒದಗಿಸಲಾಗಿದ್ದು, ರಸ್ತೆ ಬದಿಯಲ್ಲಿ ಮತ್ತು ನೆಡುತೋಪುಗಳಲ್ಲಿ ಬೆಳೆಸಲಾಗಿರುವ ಸಸಿಗಳ ಜಿಯೋ ಟ್ಯಾಗ್ ಮಾಡಿ, ಆಡಿಟ್ ಮಾಡಿಸಲು ಈಶ್ವರ ಖಂಡ್ರೆ ಸೂಚಿಸಿದರು.

ರಾಜ್ಯದಲ್ಲಿ 2 ಲಕ್ಷ ಕಿ.ಮೀ. ಗ್ರಾಮೀಣ ರಸ್ತೆ ಇದ್ದು, ಇದರಲ್ಲಿ ಎಷ್ಟು ಮಣ್ಣಿನ ರಸ್ತೆ ಇದೆ. ಎಷ್ಟು ಕಾಂಕ್ರೀಟ್ ರಸ್ತೆ ಇದೆ, ಎಷ್ಟು ಡಾಂಬರು ರಸ್ತೆ ಇದೆ ಎಂಬ ಸಂಪೂರ್ಣ ವಿವರ ನೀಡುವಂತೆ ತಿಳಿಸಿದ ಸಚಿವರು, ಬಸ್ ಸಂಪರ್ಕವೇ ಇಲ್ಲದ ಗ್ರಾಮಗಳಿಗೆ ಸಂಪರ್ಕ ಕಲ್ಪಿಸಲು ಕನಿಷ್ಠ ಒಂದು ಸಂಪರ್ಕ ರಸ್ತೆ ಕಲ್ಪಿಸಲು ಕ್ರಮ ವಹಿಸುವಂತೆ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಇಲಾಖೆಯ ಕಾರ್ಯದರ್ಶಿಗಳಾದ ಸಮೀರ್ ಶುಕ್ಲ, ರಂದೀಪ್ ಡಿ, ಪಂಚಾಯತ್ ರಾಜ್ ಆಯುಕ್ತರಾದ ಡಾ ಅರುಂಧತಿ, ಕೆ.ಆರ್.ಐ.ಡಿ.ಎಲ್. ವ್ಯವಸ್ಥಾಪಕ ನಿರ್ದೇಶಕ ರಾಜೇಶ್ ಗೌಡ, ಕುಡಿಯುವ ನೀರು ಪೂರೈಕೆ ವಿಭಾಗದ ಆಯುಕ್ತರಾದ ಫೌಜಿಯಾ ತರುನ್ನುಂ ಮತ್ತಿತರರು ಪಾಲ್ಗೊಂಡಿದ್ದರು.

# ಹಾಲು ಉತ್ಪಾದಕರ ಕಲ್ಯಾಣಕ್ಕೆ ತುಮುಲ್ ಬದ್ಧ: ಕೊಂಡವಾಡಿ ಚಂದ್ರಶೇಖರ್

ಮಧುಗಿರಿ

ಹಾಲು ಉತ್ಪಾದಕರ ಮತ್ತು ಅವರ ಕುಟುಂಬದ ಕಲ್ಯಾಣಕ್ಕಾಗಿ ತುಮುಲ್ ಸದಾ ಶ್ರಮಿಸುತ್ತಿದೆ. ರೈತರು ಮತ್ತು ಸಂಘದ ಸದಸ್ಯರು ಒಕ್ಕೂಟದ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ತುಮುಲ್ ನಿರ್ದೇಶಕ ಕೊಂಡವಾಡಿ ಚಂದ್ರಶೇಖರ್ ಕರೆ ನೀಡಿದರು.

ಪಟ್ಟಣದ ಹಾಲು ಶೀಥಲೀಕರಣ ಕೇಂದ್ರದಲ್ಲಿ ಇತ್ತೀಚೆಗೆ ತುಮಕೂರು ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ (ತುಮುಲ್) ವತಿಯಿಂದ ವಿವಿಧ ಸೌಲಭ್ಯಗಳ ಫಲಾನುಭವಿಗಳಿಗೆ ಹಮ್ಮಿಕೊಳ್ಳಲಾಗಿದ್ದ ಕಾರ್ಯಕ್ರಮದಲ್ಲಿ ಲಕ್ಷಾಂತರ ರೂಪಾಯಿ ಮೌಲ್ಯದ ಚೆಕ್?ಗಳನ್ನು ವಿತರಿಸಿ ಮಾತನಾಡಿದ ಅವರು ಈ ಹಿಂದೆ ನಾನು ಅಧ್ಯಕ್ಷನಾಗಿದ್ದ ವೇಳೆ ಒಕ್ಕೂಟ ಲಾಭದಲ್ಲಿತ್ತು. ಆ ಆರಂಭಿಸಿದ ರೈತ ಕಲ್ಯಾಣ ಟ್ರಸ್ಟ್ ವತಿಯಿಂದ ಇಂದು ಸುಮಾರು 75 ಲಕ್ಷದ ಚೆಕ್ ವಿತರಣೆ ಮಾಡಲು ಕಾರಣವಾಗಿದೆ ಎಂದರು.

ನನ್ನ ಅವಧಿಯಲ್ಲಿ ಮುಂದಾಲೋಚನೆ ಇಟ್ಟುಕೊಂಡು ಡೈರಿ ಉನ್ನತ್ತೀಕರಿಸಿದ ಕಾರಣ ಇಂದು ಒಕ್ಕೂಟಕ್ಕೆ 12 ಲಕ್ಷ ಲೀ ಹಾಲು ಶೇಖರಣೆಯಾಗುತ್ತಿದೆ. ಇತ್ತೀಚಿಗೆ



ಡೈರಿಗಳಲ್ಲಿ ಅನಾಲೈಸರ್ ಅಳವಡಿಸಿದ್ದು ಸಿಸಿಗಳಲ್ಲಿ ಗರ್ಭರ್ ಮೂಲಕ ಹಾಲು ಪರಿವಿಕ್ಷಣೆ ಮಾಡಲಾಗುತ್ತಿದೆ. ಇದರಿಂದ ಅವೈಜಾನಿಕವಾಗಿದ್ದು ಎರಡು ಕಡೆ ಕ್ಯಾಲಿಬರೇಷನ್ ಮಾಡಿಸಿ ಅನಾಲೈಸರ್ ಅಳವಡಿಸಬೇಕು ಎಂದರು.

ತುಮುಲ್ ಆರ್ಥಿಕ ಮ್ಯಾನೇಜರ್ ವೆಂಕಟೇಶ್ ಮಾತನಾಡಿ, ಜಿಲ್ಲೆಯಲ್ಲಿ ಹೆಚ್ಚು ಹಾಲು ಉತ್ಪತಿಯಾಗುತಿದ್ದು 12 ಲಕ್ಷ ಲೀ ದಾಟುವ ನಿರೀಕ್ಷೆಯಿದೆ. ಕೇವಲ ಹೆಚ್ಚು ಸರಬರಾಜು ಮಾಡದೆ ರೈತರು ಹಾಲಿನ ಗುಣಮಟ್ಟವನ್ನು ಕಾಪಡಿಕೊಳ್ಳಬೇಕು. ಇಂದು ವಿತರಣೆ ಮಾಡುತ್ತಿರುವ ಚೆಕ್ ಗಳನ್ನು ಉತ್ತಮ ರೀತಿಯಲ್ಲಿ ಸದ್ಬಳಕೆ ಮಾಡಿಕೊಂಡು ಆರ್ಥಿಕ ಸ್ವಾಲಂಬನೆಯಾಗಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಈ ಸಂದರ್ಭದಲ್ಲಿ ಜನರಲ್ ಮ್ಯಾನೇಜರ್ ತಿಮ್ಮನಾಯಕ್, ತುಮುಲ್ ಇಂಜಿಯರ್ ರವಿ ಕಿರಣ್, ಸೂಪರವೈಸರ್ ನಾಗರಾಜು ರೈತ ಮುಖಂಡರ ವೀರೇಂದ್ರ, ಸಿದ್ದಣ್ಣ ವಿಶ್ವನಾಥ್, ಕಾಂತರಾಜು, ವೀರೇಂದ್ರ, ಸಿದ್ದಣ್ಣ, ಸುಮುಖ್ ಚಂದ್ರಶೇಖರ್, ಸಿಡಿದಗಲ್ಲು ವಿಶ್ವನಾಥ್ ಸೇರಿದಂತೆ ಶೀಥಲೀಕರಣ ಕೇಂದ್ರದ ಅಧಿಕಾರಿಗಳು, ಸ್ಥಳೀಯ ಡೈರಿಗಳ ಅಧ್ಯಕ್ಷರುಗಳು, ಮುಖ್ಯಸ್ಥರು ಹಾಜರಿದ್ದರು.

# ಬೈಲುಗಂಗಮ್ಮ ದೇವಿ ಜಾತ್ರಾ ಮಹೋತ್ಸವ

ದೇವನಹಳ್ಳಿ

ನಗರದಲ್ಲಿ ಇಂದು ಅಮ್ಮನವರ 12ನೇ ವರ್ಷದ ಭವ್ಯ ಜಾತ್ರಾ ಮಹೋತ್ಸವವನ್ನು ಅತ್ಯಂತ ಸಡಗರ-ಸಂಭ್ರಮದಿಂದ ಹಮ್ಮಿಕೊಳ್ಳಲಾಗಿದೆ ಎಂದು ದೇವಸ್ಥಾನದ ಪ್ರಧಾನ ಅರ್ಚಕ ಸುನಿಲ್ ಕುಮಾರ್ ತಿಳಿಸಿದ್ದಾರೆ.

ನಗರದಲ್ಲಿ ಆಯೋಜಿಸಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಜಾತ್ರಾ ಮಹೋತ್ಸವದ ಧಾರ್ಮಿಕ ಕಾರ್ಯಕ್ರಮಗಳ ವಿವರಗಳನ್ನು ತಿಳಿಸಿದರು.



"ಪ್ರತಿವರ್ಷದಂತೆ ಈ ವರ್ಷವೂ ಅಮ್ಮನವರ ಜಾತ್ರಾ ಮಹೋತ್ಸವ ನಿಮಿತ್ತ ಮಂಗಳವಾರ ದೇವಸ್ಥಾನದಲ್ಲಿ ವಿಶೇಷ ಧಾರ್ಮಿಕ ಕೈಂಕರ್ಯಗಳು ಜರುಗಲಿವೆ. ದೇವಿಗೆ ಕಣ್ಣುಮನ ತುಂಬುವಂತಹ ವಿವಿಧ ರೀತಿಯ ವಿಶೇಷ ಅಲಂಕಾರಗಳನ್ನು ಮಾಡಲಾಗುವುದು. ಇದರೊಂದಿಗೆ ಪಂಚಾಮೃತಾಭಿಷೇಕ, ಪುಷ್ಪಾಭಿಷೇಕ ಸೇರಿದಂತೆ ವಿವಿಧ ನವ ರೀತಿಯ ಅಭಿಷೇಕಗಳು, ವಿಶೇಷ ಪುಷ್ಪ ನಮನ ಹಾಗೂ ಮಹಾಮಂಗಳಾರತಿ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿದೆ" ಎಂದು ಅರ್ಚಕರು ವಿವರಿಸಿದರು.ದೀಪೋತ್ಸವದ ನಂತರ ಮುತ್ತೈದೆಯರು ದೇವಿಗೆ ಭಕ್ತಿಯಿಂದ ಬಾಗಿನ (ಮಡಿಲಕ್ಕಿ) ಸಮರ್ಪಿಸಲು ಮುಕ್ತ ಅವಕಾಶ ಕಲ್ಪಿಸಲಾಗಿದೆ. ಜಾತ್ರಾ ಮಹೋತ್ಸವಕ್ಕೆ ಆಗಮಿಸುವ ಭಕ್ತಾದಿಗಳಿಗಾಗಿ ಅಂದು ಬೆಳಿಗ್ಗೆ 11 ಗಂಟೆಯಿಂದಲೇ ಭಾರಿ ಅನ್ನ ಸಂತರ್ಪಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು ಹಾಗೂ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ತಾಯಿಯ ದರ್ಶನ ಪಡೆದು, ಪ್ರಸಾದ ಸ್ವೀಕರಿಸಬೇಕಾಗಿ ಪ್ರಧಾನ ಅರ್ಚಕರು ವಿನಂತಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಕೆ ಹಾಗೂ ಹೆಚ್ಚಿನ ವಿವರಗಳಿಗಾಗಿ ಪ್ರಧಾನ ಅರ್ಚಕ ಸುನಿಲ್ ಕುಮಾರ್ (ಮೊಬೈಲ್ ಸಂಖ್ಯೆ: 9972470599) ಅವರನ್ನು ಸಂಪರ್ಕಿಸಬಹುದಾಗಿದೆ.

# 50ಲಕ್ಷ ಅನುದಾನದಿಂದ ಗ್ರಾಮೀಣ ರಸ್ತೆಗಳಿಗೆ ಹೊಸ ರೂಪ



ಬೇತಮಂಗಲ

ವೆಂಗಸಂದ್ರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಲ್ಲಪಲ್ಲಿ, ಮುಷ್ಟೂರು, ಗೋಪೆನಹಳ್ಳಿ ಹಾಗೂ ವೆಂಗಸಂದ್ರ ಗ್ರಾಮಗಳ ಸಿಸಿ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ 50 ಲಕ್ಷ ಅನುದಾನವನ್ನು ಮಂಜೂರು ಮಾಡಿರುವ ಹಿನ್ನೆಲೆಯಲ್ಲಿ ಸ್ಥಳೀಯ ಮುಖಂಡರು ಹಾಗೂ ಗ್ರಾಮಸ್ಥರು ಶಾಸಕಿ ರೂಪಕಲಾ ಅವರಿಗೆ ಕೃತಜ್ಞತೆ ಸಲ್ಲಿಸಿದರು.

ವೆಂಗಸಂದ್ರ ಗ್ರಾಮದಲ್ಲಿ ಸ್ಮಶಾನಕ್ಕೆ ತೆರಳುವ ರಸ್ತೆಯು ಹದಗಟ್ಟಿದ್ದು ಇಂದು ರಸ್ತೆ ಅಭಿವೃದ್ಧಿ ಕಾಮಗಾರಿಗೆ ಸ್ಥಳೀಯರು ಮುಖಂಡರು ಭೂಮಿ ಪೂಜೆ ನೆರವೇರಿಸಿ ಚಾಲನೆ ನೀಡಿ ಮಾತನಾಡಿದರು, ಗ್ರಾಮದ ಸ್ಮಶಾನಕ್ಕೆ ಶವಸಂಸ್ಕಾರ ಮಾಡಲು ತೆರಳುವುದಕ್ಕೆ ಸೂಕ್ತ ರಸ್ತೆ ಇಲ್ಲದೆ ಮಳೆ ಅಭಾವದಿಂದ ರಸ್ತೆ ಹದಗೆಟ್ಟಿ ಸಂಚರಿಸಲು ತುಂಬಾ ಅನಾನುಕೂಲವಾಗಿತ್ತು ಇದೆ ರೀತಿ ವೆಂಗಸಂದ್ರ ಗ್ರಾಪಂ ವ್ಯಾಪ್ತಿಯಲ್ಲಿ ಮುಷ್ಟೂರು, ಮಲ್ಲಹಳ್ಳಿ, ಗೋಪೆನಹಳ್ಳಿ ಗ್ರಾಮಗಳ ರಸ್ತೆಗಳನ್ನು ಅಭಿವೃದ್ಧಿ ಮಾಡುವ ನಿಟ್ಟಿನಲ್ಲಿ ಶಾಸಕಿ ರೂಪಕಲಾ ಅವರು ನಮ್ಮ ಮನವಿಗೆ ಸ್ಪಂದಿಸಿ ತಮ್ಮ ವಿಶೇಷ ಅನುದಾನದಲ್ಲಿ 50 ಲಕ್ಷ ರೂಗಳನ್ನು ಬಿಡುಗಡೆ ಮಾಡಿರುತ್ತಾರೆ ಅವರಿಗೆ ನಮ್ಮ ವೆಂಗಸಂದ್ರ ಗ್ರಾಪಂ ಯ ಮುಖಂಡರಿಂದ ಹಾಗೂ ಗ್ರಾಮಸ್ಥರಿಂದ ಅಭಿನಂದನೆಗಳನ್ನು ತಿಳಿಸಿದರು.

ಶಾಸಕರಿಗೆ ಸಚಿವೆ ಸ್ಥಾನ ನೀಡಲು ಆಗ್ರಹ: ಶಾಸಕಿ ರೂಪಕಲಾ ಅವರು ಕೆಜಿಎಫ್ ವಿಧಾನಸಭಾ ಕ್ಷೇತ್ರದಲ್ಲಿ ಸತತ ಎರಡನೇ ಬಾರಿಗೆ ಶಾಸಕರಾಗಿ ಆಯ್ಕೆಯಾಗಿದ್ದಾರೆ ಅವರು ಕ್ಷೇತ್ರದಲ್ಲಿ ಸರ್ವತೋಮುಖವಾಗಿ ಸಾಕಷ್ಟು ಅಭಿವೃದ್ಧಿ ಕೆಲಸಗಳನ್ನು ಕೈಗೊಂಡು ಮತ್ತು ಪಕ್ಷ ಸಂಘಟನೆಯಲ್ಲಿ ಮಹತ್ವದ ಪಾತ್ರ ವಹಿಸಿದ್ದಾರೆ ಅವರು ಇನ್ನಷ್ಟು ಅಭಿವೃದ್ಧಿ ಕಾರ್ಯಗಳನ್ನು ಮಾಡಲು ಹಾಗೂ ರಾಜ್ಯದ ಅಭಿವೃದ್ಧಿಯನ್ನು ಮಾಡಲು ಸಚಿವ ಸ್ಥಾನ ನೀಡಿ ಎಂದು ಮಾನ್ಯ ಮುಖ್ಯಮಂತ್ರಿಗಲಾದ ಡಿಕೆ ಶಿವಕುಮಾರ್ ಮತ್ತು ಪಕ್ಷದ ಹೈ ಕಮಾಂಡ್‌ಗೆ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಮಾಜಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಪ್ಪಾಜಿಗೌಡ, ಎಪಿಎಂಸಿ ಸದಸ್ಯರಾದ ಯುವರಾಣಿ ವೆಂಕಟಾಚಲಪತಿ, ಮುರಳಿಕೃಷ್ಣ, ಸುನೀತಾ ಶೇಖರ್, ಶಂಕರಪ್ಪ, ಮಾಜಿ ಗ್ರಾಪಂ ಉಪಾಧ್ಯಕ್ಷರಾದ ಪದ್ಮಮ್ಮ ರಮೇಶ್, ರವಿ, ನಾರಾಯಣಸ್ವಾಮಿ, ಮುಖಂಡರಾದ ನಾಗೇಂದ್ರ ಬುಜ್ಜಿ, ಚಂದ್ರಯ್ಯ, ರೆಡ್ಡಪ್ಪ, ನಾರಾಯಣಪ್ಪ, ಮುನಿರತ್ನಪ್ಪ, ದೇವರಾಜ್, ಮಂಜುನಾಥ್, ಅಣ್ಣಯ್ಯ, ಬಾಬು ರೆಡ್ಡಿ ಮಹೇಶ್, ಭಾಸ್ಕರ್, ನಾಟರಿ ವೆಂಕಟಚಲಪತಿ, ಅಶ್ವತ್, ಸುಧಾಕರ್, ಸೇರಿದಂತೆ ಗ್ರಾಮಸ್ಥರು ಹಾಗೂ ಉಪಸ್ಥಿತರಿದ್ದರು.

# ಟಿ.ಬಿ. ಜಯಚಂದ್ರರಿಗೆ ಸಚಿವ ಸ್ಥಾನ ನೀಡುವಂತೆ ಒತ್ತಾಯ

ತುಮಕೂರು

ಕುಂಚಿಟಿಗ ಸಮಾಜದ ಏಕೈಕ ಶಾಸಕ, ಹಿರಿಯ ರಾಜಕಾರಣಿ, ಶಿರಾ ಕ್ಷೇತ್ರ ಶಾಸಕ ಟಿ.ಬಿ. ಜಯಚಂದ್ರ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಜಿಲ್ಲೆಯ ಕುಂಚಿಟಿಗ ಸಮಾಜದ ವಿವಿಧ ಸಂಘಗಳ ಮುಖಂಡರು ಕಾಂಗ್ರೆಸ್ ಹೈಕಮಾಂಡ್ ಹಾಗೂ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಒತ್ತಾಯಿಸಿದ್ದಾರೆ.

ಸೋಮವಾರ ನಗರದ ಕುಂಚಿಟಿಗ ಸಮುದಾಯ ಭವನದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಜಿಲ್ಲಾ ಕುಂಚಿಟಿಗ ಒಕ್ಕಲಿಗರ ಸಂಘದ ಅಧ್ಯಕ್ಷ ಡಾ. ಶ್ರೀಧರ್, ರಾಜ್ಯದ 25-30 ಲಕ್ಷ ಜನಸಂಖ್ಯೆಯ ಕುಂಚಿಟಿಗ ಸಮಾಜದ ಏಕೈಕ ಶಾಸಕರಾಗಿರುವ ಟಿ.ಬಿ. ಜಯಚಂದ್ರ ಅವರಿಗೆ ಸಚಿವ ಸ್ಥಾನ ನೀಡಿ, ನಮ್ಮ ಸಮಾಜಕ್ಕೆ ಪ್ರಾತಿನಿಧ್ಯ ನೀಡಬೇಕು. ಐದು ದಶಕಗಳಿಂದ ಸಾರ್ವಜನಿಕ ಬದುಕಿನಲ್ಲಿ ಸೇವೆ ಸಲ್ಲಿಸುತ್ತಿರುವ ಕಾಂಗ್ರೆಸ್ ಪಕ್ಷದ ನಿಷ್ಠಾವಂತ ನಾಯಕರಾದ ಜಯಚಂದ್ರ ಅವರ ಅನುಭವ, ಹಿರಿತನ ಪರಿಗಣಿಸಿ ಕ್ಯಾಬಿನೆಟ್ ದರ್ಜೆಯ ಮಂತ್ರಿ ಸ್ಥಾನ ನೀಡಬೇಕು ಎಂದು ಒತ್ತಾಯಿಸಿದರು.

ಜಯಚಂದ್ರ ಅವರು ಕೇವಲ ರಾಜಕಾರಣಿ ಮಾತ್ರವಲ್ಲದೇ ಕುಂಚಿಟಿಗ ಜನಾಂಗದ ರಾಜಕೀಯ ಅಸ್ತಿತ್ವದ ಸಂಕೇತವಾಗಿದ್ದಾರೆ. ಅವರಿಗೆ ಸಚಿವ ಸಂಪುಟದಲ್ಲಿ ಸ್ಥಾನ ಕಲ್ಪಿಸುವುದು ಸಮುದಾಯದ ಗೌರವವನ್ನು ಉಳಿಸುವುದರ ಜೊತೆಗೆ ರಾಜ್ಯ ರಾಜಕಾರಣದಲ್ಲಿ ಸಾಮಾಜಿಕ ಸಮತೋಲನವನ್ನು ಕಾಪಾಡುವ ಮಹತ್ವದ ಹೆಜ್ಜೆಯಾಗಿರುತ್ತದೆ.

ಈ ಹಿಂದಿನ ಸಿಎಂ ಸಿದ್ಧರಾಮಯ್ಯರವರ ಸರ್ಕಾರದಲ್ಲಿ ಸಚಿವರಾಗಿ ಸುಮಾರು 42ಕ್ಕೂ ಹೆಚ್ಚು ಸಚಿವ ಸಂಪುಟ ಗುರುತರವಾದ ಉಪಸಮಿತಿಗಳಲ್ಲಿ ಅಧ್ಯಕ್ಷರಾಗಿ ಸದಸ್ಯರಾಗಿ ಕಾರ್ಯನಿರ್ವಹಿಸಿ ಸರ್ಕಾರಕ್ಕೆ ವರದಿಗಳನ್ನು ನೀಡುವುದರ ಮೂಲಕ ಸಾರ್ವಜನಿಕವಾಗಿ ಸರ್ಕಾರದ ಮತ್ತು ಪಕ್ಷದ ಘನತೆಯನ್ನು ಹೆಚ್ಚಿಸಿ ಪ್ರಶಂಸೆಗೆ ಪಾತ್ರರಾದ ಮುತ್ಸದ್ದಿ ನಾಯಕ ಎಂದು ಹೇಳಿದರು.

ಸಂಘದ ಮಾಜಿ ಅಧ್ಯಕ್ಷ ಆರ್. ಕಾಮರಾಜ್ ಮಾತನಾಡಿ, ಕುಂಚಿಟಿಗ ಒಕ್ಕಲಿಗ ಜನಾಂಗದ ಕ್ರಿಯಾಶೀಲ ರಾಜಕಾರಣಿ ಹಾಗೂ ಕಳೆದ 5 ದಶಕಗಳ ಸಕ್ರಿಯ ರಾಜಕೀಯ ಜೀವನದಲ್ಲಿ ಏಳು ಬಾರಿ ಕಳ್ಳಂಬೆಳ್ಳ ಮತ್ತು ಶಿರಾ ಕ್ಷೇತ್ರದಲ್ಲಿ ಶಾಸಕರಾಗಿ, ಸಚಿವರಾಗಿ ಟಿ.ಬಿ. ಜಯಚಂದ್ರ ಅವರು ರಾಜ್ಯಕ್ಕೆ ಅನೇಕ ಕೊಡುಗೆಗಳನ್ನು ಕೊಟ್ಟಿದ್ದಾರೆ. ಇಂತಹ ಹಿರಿಯ ನಾಯಕರಿಗೆ ರಾಜ್ಯ ಸರ್ಕಾರದ ಸಚಿವ ಸಂಪುಟದಲ್ಲಿ ಸ್ಥಾನ ನೀಡಿ ಕುಂಚಿಟಿಗ ಸಮಾಜಕ್ಕೆ ಪ್ರಾತಿನಿಧ್ಯ ನೀಡುವ ಜೊತೆಗೆ ಜಯಚಂದ್ರ ಅವರ ಪಕ್ಷನಿಷ್ಠೆಯನ್ನು ಗೌರವಿಸಬೇಕು ಎಂದು ಹೇಳಿದರು.

ಜಿಲ್ಲಾ ಪಂಚಾಯ್ತಿ ಮಾಜಿ ಸದಸ್ಯ ಜಿ.ಆರ್. ಶಿವರಾಮಯ್ಯ, ಶಿರಾ ತಾಲ್ಲೂಕು ಕುಂಚಿಟಿಗರ ಸಂಘದ ಅಧ್ಯಕ್ಷ ಮುಕುಂದಪ್ಪ ಮಾತನಾಡಿದರು.

ಜಿಲ್ಲಾ ಕುಂಚಿಟಿಗ ಒಕ್ಕಲಿಗರ ಸಂಘದ ಕಾರ್ಯದರ್ಶಿ ಬಿ.ವಿ. ಶಿವರಾಜು, ಖಜಾಂಚಿ ಭಕ್ತರಹಳ್ಳಿ ದೇವರಾಜು, ಮಾಜಿ ಅಧ್ಯಕ್ಷ ದೊಡ್ಡಲಿಂಗಪ್ಪ, ವಕೀಲ ಜಿ.ಎಲ್. ನರೇಂದ್ರಬಾಬು, ಶಿವರಾಮಯ್ಯ, ಮುಖಂಡರಾದ ಎಸ್. ಕೆ. ನಾಗರಾಜು, ಜಯಣ್ಣ, ಲಲಿತಾ ಮಲ್ಲಪ್ಪ, ನಾಗರಾಜು, ಶಶಿಧರ್, ಬೆಳ್ಳಾರ ರವಿ, ಗೋ.ಮು. ನಾಗರಾಜು, ನಿವೃತ್ತ ಪ್ರಾಚಾರ್ಯ ಮರಳಯ್ಯ, ಅಶೋಕ್, ಲಕ್ಷ್ಮೀಪ್ರಸಾದ್, ಬಸಂತನಹಳ್ಳಿ ರಾಜು, ಮಧು ಜೀರಿಗೆ, ಮದ್ದೆವಳ್ಳಿ ನಾಗಣ್ಣ, ಆರ್.ಟಿ. ನಾರಾಯಣಪ್ಪ, ಹೆಂದೊರೆ ಮೋಹನ್, ಗೌಡಗೆರೆ ವಸಂತ ಮೊದಲಾದವರು ಹಾಜರಿದ್ದರು.

# ಹಿರಿಯನಾಗರಿಕರ ಗುರುತಿನ ಚೀಟಿ ಅಭಿಯಾನ

ತುಮಕೂರು

ವಿಕಲಚೇತನರ ಹಾಗೂ ಹಿರಿಯನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ 2026ನೇ ಸಾಲಿನ "ವಿಶ್ವ ಹಿರಿಯನಾಗರಿಕರ ದಿನಾಚರಣೆ" ಅಂಗವಾಗಿ ರಾಜ್ಯಾದ್ಯಂತ "ಹಿರಿಯನಾಗರಿಕರ ಗುರುತಿನ ಚೀಟಿ ವಿಶೇಷ ಅಭಿಯಾನ" ವನ್ನು ಹಮ್ಮಿಕೊಳ್ಳಲಾಗಿದೆ.

ಹಿರಿಯರು ಗುರುತಿನ ಚೀಟಿ ಹೊಂದುವುದು ಕೇವಲ ಗುರುತಿನ ದಾಖಲೆ ಮಾತ್ರವಲ್ಲದೇ, ಜೀವನ ಮಟ್ಟವನ್ನು ಸುಧಾರಿಸಲು ಪ್ರಮುಖ ಪಾತ್ರ ವಹಿಸುತ್ತದೆ. ಗುರುತಿನ ಚೀಟಿ ಪಡೆಯುವುದರಿಂದ ವಿಮಾನ ಪ್ರಯಾಣ, ರೈಲ್ವೆ ಪ್ರಯಾಣ, ಬಸ್‌ಪಾಸ್ ಹಾಗೂ ಬಸ್ ಪ್ರಯಾಣದ ದರದಲ್ಲಿ ರಿಯಾಯಿತಿ ಆದಾಯ ತೆರಿಗೆಯಲ್ಲಿ ವಿನಾಯಿತಿ ಮತ್ತು ಹಿರಿಯನಾಗರಿಕರ ಪೋಷಣಾ ಭತ್ಯೆಯನ್ನು ಪಡೆಯಬಹುದಾಗಿದೆ. ಈಗಾಗಲೇ ಹಿರಿಯನಾಗರಿಕರ ಗುರುತಿನ ಚೀಟಿ ಹೊಂದಿರುವವರನ್ನು ಹೊರತುಪಡಿಸಿ ಜಿಲ್ಲೆಯ 60 ವರ್ಷ ಮೇಲ್ಪಟ್ಟ ಎಲ್ಲಾ ಹಿರಿಯನಾಗರಿಕರು ಆಧಾರ್ ಕಾರ್ಡ್‌ನಲ್ಲಿ ಕೆ.ವೈ.ಸಿ ಹೊಂದಿರುವ ಮೊಬೈಲ್‌ನೊಂದಿಗೆ, ಆಧಾರ್ ಕಾರ್ಡ್, ಪಾಸ್‌ಪೋರ್ಟ್ ಅಳತೆಯ ಪೋಟೋ, ರಕ್ತದ ಗುಂಪಿನ ದಾಖಲೆಯನ್ನು ತಮ್ಮ ಸಮೀಪದ ಗ್ರಾಮ ಒನ್, ಸಿ.ಎಸ್.ಸಿ ಕೇಂದ್ರ, ಕರ್ನಾಟಕ ಒನ್‌ಗೆ ಭೇಟಿ ನೀಡಿ, "ಹಿರಿಯನಾಗರಿಕರ ಗುರುತಿನ ಚೀಟಿ" ಪಡೆಯಲು ಆನ್‌ಲೈನ್ ಅರ್ಜಿ ಸಲ್ಲಿಸಿ, ಗುರುತಿನ ಚೀಟಿ ಪಡೆಯುವುದರ ಮೂಲಕ ವಿಶೇಷ ಅಭಿಯಾನವನ್ನು ಯಶಸ್ವಿಗೊಳಿಸಲು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯನಾಗರಿಕರ ಕಲ್ಯಾಣಾಧಿಕಾರಿ ಮನವಿ ಮಾಡಿದ್ದಾರೆ.

# ಉಚಿತ ಪಠ್ಯಪುಸ್ತಕ ವಿತರಣೆಯಿಂದ ಶಿಕ್ಷಣ ಎಲ್ಲರಿಗೂ ತಲುಪುತ್ತಿದೆ: ಬಿಇಒ

ಬೂದಿಕೋಟೆ

ಶಿಕ್ಷಣವನ್ನು ಸಾರ್ವತ್ರೀಕರಣಗೊಳಿಸುವ ಮತ್ತು ಪ್ರತಿಯೊಬ್ಬ ಮಗುವಿಗೂ ಗುಣಮಟ್ಟದ ಶಿಕ್ಷಣವನ್ನು ತಲುಪಿಸುವ ನಿಟ್ಟಿನಲ್ಲಿ ಸರ್ಕಾರಿ ಶಾಲೆಗಳಲ್ಲಿ ಉಚಿತ ಪಠ್ಯಪುಸ್ತಕ ವಿತರಣಾ ಯೋಜನೆಯು ಅತ್ಯಂತ ಪ್ರಮುಖ ಹೆಜ್ಜೆಯಾಗಿದೆ ಎಂದು ಪ್ರಭಾರಿ ಕ್ಷೇತ್ರಶಿಕ್ಷಣಾಧಿಕಾರಿ ಎಂ.ಕೆ.ಶಶಿಕಲಾ ಹೇಳಿದರು.

ಬಂಗಾರಪೇಟೆ ತಾಲ್ಲೂಕಿನ ಕಾಮಸಮುದ್ರ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಪಠ್ಯಪುಸ್ತಕ ವಿತರಿಸಿ ಮಾತನಾಡಿದ ಅವರು ಆರ್ಥಿಕವಾಗಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಶಿಕ್ಷಣ ಹೊರೆಯಾಗಬಾರದು ಎಂಬ ಉದಾತ್ತ ಉದ್ದೇಶದಿಂದ ಸರ್ಕಾರವು ಪ್ರತಿವರ್ಷ ಈ ಯೋಜನೆಯನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸುತ್ತಿದೆ, 1



ರಿಂದ 10 ನೇ ತರಗತಿಯವರೆಗೆ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಎಲ್ಲಾ ವಿದ್ಯಾರ್ಥಿಗಳಿಗೆ ಯಾವುದೇ ತಾರತಮ್ಯವಿಲ್ಲದೆ ಸಂಪೂರ್ಣ ಉಚಿತವಾಗಿ ಪಠ್ಯಪುಸ್ತಕಗಳನ್ನು ನೀಡಲಾಗುತ್ತದೆ ಎಂದರು.

ಸಕಾಲದಲ್ಲಿ ವಿತರಣೆ : ಶೈಕ್ಷಣಿಕ ವರ್ಷ ಆರಂಭವಾಗುವ ಮೊದಲೇ ಜೂನ್ ಮೊದಲ ವಾರದ ಒಳಗಾಗಿ ವಿದ್ಯಾರ್ಥಿಗಳ ಕೈಗೆ ಪಠ್ಯಪುಸ್ತಕಗಳು ತಲುಪುವಂತೆ ಶಿಕ್ಷಣ ಇಲಾಖೆ ಕ್ರಮ ಕೈಗೊಂಡಿದೆ, ಸುಧಾರಿತ ತಂತ್ರಜ್ಞಾನ ಮತ್ತು ಗುಣಮಟ್ಟದ ಕಾಗದವನ್ನು ಬಳಸಿ ಆಕರ್ಷಕವಾಗಿ ಪಠ್ಯಪುಸ್ತಕಗಳನ್ನು ಮುದ್ರಿಸಲಾಗುತ್ತದೆ, ಇದು ಮಕ್ಕಳಲ್ಲಿ ಓದುವ ಆಸಕ್ತಿಯನ್ನು ಹೆಚ್ಚಿಸುತ್ತದೆ ಎಂದರು.

ದಾಖಲಾತಿ ಹೆಚ್ಚಳ : ಬಡತನದ ಕಾರಣದಿಂದಾಗಿ ಯಾವುದೇ ಮಗು ಶಿಕ್ಷಣದಿಂದ ವಂಚಿತರಾಗಬಾರದು ಮತ್ತು ಶಾಲೆಗಳಲ್ಲಿ ಮಕ್ಕಳ ದಾಖಲಾತಿ ಪ್ರಮಾಣ ಹೆಚ್ಚಾಗಬೇಕು ಎನ್ನುವುದು ಇದರ ಮೂಲ ಉದ್ದೇಶವಾಗಿದೆ ಎಂದರು. ಶಾಲೆಯಿಂದ ಹೊರಗುಳಿಯುವುದನ್ನು ತಡೆಯುವುದು ಆರ್ಥಿಕ ಸಂಕಷ್ಟದಿಂದ ಪೋಷಕರು ಮಕ್ಕಳನ್ನು ಶಾಲೆಯಿಂದ ಬಿಡಿಸುವುದನ್ನು ತಡೆಗಟ್ಟಲು ಈ ಉಚಿತ ಸೌಲಭ್ಯ ಸಹಕಾರಿಯಾಗಿದೆ ಸಮಾಜದ ಎಲ್ಲಾ ತರದ ಮಕ್ಕಳಿಗೂ ಒಂದೇ ರೀತಿಯ ಪಠ್ಯಪುಸ್ತಕಗಳನ್ನು ಒದಗಿಸುವ ಮೂಲಕ ಶೈಕ್ಷಣಿಕ ಸಮಾನತೆಯನ್ನು ಕಾಯ್ದುಕೊಳ್ಳುವುದು ಎಂದರು.

ಸರ್ಕಾರಿ ಶಾಲೆಗಳ ಬಲವರ್ಧನೆಗೆ ಉಚಿತ ಪಠ್ಯಪುಸ್ತಕ ವಿತರಣೆ ವ್ಯವಸ್ಥೆಯು ಬೆನ್ನೆಲುಬಾಗಿ ನಿಂತಿದೆ. ಇದು ಕೇವಲ ಪುಸ್ತಕಗಳ ವಿತರಣೆಯಲ್ಲ ಬದಲಿಗೆ ಲಕ್ಷಾಂತರ ವಿದ್ಯಾರ್ಥಿಗಳ ಜ್ಞಾನದ ದೀವಿಗೆಯನ್ನು ಬೆಳಗಿಸುವ ಸರ್ಕಾರದ ಯಶಸ್ವಿ ಅಭಿಯಾನವಾಗಿದೆ, ಇದರಿಂದಾಗಿ ಗ್ರಾಮೀಣ ಮತ್ತು ನಗರ ಪ್ರದೇಶದ ಬಡ ವಿದ್ಯಾರ್ಥಿಗಳು ಯಾವುದೇ ಅಡೆತಡೆಯಿಲ್ಲದೆ ತಮ್ಮ ವಿದ್ಯಾಭ್ಯಾಸವನ್ನು ಮುಂದುವರಿಸಲು ಸಾಧ್ಯವಾಗಿದೆ ಎಂದು ತಿಳಿಸಿದರು.

ಮಗುವಿಗೆ ಮೊದಲು ಸಂಸ್ಕಾರ ಕಲಿಸಿ, ಗುರು-ಹಿರಿಯರಿಗೆ ಗೌರವ ಕೊಡುವುದನ್ನು ಕಲಿಸಬೇಕು, ಜೊತೆಯಲ್ಲಿ ಬರವಣಿಗೆ ಕಡೆ ಗಮನ ಹರಿಸಬೇಕೆಂದು ಸೂಚಿಸಿದರು, ಈ ಮಕ್ಕಳೇ ಭವಿಷ್ಯದ ಪ್ರಜೆಗಳು ಎಂದರು.

ಈ ವೇಳೆ ಇಸಿಒ ರಘುಕುಮಾರ್, ಸಿಆರ್‌ಪಿ ವೆಂಕಟಸ್ವಾಮಿ, ಮುಖ್ಯಶಿಕ್ಷಕ ಕೆ.ಜಿ.ಶ್ರೀನಿವಾಸ್, ಎಸ್‌ಡಿಎಂಸಿ ಅಧ್ಯಕ್ಷ ಶ್ರೀನಿವಾಸ, ಹಾಗೂ ಶಿಕ್ಷಕ ವೃಂದದವರು ಹಾಜರಿದ್ದರು.

# ಕಾರ್ಮಿಕರಿಗೆ ಸ್ಮಾರ್ಟ್‌ಕಾರ್ಡ್

ಕೋಲಾರ

ಜಿಲ್ಲೆಯ ಎಲ್ಲಾ ಅಸಂಘಟಿತ ವಲಯ ಕಾರ್ಮಿಕರಾದಬೀದಿ ಬದಿ ವ್ಯಾಪಾರಿಗಳು, ಬಿಸಿಯೂಟ ಸಿದ್ದಪಡಿಸುವವರು, ಹಮಾಲಿಗಳು, ಇಟ್ಟಿಗೆ ಭಟ್ಟಿ ಕಾರ್ಮಿಕರು, ಚಮ್ಮಾರರು, ಚಿಂದಿ ಆಯುವವರು, ಮನೆ ಕೆಲಸದವರು, ಆಗಸರು, ರಿಕ್ಷಾ ಚಾಲಕರು, ಭೂರಹಿತ ಕಾರ್ಮಿಕರು, ಕೃಷಿ ಕಾರ್ಮಿಕರು, ಬೀಡಿ ಕಾರ್ಮಿಕರು, ಕೈಮಗ್ಗ ಕಾರ್ಮಿಕರು, ಚರ್ಮೋದ್ಯಮದ ಕಾರ್ಮಿಕರು, ಧ್ವನಿ ಮತ್ತು ದೃಶ್ಯ ಕಾರ್ಮಿಕರು, ಟೈಲರ್ಸ್‌ಗಳು, ಅಡುಗೆ ಸಹಾಯಕರು, ಹೋಟೆಲ್ ಕಾರ್ಮಿಕರು ಮತ್ತು ಇದೇ ರೀತಿಯ ಇತರೆ ಅಸಂಘಟಿತ ಕಾರ್ಮಿಕರು ಹಾಗೂ ಮೋಟರ್ ಸಂಬಂಧಿತ ಕಾರ್ಮಿಕರಾದ ಚಾಲಕರು, ನಿರ್ವಾಹಕರು, ಮೆಕಾನಿಕ್ ವೃತ್ತಿ ಹಾಗೂ ಮೋಟಾರು ಸಂಬಂಧಿತ ವೃತ್ತಿ ನಿರ್ವಹಿಸುತ್ತಿರುವ ಕಾರ್ಮಿಕರ ಸ್ಮಾರ್ಟ್‌ಕಾರ್ಡ್‌ಗಳು ತಮ್ಮ ತಾಲ್ಲೂಕಿನ ಕಾರ್ಮಿಕ ನಿರೀಕ್ಷಕರ ಕಛೇರಿಗೆ ಬಂದಿದ್ದು ಮೇಲಿನ ವೃತ್ತಿ ನಿರ್ವಹಿಸಿಸುತ್ತಿರುವ ಅಸಂಘಟಿತ ಕಾರ್ಮಿಕರು ತಮ್ಮ ಹತ್ತಿರದ ಕಾರ್ಮಿಕ ನಿರೀಕ್ಷಕರ ಕಛೇರಿಗೆ ಭೇಟಿ ನೀಡಿ ತಮ್ಮ ಸ್ಮಾರ್ಟ್‌ಕಾರ್ಡ್ ಅನ್ನು ಪಡೆಯಬಹುದಾಗಿರುತ್ತದೆ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಾರ್ಮಿಕ ಅಧಿಕಾರಿಗಳ ಕಚೇರಿ, 2ನೇ ಮಹಡಿ, ಕೊಠಡಿ ಸಂಖ್ಯೆ ಎಸ್–19, ಜಿಲ್ಲಾಡಳಿತ ಭವನ, ಕೋಲಾರ ಜಿಲ್ಲೆ ಹಾಗೂ ತಾಲ್ಲೂಕಿನ ಕಾರ್ಮಿಕ ನಿರೀಕ್ಷಕರ ಕಛೇರಿಗಳನ್ನು ಸಂಪರ್ಕಿಸುವಂತೆ ಕೋಲಾರ ಜಿಲ್ಲೆಯ ಕಾರ್ಮಿಕ ಅಧಿಕಾರಿಗಳು ತಿಳಿಸಿದ್ದಾರೆ.

# ರಾಷ್ಟ್ರ ಪ್ರಶಸ್ತಿಗೆ ಆಹ್ವಾನ

ತುಮಕೂರು

ವಿಕಲಚೇತನರ ಹಾಗೂ ಹಿರಿಯನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ಕೇಂದ್ರ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಮಂತ್ರಾಲಯ ನವದೆಹಲಿ ಇವರಿಂದ 2026ನೇ ಸಾಲಿನ "ವಿಶ್ವ ವಿಕಲಚೇತನರ ದಿನಾಚರಣೆ" ಅಂಗವಾಗಿ ವಿಕಲಚೇತನರ ಸಬಲೀಕರಣಕ್ಕಾಗಿ ವಿವಿಧ ಕ್ಷೇತ್ರಗಳಲ್ಲಿ ಅತ್ಯುತ್ತಮ ಸಾಧನೆಗೈದ ವ್ಯಕ್ತಿ/ಸಂಸ್ಥೆಗಳಿಗೆ "ರಾಷ್ಟ್ರ ಪ್ರಶಸ್ತಿ" ನೀಡುವ ಸಲುವಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಇಚ್ಚಿಸುವವರು ಜುಲೈ 31ರೊಳಗಾಗಿ ವೆಬ್‌ಸೈಟ್ www.depwd.gov.in CxÀªÁ www.awards.gov.in ನಲ್ಲಿ ಅಗತ್ಯ ದಾಖಲಾತಿಗಳೊಂದಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ, ಸ್ವೀಕೃತಿಯೊಂದಿಗೆ ಹಾರ್ಡ್ ಪ್ರತಿಯನ್ನು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯನಾಗರಿಕರ ಕಲ್ಯಾಣಾಧಿಕಾರಿಗಳ ಕಚೇರಿ, ಜಿಲ್ಲಾ ಬಾಲಭವನ ಆವರಣ, ಎಂ.ಜಿ.ರಸ್ತೆ, ತುಮಕೂರು ಇಲ್ಲಿಗೆ ಸಲ್ಲಿಸಬೇಕೆಂದು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯನಾಗರಿಕರ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

# ಕುವೆಂಪು ಭಾಷಾ ಭಾರತಿ ಪ್ರಾಧಿಕಾರದಿಂದ ಅನುವಾದಿತ ಬರಹಗಳ ಆಹ್ವಾನ

ಬೆಂಗಳೂರು

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಂಗಸಂಸ್ಥೆಯಾದ ಕುವೆಂಪು ಭಾಷಾ ಭಾರತಿ ಪ್ರಾಧಿಕಾರವು ತನ್ನ ಚಾತುರ್ಮಾಸಿಕ ವಿದ್ವತ್ ಪತ್ರಿಕೆಗಾಗಿ ಅನುವಾದಿತ ಲೇಖನ, ಅನುವಾದಿತ ಕಥೆ, ಕವನ, ತಾತ್ವಿಕ ಲೇಖನಗಳು ಹಾಗೂ ಅನುವಾದಿತ ವಿಮರ್ಶೆ ಹಾಗೂ ಬರಹಗಳನ್ನು ಆಹ್ವಾನಿಸಲಾಗಿದೆ.

ಭಾಷಾಂತರ ಮತ್ತು ಸಾಹಿತ್ಯ ಕ್ಷೇತ್ರಕ್ಕೆ ಉತ್ತೇಜನ ನೀಡುವ ಉದ್ದೇಶದಿಂದ ಈ ಪತ್ರಿಕೆಯನ್ನು ಪ್ರಾರಂಭಿಸಲಾಗಿದ್ದು, ಆಸಕ್ತ ಬರಹಗಾರರು ಮತ್ತು ಅನುವಾದಕರು ತಮ್ಮ ಕೃತಿಗಳನ್ನು ಕಳುಹಿಸಬಹುದಾಗಿದೆ. ಕನ್ನಡದಿಂದ ಇಂಗ್ಲಿಷ್‌ಗೆ ಕಥೆ, ಕವಿತೆ ಹಾಗೂ ವೈಚಾರಿಕ ಬರಹಗಳು. ಇಂಗ್ಲಿಷ್‌ನಿಂದ ಕನ್ನಡಕ್ಕೆ ಕಥೆ, ಕವಿತೆ, ವೈಚಾರಿಕ ಬರಹಗಳು ಮತ್ತು ಏಕಾಂಕ ನಾಟಕಗಳು. ಅನ್ಯ ಭಾರತೀಯ ಭಾಷೆಗಳಿಂದ ಕನ್ನಡ ಅಥವಾ ಇಂಗ್ಲಿಷ್‌ಗೆ ಅನುವಾದಗೊಂಡ ಕಥೆ, ಕವಿತೆ ಹಾಗೂ ವೈಚಾರಿಕ ಲೇಖನಗಳು. ಅನುವಾದ ಸಿದ್ಧಾಂತದ ಬಗೆಗಿನ ಸ್ವತಂತ್ರ ಲೇಖನಗಳು ಅಥವಾ ಅನುವಾದಗಳು (ಕನ್ನಡ ಅಥವಾ ಇಂಗ್ಲಿಷ್‌ನಲ್ಲಿ) ಕನ್ನಡದಲ್ಲಿ ಪ್ರಕಟವಾಗಿರುವ ಅನುವಾದಿತ ಕೃತಿಗಳ ಅವಲೋಕನ ಹಾಗೂ ವಿಮರ್ಶೆಗಳು.

ಆಸಕ್ತರು ತಮ್ಮ ಬರಹಗಳನ್ನು ಜೂನ್ 30 ರೊಳಗೆ ಕಳುಹಿಸಬೇಕು. ಬರಹಗಳನ್ನು ಕಡ್ಡಾಯವಾಗಿ 'ನುಡಿ' ತಂತ್ರಾಂಶದಲ್ಲಿ ಟೈಪ್ ಮಾಡಿರಬೇಕು.

ಸಿದ್ಧಪಡಿಸಿದ ಬರಹಗಳನ್ನು ಪ್ರಾಧಿಕಾರದ ಅಧಿಕೃತ ಇಮೇಲ್ ವಿಳಾಸಕ್ಕೆ kbbp-bengaluru@ka.gov.in ಗೆ ನಿಗದಿತ ದಿನಾಂಕದೊಳಗೆ ಕಳುಹಿಸಿಕೊಡಬೇಕು.

ಹೆಚ್ಚಿನ ಮಾಹಿತಿಗಾಗಿ ಕುವೆಂಪು ಭಾಷಾ ಭಾರತಿ ಪ್ರಾಧಿಕಾರ, ಕಲಾಗ್ರಾಮ, ಜ್ಞಾನಭಾರತಿ, ಮಲ್ಲತ್ತಹಳ್ಳಿ, ಬೆಂಗಳೂರು–560056 ಅಥವಾ ದೂರವಾಣಿ ಸಂಖ್ಯೆ: 080–23183311 / 23183312 ಗೆ ಸಂಪರ್ಕಿಸಬಹುದು ಎಂದು ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ರಿಜಿಸ್ಟ್ರಾರ್ ದತ್ತಪ್ಪ ಸಾಗನೂರ ಅವರು ತಿಳಿಸಿದ್ದಾರೆ.

# ವಿಪತ್ತು ನಿರ್ವಹಣೆಯಲ್ಲಿ ನಿರ್ಲಕ್ಷ್ಯ ಸಹಿಸಲ್ಲ: ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಎಚ್ಚರಿಕೆ

ಕೋಲಾರ

ಮುಂಬರುವ ಮುಂಗಾರು ಮಳೆ ಹಾಗೂ ಯಾವುದೇ ರೀತಿಯ ನೈಸರ್ಗಿಕ ವಿಪತ್ತುಗಳನ್ನು ಸಮರ್ಥವಾಗಿ ಎದುರಿಸಲು ಕೋಲಾರ ಜಿಲ್ಲಾಡಳಿತ ಸಂಪೂರ್ಣ ಸಜ್ಜಾಗಿದೆ. ವಿಪತ್ತು ನಿರ್ವಹಣೆಯಲ್ಲಿ ಯಾವುದೇ ಹಂತದಲ್ಲೂ ಅಧಿಕಾರಿಗಳು ಕಿಂಚಿತ್ತೂ ನಿರ್ಲಕ್ಷ್ಯ ತೋರಬಾರದು. ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುವಲ್ಲಿ ವಿಳಂಬ ಧೋರಣೆ ಅನುಸರಿಸಿದರೆ ಕಠಿಣ ಕ್ರಮ ಎದುರಿಸಬೇಕಾಗುತ್ತದೆ ಎಂದು ಮಾನ್ಯ ಜಿಲ್ಲಾಧಿಕಾರಿಗಳಾದ ಡಾ. ಎಂ. ಆರ್. ರವಿ ಅವರು ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದರು.

ಅವರು ಇಂದು ಜಿಲ್ಲಾಧಿಕಾರಿಗಳ ಕಚೇರಿ ಕೇಸ್ವಾನ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ 'ಜಿಲ್ಲಾ ವಿಪತ್ತು ನಿರ್ವಹಣೆ ಸಮಿತಿ'ಯ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು.

ಈ ವರ್ಷದ ಪೂರ್ವ ಮುಂಗಾರು ಹಂಗಾಮಿನಲ್ಲಿ ವಾಡಿಕೆಗಿಂತ ಶೇ. 7 ರಷ್ಟು




ಮಳೆ ಕೊರತೆಯಾಗಿದೆ. ಆದರೆ, ಮುಂಬರುವ ನೈಋತ್ಯ ಮುಂಗಾರು ಹಂಗಾಮಿನಲ್ಲಿ ವಾಡಿಕೆಗಿಂತ ಹೆಚ್ಚಿನ ಮಳೆಯಾಗುವ ಮುನ್ಸೂಚನೆ ಇದೆ. ಹೀಗಾಗಿ ಮಳೆಯಿಂದಾಗುವ ಅನಾಹುತಗಳನ್ನು ತಡೆಯಲು ಮತ್ತು ಮಳೆ ನೀರನ್ನು ಸಮರ್ಪಕವಾಗಿ ಕೃಷಿಗೆ ಬಳಸಿಕೊಳ್ಳಲು ಎಲ್ಲಾ ಇಲಾಖೆಗಳು ಈಗಿನಿಂದಲೇ ಸಿದ್ಧತೆ ಮಾಡಿಕೊಳ್ಳಬೇಕು ಎಂದರು.

ಹವಾಮಾನ ವೈಪರೀತ್ಯದಿಂದ ಜಿಲ್ಲಾದ್ಯಂತ ಬರೋಬ್ಬರಿ 1,618 ಹೆಕ್ಟೇರ್ ಪ್ರದೇಶದಲ್ಲಿ ಮಾವು ಬೆಳೆ ನಷ್ಟವಾಗಿದೆ. ಪರಿಹಾರ ವಿತರಣೆಗಾಗಿ ನಡೆಯುತ್ತಿರುವ ದತ್ತಾಂಶ ದಾಖಲಾತಿ ಪ್ರಕ್ರಿಯೆ ಶೇ. 89ರಷ್ಟು ಮುಗಿದಿದೆ. ವಿಳಂಬ ಮಾಡುತ್ತಿರುವ ಕೆಜಿಎಫ್, ಮಾಲೂರು ಹಾಗೂ ಅತಿ ಹೆಚ್ಚು ಹಾನಿಗೊಳಗಾಗಿರುವ ಶ್ರೀನಿವಾಸಪುರ ತಾಲೂಕುಗಳ ಅಧಿಕಾರಿಗಳು ಕೇವಲ 2 ದಿನಗಳಲ್ಲಿ ಈ ಪ್ರಕ್ರಿಯೆಯನ್ನು ಶೇ. 100ರಷ್ಟು ಪೂರ್ಣಗೊಳಿಸಬೇಕು ಎಂದರು.

ಜೊತೆಗೆ, ಇತ್ತೀಚಿನ 'ದಿಶಾ' ಸಮಿತಿ ಸಭೆಯ ನಿರ್ದೇಶನದಂತೆ, ಮಾವು ಗುಣಮಟ್ಟ ಕುಸಿತ, ರಫ್ತು ಸಮಸ್ಯೆಗಳು ಹಾಗೂ ಮಾರುಕಟ್ಟೆ ತಿರಸ್ಕಾರದ ಹಿಂದಿನ ಕಾರಣಗಳನ್ನು ನಿಖರವಾಗಿ ಅಧ್ಯಯನ ಮಾಡಲು ತಕ್ಷಣವೇ 'ತಜ್ಞರ ಸಮಿತಿ'ಯೊಂದನ್ನು ರಚಿಸುವಂತೆ ತೋಟಗಾರಿಕಾ ಇಲಾಖೆಗೆ ಆದೇಶಿಸಿದರು.

ಜಿಲ್ಲೆಯಲ್ಲಿ ಮುಂಗಾರು ಹಂಗಾಮಿಗೆ 72 ರಿಂದ 76 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಗುರಿ ಹೊಂದಲಾಗಿದೆ. ಪ್ರಸ್ತುತ 6,474 ಕ್ವಿಂಟಾಲ್ ಬಿತ್ತನೆ ಬೀಜಗಳ ದಾಸ್ತಾನು ಇದ್ದು, ವಿಶೇಷವಾಗಿ ಶೇಂಗಾ ಬೀಜಕ್ಕೆ ಹೆಚ್ಚು ಬೇಡಿಕೆ ಬರುವ ನಿರೀಕ್ಷೆ ಇದೆ. ಎಪಿಎಂಸಿ ಮಾರುಕಟ್ಟೆಯಲ್ಲಿ ಶೇಂಗಾ ಬೀಜಕ್ಕೆ ಕ್ವಿಂಟಾಲ್ ಗೆ 7,000 ದಿಂದ 8,000 ರೂ. ದರವಿದ್ದರೆ, ಕೃಷಿ ಇಲಾಖೆಯಿಂದ ಸಬ್ಸಿಡಿಯಡಿ ಕೇವಲ 4,500 ರೂ. ಗಳಿಗೆ ವಿತರಿಸಲಾಗುತ್ತಿದೆ. ಈ ಬಗ್ಗೆ ರೈತರಿಗೆ ವ್ಯಾಪಕ ಅರಿವು ಮೂಡಿಸಿ, ಸಕಾಲದಲ್ಲಿ ಬೀಜ ವಿತರಣೆಯಾಗುವಂತೆ ಕೃಷಿ ಇಲಾಖೆ ನೋಡಿಕೊಳ್ಳಬೇಕು ಎಂದರು.

ಜಿಲ್ಲೆಯಲ್ಲಿ ಕಸ ವಿಲೇವಾರಿ ಕುರಿತಂತೆ ಅಸಮಾಧಾನ ತೋರಿದ ಜಿಲ್ಲಾಧಿಕಾರಿಗಳು, ಕೆಲವೆಡೆ ಪ್ಲಾಸ್ಟಿಕೆ ಸೇರಿದಂತೆ ಇತರ ತ್ಯಾಜ್ಯಗಳು ಸುರಿದಿರುವುದು ಕಂಡುಬಂದಿದೆ. ಈ ಕೂಡಲೇ ಸಂಬಂಧಿಸಿದವರು ಕ್ರಮ ಕೈಗೊಳ್ಳಬೇಕೆಂದು ಸೂಚಿಸಿದರು

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಪ್ರವೀಣ್. ಪಿ. ಬಾಗೇವಾಡಿ, ಅಪರ ಜಿಲ್ಲಾಧಿಕಾರಿ ಡಾ. ಎಸ್. ಎಂ. ಮಂಗಳ, ಸರಿನಾ ಸಿಕ್ಕಲಿಗರ್, ಉಪವಿಭಾಗಧಿಕಾರಿ ಜಂಬಗಿ ರೇಣುಕಾಪ್ರಸಾದ್ ದಿಲೀಪ್, ಎಲ್ಲಾ ತಾಲ್ಲೂಕಿನ ತಹಸೀಲ್ದಾರ್, ತೋಟಗಾರಿಕೆ ಉಪನಿರ್ದೇಶಕ ಕುಮಾರಸ್ವಾಮಿ, ಪಶುಪಾಲನಾ ಇಲಾಖೆ ಉಪನಿರ್ದೇಶಕ ಡಾ. ರಮೇಶ್ ಸೇರಿದಂತೆ ಜಿಲ್ಲೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# 'ಪರಿಸರ ಸಂರಕ್ಷಣೆ ದೈನಂದಿನ ಜೀವನದ ಭಾಗವಾಗಬೇಕು'

ತುಮಕೂರು

ಪರಿಸರ ಸಂರಕ್ಷಣೇ ಕೇವಲ ಒಂದು ದಿನದ ಆಚರಣೆಯಾಗಬಾರದು. ಅದು ನಮ್ಮ ದೈನಂದಿನ ಜೀವನದ ಭಾಗವಾಗಬೇಕು ಎಂದು ಪ್ರಧಾನ ಜಿಲ್ಲಾ ನ್ಯಾಯಾಧೀಶರಾದ ಬಿ. ಜಯಂತ್ ಕುಮಾರ್ ಕರೆ ನೀಡಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರವು ಪ್ರಧಾನ ಮಂತ್ರಿ ಶ್ರೀ ನವೋದಯ ವಿದ್ಯಾಲಯದ ಸಹಭಾಗಿತ್ವದಲ್ಲಿ ತುಮಕೂರಿನ ಐತಿಹಾಸಿಕ ಹಾಗೂ ಪ್ರಕೃತಿ ರಮಣೀಯ ತಾಣವಾದ ದೇವರಾಯನದುರ್ಗದಲ್ಲಿ ಭಾನುವಾರ ಆಯೋಜಿಸಿದ್ದ ವಿಶ್ವ ಪರಿಸರ ದಿನಾಚರಣೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಅರಣ್ಯ ಸಂಪತ್ತನ್ನು ಉಳಿಸಿ ಬೆಳೆಸುವಲ್ಲಿ ಕಾನೂನು ಚೌಕಟ್ಟು ಹಾಗೂ ಸಾರ್ವಜನಿಕರ ಜವಾಬ್ದಾರಿ ಎರಡೂ ಮುಖ್ಯ ಎಂದು ತಿಳಿಸಿದರು.

ಅರಣ್ಯ ಇಲಾಖೆ ಅಧಿಕಾರಿಗಳಾದ ಪವಿತ್ರ ವಿ. ಹಾಗೂ ನಮಿತಾ ಎಸ್. ಅವರು ಪಿಎಂ ಶ್ರೀ ನವೋದಯ ವಿದ್ಯಾಲಯದ ಶಾಲಾ ವಿದ್ಯಾರ್ಥಿಗಳಿಗೆ ಕಾಡಿನ ಮಹತ್ವ, ಜೀವವೈವಿಧ್ಯತೆ ಹಾಗೂ ಪರಿಸರ ಸಮತೋಲನ ಕುರಿತು ಪ್ರಾಯೋಗಿಕ ಮಾಹಿತಿ ನೀಡಿದರು.




ವಿಶ್ವ ಪರಿಸರ ದಿನಚರಣೆ ಅಂಗವಾಗಿ ದೇವರಾಯನದುರ್ಗದ ಅರಣ್ಯ ಪ್ರದೇಶದ ಆವರಣದಲ್ಲಿ ವಿವಿಧ ಜಾತಿಯ ಅಪರೂಪದ ಸಸಿಗಳನ್ನು ನೆಟ್ಟು ಅವುಗಳನ್ನು ಪೋಷಿಸುವ ಸಂಕಲ್ಪ ಮಾಡಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಲೋಕೇಶ್ ಹವಳೆ, ತುಮಕೂರು ನ್ಯಾಯಾಂಗ ಘಟಕದ ಎಲ್ಲಾ ನ್ಯಾಯಾಧೀಶರುಗಳು ಹಾಗೂ ಅರಣ್ಯ ಇಲಾಖೆ ಅಧಿಕಾರಿ, ಸಿಬ್ಬಂದಿಗಳು ಮತ್ತು ಶಾಲಾ ಮಕ್ಕಳು ಹಾಜರಿದ್ದರು.

# ಅತ್ಯಾಧುನಿಕ ಜಿಲ್ಲಾಸ್ಪತ್ರೆ 18 ತಿಂಗಳಲ್ಲಿ ಸೇವೆಗೆ ಲಭ್ಯ : ಡಿಸಿಎಂ ಪರಂ



ತುಮಕೂರು

ಸಾರ್ವಜನಿಕರ ಬೇಡಿಕೆಯಂತೆ ಆಧುನಿಕ ಸೌಲಭ್ಯಗಳ ಜಿಲ್ಲಾಸ್ಪತ್ರೆ 18 ತಿಂಗಳಲ್ಲಿ ಜನಸೇವೆಗೆ ಸಿಗಲಿದೆ ಎಂದು ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ ತಿಳಿಸಿದ್ದಾರೆ.

ತುಮಕೂರು ಜಿಲ್ಲಾ ಆಸ್ಪತ್ರೆ ಕಟ್ಟಡವನ್ನು ತೆರವುಗೊಳಿಸುವ ಕಾಮಗಾರಿಗೆ ಸೋಮವಾರ ಚಾಲನೆ ನೀಡಿ ಅವರು ಮಾತನಾಡಿದರು.

ಪ್ರಸ್ತುತ ಸಾರ್ವಜನಿಕ ಆಸ್ಪತ್ರೆ ಸ್ವಾತಂತ್ರ್ಯ ಪೂರ್ವದಲ್ಲಿ ನಿರ್ಮಾಣವಾದ ಆಸ್ಪತ್ರೆಯಾಗಿದ್ದು, ಅತ್ಯಾಧುನಿಕ ಸೌಲಭ್ಯಗಳ ಆಸ್ಪತ್ರೆ ನಿರ್ಮಿಸುವಂತೆ ಸಾರ್ವಜನಿಕರಿಂದ ಬೇಡಿಕೆ ಇತ್ತು. ಈ ಹಿನ್ನೆಲೆಯಲ್ಲಿ ಇದೇ ಜಾಗದಲ್ಲಿ ಜಿಲ್ಲಾ ಆಸ್ಪತ್ರೆಯನ್ನು 131 ಕೋಟಿ ರೂ. ವೆಚ್ಚದಲ್ಲಿ ಆಸ್ಪತ್ರೆ ಕಟ್ಟಡ ನಿರ್ಮಾಣವಾಗಲಿದ್ದು, ಮುಂದಿನ 18 ತಿಂಗಳಲ್ಲಿ ಸಾರ್ವಜನಿಕ ಸೇವೆಗೆ ಲಭ್ಯವಾಗಲಿದೆ ಎಂದು ಅವರು ತಿಳಿಸಿದರು.

18 ತಿಂಗಳಿಗೆ ಮುನ್ನವೇ ಕಾಮಗಾರಿ ಪೂರ್ಣಗೊಳಿಸುವಂತೆ ಗುತ್ತಿಗೆದಾರರಿಗೆ ಸೂಚಿಸಲಾಗಿದೆ ಎಂದ ಅವರು, ಪಾರಂಪರಿಕ ಆಸ್ಪತ್ರೆ ಕಟ್ಟಡದ ಕಲ್ಲುಗಳನ್ನು ಹಾಗೂ ಇತರ ಸಾಮಗ್ರಿಗಳನ್ನು ಅತ್ಯಂತ ಜತನದಿಂದ ಬಳಸಿಕೊಳ್ಳುವಂತೆ ಈ ಹಿಂದೆ ಸಮಗ್ರವಾಗಿ ಯೋಚಿಸಿ ತೀರ್ಮಾನಿಸಲಾಗಿದೆ. ಹಿಂದಿನ ಕಲ್ಲುಗಳನ್ನು ಸದ್ಬಳಕೆ ಮಾಡಿಕೊಳ್ಳಲಾಗುವುದು ಎಂದು ಅವರು ತಿಳಿಸಿದರು.

ಸೂರಜ್‌ಗೆ ಸಂತಾಪ: ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಸೂರಜ್ ಹೆಗಡೆ ಅವರ ನಿಧನಕ್ಕೆ ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ ತೀವ್ರ ಸಂತಾಪ ವ್ಯಕ್ತಪಡಿಸಿದರು.

ಗ್ಯಾರಂಟಿ ಸಮಿತಿಯ ಅಧ್ಯಕ್ಷರಾಗಿ ಹಾಗೂ ಕಾಂಗ್ರೆಸ್ ಪಕ್ಷದಲ್ಲಿ ಕ್ರಿಯಾಶೀಲರಾಗಿದ್ದ ಅವರು ಹೃದಯಾ ಘಾತದಿಂದ ಇಂದು ನಿಧನರಾಗಿದ್ದಾರೆ. ದೇವರಾಜ ಅರಸು ಅವರ ಮೊಮ್ಮಗನಾಗಿದ್ದ ಅವರು ಭವಿಷ್ಯದ ಭರವಸೆ ಯಾಗಿದ್ದರು. ಅವರ ನಿಧನದ ಸುದ್ದಿ ತುಂಬಾ ನೋವು ತಂದಿದೆ. ಅವರ ಆತ್ಮಕ್ಕೆ ಚಿರಶಾಂತಿ ಸಿಗಲಿ, ಅವರ ಕುಟುಂಬ ವರ್ಗಕ್ಕೆ ಈ ನೋವನ್ನು ಭರಿಸುವ ಶಕ್ತಿಯನ್ನು ಭಗವಂತ ಕರುಣಿಸಲಿ ಎಂದು ಸಂತಾಪ ವ್ಯಕ್ತಪಡಿಸಿದರು.

# ಅರಣ್ಯ ಮತ್ತು ಕಂದಾಯ ಭೂಮಿಯ ಸಮಸ್ಯೆ ಇತ್ಯರ್ಥಕ್ಕೆ ಭೂ ಸಂತ್ರಸ್ತರಿಂದ ಮನವಿ

ಕೋಲಾರ

ಜಿಲ್ಲೆಯಲ್ಲಿ ಅರಣ್ಯ ಇಲಾಖೆಯು ಕಂದಾಯ ಭೂಮಿಯಲ್ಲಿರುವ ರೈತರ ಜಮೀನಗಳಿಗೆ ಅಕ್ರಮವಾಗಿ ಪ್ರವೇಶ ಮಾಡಿ ಬೆಳೆಗಳು ಹಾಗೂ ಯಂತ್ರೋಪಕರಣಗಳನ್ನು ನಾಶ ಮಾಡಿದ್ದು, ಜಿಲ್ಲಾಡಳಿತ ಮತ್ತು ಜನಪ್ರತಿನಿಧಿಗಳ ಆದೇಶಕ್ಕೂ ಮನ್ನಣೆಯಿಲ್ಲವಾಗಿದೆ ಕೂಡಲೇ ಅರಣ್ಯ ಭೂಮಿ ಯಾವುದು ಮತ್ತು ಕಂದಾಯ ಇಲಾಖೆಗೆ ಒಳಪಡುವ ಭೂಮಿ ಯಾವುದು ಎಂಬುದನ್ನು ಪ್ರತ್ಯೇಕ ಮಾಡಿ ರೈತರಿಗೆ ನ್ಯಾಯ ಕೊಡಿಸುವಂತೆ ಒತ್ತಾಯಿಸಿ ಅರಣ್ಯ ಮತ್ತು ಜೀವಶಾಸ್ತ್ರ ಪರಿಸರ ಇಲಾಖೆಯ ಪ್ರಧಾನ ಕಾರ್ಯದರ್ಶಿ ಮನೋಜ್ ಕುಮಾರ್ ಅವರಿಗೆ ಜಿಲ್ಲಾ ಭೂ ಸಂತ್ರಸ್ತರ ಹೋರಾಟ ಸಮಿತಿಯಿಂದ ಮನವಿ ಸಲ್ಲಿಸಿ ಒತ್ತಾಯಿ ಸಿದರು.

ಹೋರಾಟ ಸಮಿತಿಯ ಜಿಲ್ಲಾ ಸಂಚಾಲಕ ಆರ್ ಶ್ರೀನಿವಾಸ್ ಮನವಿ ಮಾಡಿ ತಾಲ್ಲೂಕಿನ ಹುತ್ತೂರು



ಹೋಬಳಿ ಶಿಳ್ಳೆಂಗೆರೆ, ಹರಟಿ, ಮಲ್ಲಂಡಹಳ್ಳಿ, ಕೋಟಿಗಾನಹಳ್ಳಿ, ಅಬ್ಬಣಿ ಹಾಗೂ ಹರಳಕುಂಟೆ ಜಮೀನಿನ ಕಂದಾಯ ದಾಖಲೆಗಳನ್ನು ಮತ್ತು ಅರಣ್ಯ ಇಲಾಖೆಯ 1941 ಫಾರೆಸ್ಟ್ ಸೆಟ್ಲ್‌ಮೆಂಟ್ ಆದೇಶವನ್ನು ಪರಿಶೀಲಿಸದೆ ಅಂದಿನ ಭೂ ದಾಖಲೆಗಳ ಸರ್ವೆಯರ್ ಹಾಗೂ ಅರಣ್ಯ ಇಲಾಖೆಯ ಅಧಿಕಾರಿಗಳು 100 ವರ್ಷದ ಹಿಂದಿನ ದಾಖಲೆಗಳನ್ನು ಮರೆ ಮಾಚಿ. ರೈತರಿಗೆ ನೀಡಿದ್ದ ಕಂದಾಯ ಭೂಮಿಯಲ್ಲಿನ ಬೆಳೆಗಳನ್ನು, ಪಾಲಿ ಹೌಸ್ ಕಾಂಪೌಂಡ್, ಮರಗಳನ್ನು ಜೆಸಿಬಿಗಳ ಮೂಲಕ ಅರಣ್ಯಒತ್ತುವರಿಯ ಹೆಸರಿನಲ್ಲಿ ಪೊಲೀಸರ ಬೆಂಗಾವಲಿನಲ್ಲಿ ನಾಶ ಮಾಡಿ ರೈತರಿಗೆ ತೊಂದರೆ ಕೊಟ್ಟಿದ್ದಾರೆ ಎಂದು ವಿವರಿಸಿದರು. ಹಿಂದೆ ಮಹಾರಾಜರ ಆಡಳಿತದಲ್ಲಿ 1923 ರ ಅವಧಿಯಲ್ಲಿಯೇ ಅರಣ್ಯ ಮತ್ತು ಕಂದಾಯ ಭೂಮಿ ಯಾವುದು ಎಂದು ಗುರುತಿಸಲಾಗಿದೆ ಜಿಲ್ಲೆಯಲ್ಲಿ ವಿನಾಕಾರಣ ಅರಣ್ಯ ಇಲಾಖೆಯು ರೈತರನ್ನು ಎತ್ತಿಕಟ್ಟುವ ಮೂಲಕ ನಿರಂತರವಾಗಿ ದೌರ್ಜನ್ಯ ನಡೆಸಿದ್ದಾರೆ ಕೂಡಲೇ ದಾಖಲೆಗಳನ್ನು ಪರಿಶೀಲನೆ ಮಾಡಿ ರೈತರಿಗೆ ನ್ಯಾಯ ಕೊಡುವಂತೆ ಮನವಿ ಮಾಡಿದರು.

ಮನವಿ ಸ್ವೀಕರಿಸಿದ ಅರಣ್ಯ ಇಲಾಖೆಯ ಮನೋಜ್ ಕುಮಾರ್ ಮಾತನಾಡಿ ದಾಖಲೆಗಳನ್ನು ಪರಿಶೀಲನೆ ಮಾಡಿ ಅರಣ್ಯ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ ಮಾಡಿ ಕಾನೂನು ಪ್ರಕಾರವಾಗಿ ನ್ಯಾಯ ಕೊಡಿಸುವ ಭರವಸೆ ನೀಡಿದರು ಭೂ ಸಂತ್ರಸ್ತರ ಹೋರಾಟ ಸಮಿತಿ ದೀಪಕ್ ಕುಮಾರ್ ಜೊತೆಯಲ್ಲಿ ಇದ್ದರು.

# ಎಸ್.ಐ.ಆರ್ ಬಗ್ಗೆ ಜಾಗೃತಿ ಮೂಡಿಸಲು ಟಿ.ಕೆ ರಮೇಶ್ ಕರೆ

ಕೋಲಾರ

ಅರ್ಹ ನಾಗರಿಕರೆಲ್ಲರಿಗೂ ಮತದಾನದ ಹಕ್ಕು ಸಿಗುವಂತೆ ಮಾಡಲು ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಬಗ್ಗೆ ವ್ಯಾಪಕವಾಗಿ ಪ್ರಾಚಾರ ಕೈಗೊಳ್ಳಲು ಅಧಿಕಾರಿಗಳಿಗೆ ಜಿಲ್ಲಾ ಪಂಚಾಯತ್ ಉಪಕಾರ್ಯ ದರ್ಶಿ ಟಿ.ಕೆ ರಮೇಶ್ ತಿಳಿಸಿದರು. ಎಸ್.ಐ.ಆರ್ ಸಂಬಂಧ ಸ್ವೀಪ್ ಚಟುವಟಿಕೆಗಳನ್ನು ಹಮ್ಮಿಕೊಳ್ಳುವ ಬಗ್ಗೆ ಜಿಲ್ಲಾ ಪಂಚಾಯತಿ ಸಭಾಗಂಣದಲ್ಲಿ ಹಮ್ಮಿಕೊಂಡಿದ್ದ ಸಭೆಯಲ್ಲಿ ಮಾತನಾಡಿ ಅವರು. ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಆಂದೋಲನವನ್ನು ಯಶಸ್ವಿಗೊಳಿಸಲು, ಗ್ರಾಮೀಣ ಪ್ರದೇಶದಲ್ಲಿ ವ್ಯಾಪಕವಾಗಿ ಸ್ವೀಪ್ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದು ಹೇಳಿದರು.

ಯಾವುದೇ ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಹೊರಗುಳಿದಂತೆ ಕ್ರಮ ವಹಿಸುವುದು. ಯಾವುದೇ ಅನರ್ಹ ಮತದಾರರನ್ನು ಮತದಾರರ ಪಟ್ಟಿಗೆ ಸೇರ್ಪಡೆಗೊಳಿಸದಂತೆ ಎಚ್ಚರ ವಹಿಸುವುದು ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆಯ ಪ್ರಮುಖ ಉದ್ದೇಶವಾಗಿದೆ. ಅದೇ ರೀತಿ ಹಿಂದಿನ ಸಮಗ್ರ ಪರಿಷ್ಕರಣೆಯ ಮತದಾರರ ಪಟ್ಟಿಗೆ ಪ್ರಸ್ತುತ ಮತದಾರರ ಪಟ್ಟಿಯಲ್ಲಿರುವ ಮತದಾರರ ಅರ್ಹತೆಯನ್ನು ಪರಿಶೀಲಿಸುವುದು ಅಗತ್ಯವಾಗಿದೆ. ಹೊಸ ಮತದಾರರ ಸೇರ್ಪಡೆ, ಮರಣ ಹೊಂದಿದ ವ್ಯಕ್ತಿಗಳ ಹೆಸರುಗಳನ್ನು ಪಟ್ಟಿಯಿಂದ ಕೈಬಿಡುವುದು. ಖಾಯಂ ಆಗಿ ವಾಸಸ್ಥಳ ಬದಲಾಯಿಸಿದವರ ಅಥವಾ ಒಂದಕ್ಕಿಂತ ಹೆಚ್ಚು ಕಡೆ ಹೆಸರು ನಮೂದಾಗಿರುವ ಮತದಾರರ ಹೆಸರುಗಳನ್ನು ಪಟ್ಟಿಯಿಂದ ತೆಗೆದುಹಾಕಲು ಕ್ರಮ ವಹಿಸಲಾಗುತ್ತದೆ. ಈ ವೇಳೆ ಯಾವುದೇ ಗೊಂದಲಕ್ಕೆ ಅವಕಾಶ ನೀಡಬಾರದು ಎಂದು ಕಿವಿಮಾತು ಹೇಳಿದರು.

ಸಭೆಯಲ್ಲಿ ಮಾತನಾಡಿದ ರಾಜ್ಯ ಮಟ್ಟದ ಮಾಸ್ಟರ್ ತರಬೇತುದಾರರಾದ ನಂಜುಂಡೆಗೌಡ, ಶಾಲಾ ಕಾಲೇಜುಗಳಲ್ಲಿ 17 ವರ್ಷ ತುಂಬಿದ ಯುವಕರು ತಮ್ಮ ಹೆಸರನ್ನು ಮತದಾರರ ಪಟ್ಟಿಗೆ ಸೇರಿಸಲು ಮುಂಗಡವಾಗಿಯೇ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ECINET ಆ್ಯಪ್ ಅನ್ನು ಡೌನ್‌ಲೋಡ್ ಮಾಡಿಕೊಂಡು ಮನೆಯಲ್ಲೇ ಕುಳಿತು/ ತಾವು ಇರುವ ಸ್ಥಳದಲ್ಲಿ ಹೊಸ ನೋಂದಣಿ ಅಥವಾ ತಿದ್ದುಪಡಿ ಮಾಡಿಕೊಳ್ಳಬಹುದು, ಈ ಬಗ್ಗೆ ಎಲ್ಲಾ ಶಾಲಾ–ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಅರಿವು ಮೂಡಿಸಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕರಾದ ಹೆಚ್.ಎನ್ ಮಂಜುನಾಥ್ ಸ್ವಾಮಿ, ಸಹಾಯಕ ಕಾರ್ಯದರ್ಶಿಗಳಾದ ವೆಂಕಟಾಚಲಪತಿ, ವಿಶೇಷಚೇತನ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ ಆರ್. ಮಂಜುಳ, ಉಪನ್ಯಾಸಕರಾದ ಎಂ. ವೆಂಕಟರಮಣ, ರಾಣಿ.ಬಿ, ಬಿಎಂ ರಾಧಮ್ಮ, ಪದ್ಮ ವಿಎಸ್. ಅನುರಾಧ ಕೆ ಭಾಗವಹಿಸಿದ್ದರು.

# ಕಲಾಶಿಬಿರ, ತರಬೇತಿ ಕಾರ್ಯಾಗಾರ

ಬೆಂಗಳೂರು

ಕರ್ನಾಟಕ ಲಲಿತಕಲಾ ಅಕಾಡೆಮಿಯು ಚಿತ್ರಕಲೆಯನ್ನು ಉತ್ತೇಜಿಸುವ ಉದ್ದೇಶದಿಂದ 2026–27ನೇ ಸಾಲಿನ ಗಿರಿಜನ ಉಪಯೋಜನೆ ಯಡಿಯಲ್ಲಿ (ಪರಿಶಿಷ್ಟ ಪಂಗಡ) ಚಿತ್ರಕಲಾ ವ್ಯಾಸಂಗ ಮಾಡುತ್ತಿರುವ ಅರ್ಹ ವಿದ್ಯಾರ್ಥಿಗಳಿಗೆ ಕಲಾಶಿಬಿರ, ತರಬೇತಿ ಕಾರ್ಯಾಗಾರ ಹಾಗೂ ಕಮ್ಮಟಗಳಲ್ಲಿ ಪಾಲ್ಗೊಳ್ಳಲು ಅರ್ಜಿಗಳನ್ನು ಆಹ್ವಾನಿಸಿದೆ.

ಕರ್ನಾಟಕದ ಅಂಗೀಕೃತಗೊಂಡ ಚಿತ್ರಕಲಾ ಶಿಕ್ಷಣ ಸಂಸ್ಥೆಗಳಲ್ಲಿ ಪ್ರಸ್ತುತ ವ್ಯಾಸಂಗ ಮಾಡುತ್ತಿರುವ, 18 ವರ್ಷ ಮೇಲ್ಪಟ್ಟ ಪರಿಶಿಷ್ಟ ಪಂಗಡದ ಆಸಕ್ತ ವಿದ್ಯಾರ್ಥಿಗಳು ಈ ಯೋಜನೆಗೆ ಅರ್ಜಿ ಸಲ್ಲಿಸಬಹುದಾಗಿದೆ.

18 ವರ್ಷ ಮೇಲ್ಪಟ್ಟವರಾಗಿರಬೇಕು ಮತ್ತು ಅಂಗೀಕೃತ ಕಾಲೇಜಿನಲ್ಲಿ ಚಿತ್ರಕಲಾ ವ್ಯಾಸಂಗ ಮಾಡುತ್ತಿರಬೇಕು. ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಲು ಜೂನ್ 30 ಕೊನೆಯ ದಿನವಾಗಿದೆ.

ಅರ್ಜಿಯೊಂದಿಗೆ ಇತ್ತೀಚಿನ 2 ಪಾಸ್‌ಪೋರ್ಟ್ ಅಳತೆಯ ಭಾವಚಿತ್ರಗಳು, 04 ಚಿತ್ರಕಲಾಕೃತಿಗಳ ಛಾಯಾ ಚಿತ್ರಗಳು/ ಪೋಟೋಗಳು, ಸ್ವ–ವಿವರ, ಆರ್‌ಡಿ ಸಂಖ್ಯೆ ಹೊಂದಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಪಡಿತರ ಚೀಟಿ ಮತ್ತು ಆಧಾರ್ ಕಾರ್ಡ್ ಜೆರಾಕ್ಸ್ ಪ್ರತಿಗಳು, ಜಾತಿ ಪ್ರಮಾಣ ಪತ್ರದ ಪ್ರತಿಯನ್ನು ಗೆಜೆಟೆಡ್ ಅಧಿಕಾರಿಯಿಂದ ದೃಢೀಕರಿಸಿರಬೇಕು. ಪ್ರಸ್ತುತ ವ್ಯಾಸಂಗ ಮಾಡುತ್ತಿರುವ ಕಾಲೇಜಿನ ಪ್ರಾಚಾರ್ಯರಿಂದ ಪಡೆದ ವ್ಯಾಸಂಗ ಪ್ರಮಾಣ ಪತ್ರ, ಹಿಂದಿನ ವರ್ಷದ ಕೋರ್ಸಿನಲ್ಲಿ ಪಡೆದ ಅಂಕಪಟ್ಟಿ (ದೃಢೀಕೃತ ಜೆರಾಕ್ಸ್ ಪ್ರತಿ) ಲಗತ್ತಿಸಿ, ಅರ್ಜಿಯನ್ನು ರಿಜಿಸ್ಟ್ರಾರ್, ಕರ್ನಾಟಕ ಲಲಿತಕಲಾ ಅಕಾಡೆಮಿ, ಕನ್ನಡ ಭವನ, 2ನೇ ಮಹಡಿ, ಜೆ.ಸಿ.ರಸ್ತೆ, ಬೆಂಗಳೂರು – 560 002 ಇವರಿಗೆ ಸಲ್ಲಿಸಬೇಕು. ವಿವರಗಳಿಗಾಗಿ ಅಕಾಡೆಮಿಯ ಇ–ಮೇಲ್ kla.karnataka@gmail.com ಅಥವಾ ದೂರವಾಣಿ ಸಂಖ್ಯೆ: 080–22480297 ಅನ್ನು ಸಂಪರ್ಕಿಸಬಹುದಾಗಿದೆ ಎಂದು ಲಲಿತಕಲಾ ಅಕಾಡೆಮಿಯ ರಿಜಿಸ್ಟ್ರಾರ್ ಎನ್. ನಮ್ರತ ತಿಳಿಸಿದ್ದಾರೆ.

# 'ರೈತರ ವಿಚಾರದಲ್ಲಿ ಸಿಎಂ ಡಿಕೆಶಿ ಒಂದು ಕಣ್ಣಿಗೆ ಸುಣ್ಣ ಒಂದು ಕಣ್ಣಿಗೆ ಬೆಣ್ಣೆ ನೀತಿ'

ಕನಕಪುರ

ನಿಮ್ಮ ಭೂಮಿ ನಿಮ್ಮ ಹಕ್ಕು ಎಂದು ತಾಲ್ಲೂಕು ರೈತರಿಗೆ ಹೇಳುವ ಮುಖ್ಯಮಂತ್ರಿ ಶಿವಕುಮಾರ್ ರವರು ಬಿಡದಿ ರೈತರ ಪಾಲಿಗೆ ನಿಮ್ಮ ಭೂಮಿ ನಮ್ಮ ಹಕ್ಕು ಎಂಬ ವರ್ತನೆ ತೋರುತ್ತಿರುವುದು ಬೇಸರದ ಸಂಗತಿ ಎಂದು ರೈತ ಸಂಘದ ಜಿಲ್ಲಾಧ್ಯಕ್ಷ ಕಾಡಹಳ್ಳಿ ಅನುಕುಮಾರ್ ವಿಷಾದ ವ್ಯಕ್ತಪಡಿಸಿದ್ದಾರೆ.

ರೈತ ಸಂಘದ ಮುಖಂಡರು ನಡೆಸಿದ ಸುದ್ದಿ ಗೋಷ್ಠಿಯಲ್ಲಿ ಮಾತನಾಡಿದ ಅವರು ರೈತರ ವಿಚಾರದಲ್ಲಿ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ದ್ವಿಮುಖ ನೀತಿಯನ್ನ ಅನುಸರಿಸುತಿದ್ದು ತಾಲೂಕಿನ ಜನರಿಗೆ ಅಭಿನಂದನಾ ಸಮರ್ಪಣ ಸಮಾರಂಭದಲ್ಲಿ ಹೋದ ಕಡೆಯಲ್ಲೆಲ್ಲಾ ರೈತರು ಭೂಮಿಯನ್ನು ಮಾರಾಟ ಮಾಡಬೇಡಿ ಎಂದು ಹೇಳಿರುವ ಮುಖ್ಯಮಂತ್ರಿಗಳು ಬಿಡದಿ ಟೌನ್ ಷಿಪ್ ವಿಚಾರದಲ್ಲಿ ಕಂಚಗಾರನಲ್ಲಿ ರೈತರು ಜಮೀನನ್ನು ಭೂ ಸ್ವಾಧೀನ ಮಾಡಿಕೊಂಡು ಒಕ್ಕಲೆಬ್ಬಿಸುತ್ತಿರುವುದರಿಂದ ಸುಮಾರು ಎಂಟು ಸಾವಿರ ಎಕರೆ ವಿಸ್ತೀರ್ಣದ ರೈತರ



ಭೂಮಿ ನಾಶವಾಗುತ್ತಿದೆ, ಈ ಹಿಂದೆ ನೀವು ನಗರಭಿವೃದ್ಧಿ ಸಚಿವರಾಗಿದ್ದ ಕಾಲದಲ್ಲಿಯೇ ಇದು ಸ್ವಾಧೀನ ಪ್ರಕ್ರಿಯೆ ಆಗಿದ್ದು ಈಗ ತಾಲೂಕಿನಲ್ಲಿ ಭಾಷಣ ಮಾಡುವಾಗ ರೈತರ ಭೂಮಿ ಮಾರಾಟ ಮಾಡಬೇಡಿ ಭೂಮಿಯ ಬೆಲೆ ಗಗನ ಕ್ಕೇರಲಿದೆ ಎನ್ನುವ ಮಾತುಗಳನ್ನು ಆಡಿರುವುದು ತಾವೊಬ್ಬ ರೈತರ ಪರ ಎಂದು ಬಿಂಬಿಸಿಕೊಳ್ಳಲು ಹೊರಟಿ ರುವಂತೆ ಕಾಣುತ್ತಿದ್ದು ರೈತರ ಬಗ್ಗೆ ಏಕೆ ತಾರತಮ್ಯ ಒಂದು ಭಾಗಕ್ಕೆ ಒಂದು ಮತ್ತೊಂದು ಭಾಗಕ್ಕೆ ಇನ್ನೊಂದು ಎನ್ನುವ ರೀತಿ ವರ್ತಿಸುತ್ತಿದ್ದೀರಿ ಈ ದ್ವಿಮುಖ ನೀತಿಯನ್ನ ಕೂಡಲೇ ಕೈಬಿಡಬೇಕು, ರಾಜ್ಯದ ಎಲ್ಲಾ ರೈತರು ಒಂದೇ ಎನ್ನುವ ಮನೋಭಾವನೆಯನ್ನು ಬೆಳೆಸಿಕೊಳ್ಳಬೇಕು ಎಂದು ಮನವಿ ಮಾಡಿದರು.

ತಾಲ್ಲೂಕು ಅಧ್ಯಕ್ಷ ಶಿವಗೂಳಿಗೌಡ ಸೇರಿದಂತೆ ರೈತ ಮುಖಂಡರು ಮಾತನಾಡಿ ನೂತನವಾಗಿ ಮುಖ್ಯಮಂತ್ರಿ ಯಾಗಿರುವ ಮಾನ್ಯ ಡಿ ಕೆ ಶಿವಕುಮಾರ್ ರವರು ಜನತೆಗೆ

ಕೃತಜ್ಞತೆ ಸಲ್ಲಿಸುವ ನೆಪದಲ್ಲಿ ಎಲ್ಲಾ ಪಂಚಾಯಿತಿಗಳಿಗೂ ಭೇಟಿ ನೀಡುವ ಉದ್ದೇಶ ಮುಂದೆ ಕ್ಷೇತ್ರದ ಜನಗಳ ಮನಸ್ಥಿತಿ ಬದಲಾಗಿ ಎಫ್‌ಐಆರ್ ಮೂಲಕ ಸಾವಿರಾರು ಮತದಾರರು ಡಿಲೀಟ್ ಆಗುವುದರಿಂದ ಈಗಿನಿಂದಲೇ ಮುಂದಿನ ಚುನಾವಣೆಗೆ ತಯಾರಿ ನಡೆಸುವ ಉದ್ದೇಶ ಎದ್ದು ಕಾಣುತ್ತಿದ್ದು ತಾವು ಈ ರೀತಿಯ ಗಿಮಿಕ್‌ಗಳನ್ನು ಬಿಟ್ಟು ನಿರಂತರ ಮಳೆಯ ಕೊರತೆಯಿಂದ ರೈತರು ಅನುಭವಿಸುತ್ತಿರುವ ನಷ್ಟದ ಬಗ್ಗೆ ಜಿಲ್ಲೆ ಬಗ್ಗೆ ಯೋಚನೆ ಯನ್ನೇ ಮಾಡದೇ ರೈತರ ಬಗ್ಗೆ ಗಮನ ಹರಿಸಿ ಈ ವರ್ಷ ಕೂಡ ಮಾವು ವಿಫಲವಾಗಿದ್ದು ಉಳಿದ ಬೆಳಗಳಿಗೂ ಸಹ ಬೆಲೆ ಇಲ್ಲದಂತಾಗಿದೆ.

ಪ್ರತಿ ಟನ್ ಕೇವಲ 6,000 ಗಳಿಗೆ ಮಾರಾಟವಾಗು ತ್ತಿರುವುದರಿಂದ ಇದು ರೈತರ ಕೂಲಿಗೂ ಸಹ ಸಾಕಾಗುತ್ತಿಲ್ಲ ಇದು ಸರ್ಕಾರ ಕಣ್ಣಿಗೆ ಕಾಣುತ್ತಿಲ್ಲವೇ ಈಗಾಗಲೇ ಸರ್ಕಾರಕ್ಕೆ 53 ಕೋಟಿಗಳ ವರದಿಯನ್ನು ಜಿಲ್ಲಾ ಆಡಳಿತ ಕಳಿಸಿದ್ದು ಹಣ ಬಿಡುಗಡೆಯಾಗಬೇಕಾ ದರೆ ರಾಜ್ಯ ಸರ್ಕಾರ ಶೇಕಡ 25ರಷ್ಟು ಹಣವನ್ನು ಜಮಾ ಮಾಡಬೇಕು ಅದರ ಬಗ್ಗೆ ಗಮನ ಹರಿಸಿ ರೈತರ ನೆರವಿಗೆ ಬರುವಂತೆ ಮನವಿ ಮಾಡಿದರು.

ಮೂರು ವರ್ಷದಿಂದ ನಿರಂತರ ಅನುಭವಿ ಸಿರುವ ಕಷ್ಟಕ್ಕೆ ಒಂದು ನ್ಯಾಯಪೈಸೆ ರೈತರಿಗೆ ಸಹಾಯ ಮಾಡದ ರಾಜ್ಯ ಸರ್ಕಾರವು ಕೇಂದ್ರ ಸರ್ಕಾರದ ಬೆಳೆ ವಿಮೆ ಯೋಜನೆಯ ಮಾವು ಬೆಳೆ ರೈತರಿಗೆ 5 ವರ್ಷದಿಂದ ನಿರಂತರ ಸಹಾಯ ವಾಗಿದೆ ಇದು ಇಲ್ಲವಾದಲ್ಲಿ ಇನ್ನೂ ರೈತರ ಜೀವನ ನಿಕೃಷ್ಟವಾಗುತ್ತಿತ್ತು.

ತಾವು ಮೊದಲು ರೈತರ ಆರ್ಥಿಕ ಪರಿಸ್ಥಿತಿ ಸುಧಾರಿಸಲು ಕೈಗೊಳ್ಳಬೇಕಾದ ಅಗತ್ಯ ಕ್ರಮಗಳ ಬಗ್ಗೆ ಯೋಚನೆ ಮಾಡಿ ಈ ಕೂಡಲೇ ರೈತರ ಸಾಲ ಮನ್ನಾ ಮಾಡಬೇಕು ಹಿಂದೆ ನಿಮ್ಮ ಸರ್ಕಾರದಲ್ಲಿಯೇ ಈಗಲ್ಟನ್ ರೆಸಾರ್ಟ್ಸ್ ಭೂ ಸ್ವಾದಿನಕ್ಕೆ ಒಂದು ಎಕರೆಗೆ 12 ಕೋಟಿ ನೀಡಿರುತ್ತೀರಿ ಅದರ ಪಕ್ಕದಲ್ಲಿಯೇ ಇರುವ ರೈತರ ಭೂ ಸ್ವಾದಿನಕ್ಕೆ ಕೇವಲ ಎರಡು ಕೋಟಿ ರೂ ಪರಿಹಾರ ಹಣ ನೀಡುವುದಾಗಿ ಹೇಳಿರುವುದು ಯಾವ ನ್ಯಾಯ ಎಂದು ರೈತ ಸಂಘದ ಮುಖಂಡರು ಪ್ರಶ್ನಿಸಿದರು.

ಕನಕಪುರ ಸಾತನೂರು ರೈತರು ಒಂದೇ ಬಿಡದಿ ರೈತರು ಒಂದೇ ಆದ್ದರಿಂದ ಭೂ ಸ್ವಾದಿನ ಪ್ರಕ್ರಿಯೆಯನ್ನು ಕೈ ಬಿಡಬೇಕು ಮತ್ತು ಸಾತನೂರು ಕನಕಪುರದ ಭೂಮಿ ಬೆಲೆ ಹೆಚ್ಚಬೇಕು ಬಿಡದಿ ರೈತರ ಭೂಮಿ ಮಾತ್ರ ಮಾರ ಬೇಕೆಂಬ ತಮ್ಮ ನಿಲುವಿನ ಬಗ್ಗೆ ದಯಮಾಡಿ ಗಮನ ಹರಿಸಿ ರೈತರ ಹಿತ ಕಾಯುವ ಕೆಲಸವನ್ನ ಮಾಡಬೇಕೆಂದು ಒತ್ತಾಯಿಸಿದರು.

ರೈತ ಸಂಘದ ಸಾತನೂರು ಹೋಬಳಿ ಖಂಜಾಂಚಿ ಸತೀಶ್ ರೈತ ಮುಖಂಡ ಕಸಬಾ ಹೋಬಳಿ ಅದ್ಯಕ್ಷ ನಾರಾಯಣ್, ಮುಖಂಡ ಸ್ವಾಮಣ್ಣ. ಚನ್ನಪ್ಪ. ನಿಂಗೇಗೌಡ ಸೇರಿದಂತೆ ಹಲವರು ಈ ವೇಳೆ ಉಪಸ್ಥಿತರಿದ್ದರು.

10/06/2026

# ಭಾರತ ಸಾರಥಿ

BHARATHA SARATHI KANNADA DAILY NEWS PAPER

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇಪೇಪರ್: www.epaperbharathasarathi.com | ಇಮೇಲ್: desk.newsbox@gmail.com



ಯಲಹಂಕ ಶಾಸಕ ಎಸ್ ಆರ್ ವಿಶ್ವನಾಥ್ ಅವರು ನೂತನ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರನ್ನು ಭೇಟಿ ಮಾಡಿ ಅಭಿನಂದಿಸಿದರು.

## “ಚದುರಂಗದ ಆಟದಲ್ಲಿ ಯಾವ ಕಾಯಿ ಮುನ್ನಡೆಸುತ್ತೇವೆ ಎಂದು ಯಾರೂ ಹೇಳುವುದಿಲ್ಲ”

ಬೆಂಗಳೂರು

“ರಾಜಕಾರಣದಲ್ಲಿ ಚದುರಂಗದ ಆಟ ಆಡುವಾಗ ಯಾರಾದರು ಯಾವ ರೀತಿ ಕಾಯಿ ನಡೆಸುತ್ತಾರೆ ಎಂದು ಹೇಳುತ್ತಾರೆಯೇ? ಯಾರು ಹೇಳುವುದಿಲ್ಲ " ಎಂದು ಸಿಎಂ ಡಿ.ಕೆ. ಶಿವಕುಮಾರ್ ಅವರು ಹೇಳಿದರು.

ವಿಧಾನಸೌಧದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಸೋಮವಾರ ಪ್ರತಿಕ್ರಿಯೆ ನೀಡಿದರು. ಪರಿಷತ್ ಚುನಾವಣೆಯಲ್ಲಿ ವಿನಯ್ ಕಾರ್ತಿಕ್ ಸ್ಪರ್ಧೆ, ಜೆಡಿಎಸ್ ಹೆಚ್ಚುವರಿ ಅಭ್ಯರ್ಥಿ ಸ್ಪರ್ಧೆ ಬಗ್ಗೆ ಕೇಳಿದಾಗ ಶಿವಕುಮಾರ್ ಅವರು ಈ ರೀತಿ ಪ್ರತಿಕ್ರಿಯೆ ನೀಡಿದರು. ದೇವೇಗೌಡರಿಗೆ ರಾಜ್ಯಸಭೆ ಟಿಕೆಟ್ ತಪ್ಪಿಸಿ ಬಿಜೆಪಿ ಅನ್ಯಾಯ ಮಾಡಿದೆ ಎಂದು ಸುರ್ಜೇವಾಲ ಅವರು ಟೀಕೆ ಮಾಡಿರುವ ಬಗ್ಗೆ ಕೇಳಿದಾಗ, "ನಾನು ಸದ್ಯಕ್ಕೆ ಏನು ಮಾತನಾಡುವುದಿಲ್ಲ. ಅವರು ಮಾತಾಡಿದ್ದಾರೆ. ಆದರೆ ನಾನು ಮಾತಾಡಕ್ಕೆ ಹೋಗುವುದಿಲ್ಲ. ನಮ್ಮ ಪಕ್ಷದ ಚಿಂತನೆಯನ್ನು ನಾನು ಪಾಲನೆ ಮಾಡುತ್ತೇನೆ" ಎಂದರು.

“ಸೂರಜ್ ಹೆಗ್ಡೆ ಆತ್ಮೀಯ ಸ್ನೇಹಿತ. ತ್ಯಾಗಕ್ಕೆ ಹೆಸರಾದವರು. ಇದೇ ಸ್ಥಾನ ಬೇಕು ಎಂದೂ ಕೇಳುತ್ತಿರಲಿಲ್ಲ. ನಾನು ಹಿಂದೆ ಅವರಿಗೆ ಮೈಸೂರು ಸಂಸದ ಸ್ಥಾನಕ್ಕೆ ಟಿಕೆಟ್ ಕೊಡಿಸಬೇಕು ಅಂತ ಬಹಳ ಹೋರಾಟ ಮಾಡಿದ್ದೆ. ಅವರು ದೇವರಾಜ ಅರಸು ಅವರ ಮೊಮ್ಮಗ. ಪಕ್ಷದ ನಿಷ್ಠಾವಂತ ಕಾರ್ಯಕರ್ತ. ನನ್ನ ಜೊತೆ ಪದಾಧಿಕಾರಿಯಾಗಿದ್ದವರು. ಗ್ಯಾರಂಟಿ ಸಮಿತಿ ಉಪಾಧ್ಯಕ್ಷರಾಗಿದ್ದವರು. ನಮ್ಮ ಸರ್ಕಾರ ರಾಜ್ಯ ಮಟ್ಟದ ಸಚಿವ ಸ್ಥಾನ ಕೊಟ್ಟಿತ್ತು. ಅವರ ಮೇಲೆ ನಾನು ದೊಡ್ಡ ಆಕಾಂಕ್ಷೆ ಇಟ್ಟುಕೊಂಡಿದ್ದೆ. ಪಕ್ಷ ಅವರ ಮೇಲೆ ಅವಲಂಬಿಸಿತ್ತು” ಎಂದು ತಿಳಿಸಿದರು.

“ನಿಷ್ಠಾವಂತ ಕಾರ್ಯಕರ್ತ ಪಕ್ಷಕ್ಕೆ ಸಿಗುವುದು ಬಹಳ ವಿಶೇಷ. ಈಗಲೂ ಕೂಡ ಅನೇಕ ವಿಚಾರಗಳನ್ನು ಅವರ ವಿಚಾರದಲ್ಲಿ ಚಿಂತನೆ ಮಾಡಲಾಗಿತ್ತು. ಎಐಸಿಸಿ ನಮ್ಮ ಕಾರ್ಯದರ್ಶಿಗಳಾಗಿ, ನಮ್ಮ ರಾಜ್ಯ ಮಟ್ಟದ ಪದಾಧಿಕಾರಿಗಳಾಗಿ ಕೆಲಸ ಮಾಡುತ್ತಿದ್ದರು" ಎಂದರು.

"ಅವರ ಕುಟುಂಬದ ದುಃಖ ನೋಡಲು ಆಗುತ್ತಿಲ್ಲ. ಅವರ ತಂದೆ ಕೂಡ ಒಬ್ಬ ಹಿರಿಯ ದೊಡ್ಡ ರಾಜಕಾರಣಿ. ವೈಯಕ್ತಿಕವಾಗಿ ನಮ್ಮೆಲ್ಲರಿಗೂ ಕೂಡ ಬಹಳ ದುಃಖ ಉಂಟಾಗಿದೆ. ಪಕ್ಷದ ಹಾಗೂ ಸರ್ಕಾರದ ಪರವಾಗಿ ಗೌರವ ನಮನ ಸಲ್ಲಿಸುತ್ತೇನೆ. ಕರ್ನಾಟಕ ಸರ್ಕಾರ ಅವರಿಗೆ ಸರ್ಕಾರಿ ಗೌರವದೊಂದಿಗೆ ಅಂತಿಮ ನಮನ ಸಲ್ಲಿಸಲಾಗುವುದು. ಅವರ ಕುಟುಂಬದವರು ಅಂತಿಮ ಕಾರ್ಯ ಯಾವಾಗ ತೀರ್ಮಾನ ಮಾಡುತ್ತಾರೋ ಆಗ ಗೌರವವನ್ನು ಕೊಡುತ್ತೇವೆ. ಈ ವಿಚಾರವಾಗಿ ನಾನು ಈಗಾಗಲೇ ಮುಖ್ಯ ಕಾರ್ಯದರ್ಶಿಗಳಿಗೆ ಆದೇಶ ತಿಳಿಸಿದ್ದೇನೆ. ಅವರ ಅಂತ್ಯಕ್ರಿಯೆಯಲ್ಲಿ ನಾನು ಕೂಡ ಭಾಗಿಯಾಗುತ್ತೇನೆ" ಎಂದರು.

## ದೇಶಕ್ಕಾಗಿ ಪ್ರಾಣತೆತ್ತ ಮಗನ ನೆನೆದು ರಾಷ್ಟ್ರಪತಿಯ ಹೆಗಲಿಗೊರಗಿ ಕಣ್ಣೀರಿಟ್ಟ ತಾಯಿ

ನವದೆಹಲಿ

ಭಾರತದ ವೀರ ಯೋಧರಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಕೀರ್ತಿ ಚಕ್ರ, ವೀರ ಚಕ್ರ, ಶೌರ್ಯ ಚಕ್ರ ಪ್ರಶಸ್ತಿ ಪ್ರದಾನ ಮಾಡಿದ್ದಾರೆ. ಈ ವೇಳೆ ಮರಣೋತ್ತರ ಪ್ರಶಸ್ತಿಯನ್ನು ಸ್ವೀಕರಿಸುವಾಗ ಆ ಸೈನಿಕರ ಕುಟುಂಬಸ್ಥರು ಕಣ್ಣೀರಿಟ್ಟ ದೃಶ್ಯಗಳು ನೋಡುಗರನ್ನು ಕೂಡ ಭಾವುಕರನ್ನಾಗಿಸಿದವು.

ದೇಶಕ್ಕಾಗಿ ಪ್ರಾಣತ್ಯಾಗ ಮಾಡಿದ ಸಿಪಾಯಿ ಜಂಜಾಲ್ ಪ್ರವೀಣ್ ಪ್ರಭಾಕರ್ ಅವರ ತಾಯಿಯು ತಮ್ಮ ಮಗನ ಪರವಾಗಿ ‘ಕೀರ್ತಿ ಚಕ್ರ’ ಪ್ರಶಸ್ತಿಯನ್ನು ಸ್ವೀಕರಿಸಿದ ಕ್ಷಣ ಇಡೀ ದೇಶವನ್ನೇ ಭಾವುಕಗೊಳಿಸಿದೆ.

ಜುಲೈ 6, 2024ರಂದು ಜಮ್ಮು ಮತ್ತು ಕಾಶ್ಮೀರದ ಕುಲ್ಗಾಮ್‌ನಲ್ಲಿ ನಡೆದ ಭಯೋತ್ಪಾದನಾ ನಿಗ್ರಹ ಕಾರ್ಯಾಚರಣೆಯ ವೇಳೆ ಅಪ್ರತಿಮ ಧೈರ್ಯ ಮತ್ತು ಶೌರ್ಯವನ್ನು ಪ್ರದರ್ಶಿಸಿದ್ದ ಸಿಪಾಯಿ ಪ್ರವೀಣ್ ಪ್ರಭಾಕರ್, ಇಬ್ಬರು ಉಗ್ರರನ್ನು ಹತ್ಯೆಗೈದು ವೀರಮರಣ ಅಪ್ಪಿದ್ದರು. ಅವರ ಈ ಸಾಹಸ ಮತ್ತು ದೇಶಕ್ಕಾಗಿ ನೀಡಿದ ಬಲಿದಾನವನ್ನು ಭಾರತವು ಎಂದಿಗೂ ಮರೆಯಲು ಸಾಧ್ಯವಿಲ್ಲ.

ಈ ಹಿನ್ನೆಲೆಯಲ್ಲಿ ಅವರಿಗೆ ಮರಣೋತ್ತರ ಕೀರ್ತಿ ಚಕ್ರ ಪ್ರಶಸ್ತಿ ನೀಡಲಾಗಿದೆ. ಈ ವೇಳೆ ಅವರ ತಾಯಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಹೆಗಲಿಗೊರಗಿ ಬಿಕ್ಕಿ ಬಿಕ್ಕಿ ಅತ್ತಿದ್ದಾರೆ. ಅವರನ್ನು ರಾಷ್ಟ್ರಪತಿ ಸಾಂತ್ವನಗೊಳಿಸಿದ್ದಾರೆ.

# ಒಟ್ಟಾಗಿ ಸಾಗಿದರೆ ಗೆಲುವು ಖಚಿತ: ಸಿಎಂ

ಬೆಂಗಳೂರು



"ಪಕ್ಷಬೇಧ ಮರೆತು ಎಲ್ಲರನ್ನೂ ಒಟ್ಟಿಗೇ ಕರೆದುಕೊಂಡು ಹೋಗಿ. 2028 ರ ವಿಧಾನಸಭೆ ಚುನಾವಣೆ ಗೆಲ್ಲುವುದು ನಿಮ್ಮ ಗುರಿಯಾಗಿರಲಿ" ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ತಿಳಿಸಿದ್ದಾರೆ. ಮಾಜಿ ಶಾಸಕ ಮಂಜುನಾಥ್ ಹಾಗೂ ಮೈಸೂರು ಮುಖಂಡ, ವಕ್ತಾರ ಲಕ್ಷ್ಮಣ್ ಅವರ ನೇತೃತ್ವದಲ್ಲಿ ಹುಣಸೂರು ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಕುಮಾರಪಾರ್ಕ್ ಸರಕಾರಿ ಅತಿಥಿ ಗೃಹದಲ್ಲಿ ತಮ್ಮನ್ನು ಅಭಿನಂದಿಸಿದ ಸಂದರ್ಭದಲ್ಲಿ ಶಿವಕುಮಾರ್ ಅವರು ಮಾತನಾಡಿದರು.

ಹಿಂದೆ ಆಗಿದ್ದು, ದ್ವೇಷ, ಅಸೂಯೆ, ಪ್ರತೀಕಾರ ಎಂಬುದನ್ನು ಮರೆಯಿರಿ. ಕೆಲವೊಮ್ಮೆ ತಪ್ಪು ಮಾಹಿತಿ, ಅಭಿಪ್ರಾಯಗಳಿಂದ ಯಡವಟ್ಟು ಆಗಿರಬಹುದು. ಆದರೆ ಅದನ್ನೇ ಮನಸ್ಸಿನಲ್ಲಿ ಇಟ್ಟುಕೊಂಡು ಭವಿಷ್ಯದ ಗುರಿ ಮರೆಯಬೇಡಿ ಎಂದರು. ಇವತ್ತು ಬಂದಿರುವ ಸಿಎಂ ಹುದ್ದೆ ನನ್ನದಲ್ಲ. ನಿಮ್ಮದು, ರಾಜ್ಯದ ಜನರದು. ನೀವು ಇಲ್ಲ ಅಂದ್ರೆ ನಾನು ಇಲ್ಲ. ನನಗೆ ಬಂದಿರುವ ಈ ಹುದ್ದೆ ಹಿಂದೆ ನಿಮ್ಮ ಪರಿಶ್ರಮ, ಪ್ರೀತಿ, ವಿಶ್ವಾಸ, ಹೋರಾಟ ಕೆಲಸ ಮಾಡಿದೆ. ನಿಮ್ಮ ಸಹಕಾರವನ್ನು ಎಂದಿಗೂ ಮರೆಯುವುದಿಲ್ಲ ಎಂದರು.

ಈಗ ಯಾವುದೇ ಕಾರಣಕ್ಕೂ ಮೈ ಮರೆಯಬೇಡಿ. ಎಸ್ ಐ ಆರ್ ಸಂಚಿಗೆ ನಿಮ್ಮ ಮತ ಬಲಿ ಆಗಲು ಬಿಡಬೇಡಿ. ಎಚ್ಚರಿಕೆಯಿಂದ ಇರಿ. ನಿಮ್ಮ ಮತಗಳನ್ನು ಕಾಪಾಡಿಕೊಳ್ಳಿ ಎಂದರು."ಪಕ್ಷಬೇಧ ಮರೆತು ಎಲ್ಲರನ್ನೂ ಒಟ್ಟಿಗೇ ಕರೆದುಕೊಂಡು ಹೋಗಿ. 2028 ರ ವಿಧಾನಸಭೆ ಚುನಾವಣೆ ಗೆಲ್ಲುವುದು ನಿಮ್ಮ ಗುರಿಯಾಗಿರಲಿ” ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ತಿಳಿಸಿದ್ದಾರೆ.

ಮಾಜಿ ಶಾಸಕ ಮಂಜುನಾಥ್ ಹಾಗೂ ಮೈಸೂರು ಮುಖಂಡ, ವಕ್ತಾರ ಲಕ್ಷ್ಮಣ್ ಅವರ ನೇತೃತ್ವದಲ್ಲಿ ಹುಣಸೂರು ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಕುಮಾರಪಾರ್ಕ್ ಸರಕಾರಿ ಅತಿಥಿ ಗೃಹದಲ್ಲಿ ತಮ್ಮನ್ನು ಅಭಿನಂದಿಸಿದ ಸಂದರ್ಭದಲ್ಲಿ ಶಿವಕುಮಾರ್ ಅವರು ಮಾತನಾಡಿದರು.

ಹಿಂದೆ ಆಗಿದ್ದು, ದ್ವೇಷ, ಅಸೂಯೆ, ಪ್ರತೀಕಾರ ಎಂಬುದನ್ನು ಮರೆಯಿರಿ. ಕೆಲವೊಮ್ಮೆ ತಪ್ಪು ಮಾಹಿತಿ, ಅಭಿಪ್ರಾಯಗಳಿಂದ ಯಡವಟ್ಟು ಆಗಿರಬಹುದು. ಆದರೆ ಅದನ್ನೇ ಮನಸ್ಸಿನಲ್ಲಿ ಇಟ್ಟುಕೊಂಡು ಭವಿಷ್ಯದ ಗುರಿ ಮರೆಯಬೇಡಿ ಎಂದರು. ಈಗ ಯಾವುದೇ ಕಾರಣಕ್ಕೂ ಮೈ ಮರೆಯಬೇಡಿ. ಎಸ್ ಐ ಆರ್ ಸಂಚಿಗೆ ನಿಮ್ಮ ಮತ ಬಲಿ ಆಗಲು ಬಿಡಬೇಡಿ. ಎಚ್ಚರಿಕೆಯಿಂದ ಇರಿ. ನಿಮ್ಮ ಮತಗಳನ್ನು ಕಾಪಾಡಿಕೊಳ್ಳಿ ಎಂದರು."ಪಕ್ಷಬೇಧ ಮರೆತು ಎಲ್ಲರನ್ನೂ ಒಟ್ಟಿಗೇ ಕರೆದುಕೊಂಡು ಹೋಗಿ. 2028 ರ ವಿಧಾನಸಭೆ ಚುನಾವಣೆ ಗೆಲ್ಲುವುದು ನಿಮ್ಮ ಗುರಿಯಾಗಿರಲಿ” ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ತಿಳಿಸಿದ್ದಾರೆ.

ಮಾಜಿ ಶಾಸಕ ಮಂಜುನಾಥ್ ಹಾಗೂ ಮೈಸೂರು ಮುಖಂಡ, ವಕ್ತಾರ ಲಕ್ಷ್ಮಣ್ ಅವರ ನೇತೃತ್ವದಲ್ಲಿ ಹುಣಸೂರು ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಕುಮಾರಪಾರ್ಕ್ ಸರಕಾರಿ ಅತಿಥಿ ಗೃಹದಲ್ಲಿ ತಮ್ಮನ್ನು ಅಭಿನಂದಿಸಿದ ಸಂದರ್ಭದಲ್ಲಿ ಶಿವಕುಮಾರ್ ಅವರು ಮಾತನಾಡಿದರು.

ಹಿಂದೆ ಆಗಿದ್ದು, ದ್ವೇಷ, ಅಸೂಯೆ, ಪ್ರತೀಕಾರ ಎಂಬುದನ್ನು ಇಟ್ಟುಕೊಂಡು ಭವಿಷ್ಯದ ಗುರಿ ಮರೆಯಬೇಡಿ ಎಂದರು. ಇವತ್ತು ಬಂದಿರುವ ಸಿಎಂ ಹುದ್ದೆ ನನ್ನದಲ್ಲ. ನಿಮ್ಮದು, ರಾಜ್ಯದ ಜನರದು. ನೀವು ಇಲ್ಲ ಅಂದ್ರೆ ನಾನು ಇಲ್ಲ. ನನಗೆ ಬಂದಿರುವ ಈ ಹುದ್ದೆ ಹಿಂದೆ ನಿಮ್ಮ ಪರಿಶ್ರಮ, ಪ್ರೀತಿ, ವಿಶ್ವಾಸ, ಹೋರಾಟ ಕೆಲಸ ಮಾಡಿದೆ. ನಿಮ್ಮ ಸಹಕಾರವನ್ನು ಎಂದಿಗೂ ಮರೆಯುವುದಿಲ್ಲ ಎಂದರು.

ಈಗ ಯಾವುದೇ ಕಾರಣಕ್ಕೂ ಮೈ ಮರೆಯಬೇಡಿ. ಎಸ್ ಐ ಆರ್ ಸಂಚಿಗೆ ನಿಮ್ಮ ಮತ ಬಲಿ ಆಗಲು ಬಿಡಬೇಡಿ. ಎಚ್ಚರಿಕೆಯಿಂದ ಇರಿ. ನಿಮ್ಮ ಮತಗಳನ್ನು ಕಾಪಾಡಿಕೊಳ್ಳಿ ಎಂದರು.

## ಪುರುಷೋತ್ತಮ ಯೋಗ: ಪಾರಾಯಣಕ್ಕೆ ಆಹ್ವಾನ

ಉಡುಪಿ

ಶ್ರೀ ಪುತ್ತಿಗೆ ಮಠಾಧೀಶರಾದ ವಿಶ್ವಮಾನ್ಯ ಯತಿಕುಲ ಚಕ್ರವರ್ತಿ ಶ್ರೀ ಶ್ರೀ ಸುಗುಣೇಂದ್ರತೀರ್ಥ ಶ್ರೀಪಾದರು ಮತ್ತು ಅವರ ಶಿಷ್ಯ ಶ್ರೀ ಶ್ರೀ ಸುಶ್ರೀಂದ್ರ ತೀರ್ಥ ಶ್ರೀಪಾದರ ಶುಭಾಶೀರ್ವಾದಗಳೊಂದಿಗೆ ಅಧಿಕ ಮಾಸದ ಅಧಿಕ ಫಲ ಸಂಪಾದನೆ ಮತ್ತು ಲೋಕಕಲ್ಯಾಣಕ್ಕಾಗಿ ಶ್ರೀಮದ್ಭಗವದ್ಗೀತೆಯ 15 ನೇ ಅಧ್ಯಾಯವನ್ನು 33 ಬಾರಿ ಸಾಮೂಹಿಕವಾಗಿ ಪಾರಾಯಣ ಮಾಡಲು ಸಂಕಲ್ಪಿಸಲಾಗಿದೆ.

ಜೂನ್ 12 , ಶುಕ್ರವಾರ ಅಪರಾಹ್ನ 2 ರಿಂದ ಶ್ರೀಕೃಷ್ಣ ಮಠಕ್ಕೆ ಸನಿಹದಲ್ಲಿರುವ ಗೀತಾ ಮಂದಿರದ ಶ್ರೀ ಪುತ್ತಿಗೆ ನೃಸಿಂಹ ಅಡಿಟೋರಿಯಂನಲ್ಲಿ ಈ ಪುಣ್ಯಪ್ರದ ಕಾರ್ಯಕ್ರಮ ನಡೆಯಲಿದೆ. ಸಾಮೂಹಿಕ ಪಾರಾಯಣ – ಶಾಸ್ತ್ರೀಯ ನೃತ್ಯಾಭಿವ್ಯಕ್ತಿ ಮತ್ತು ಕಿರು ನಿರೂಪಣಾ ವ್ಯಾಖ್ಯಾನಗಳೊಂದಿಗೆ ಹಿತಮಿತ ಹಿಮ್ಮೇಳವಾದ್ಯಗಳನ್ನು ಬಳಸಿಕೊಂಡು ವೈಶಿಷ್ಟ್ಯಪೂರ್ಣವಾಗಿ ಸಂಯೋಜಿಸಲಾಗಿದೆ. ಆಸಕ್ತ ಭಗವದ್ಭಕ್ತರು ಮುಕ್ತವಾಗಿ ಭಾಗವಹಿಸಿ ಶ್ರೀಕೃಷ್ಣಾನುಗ್ರಹಕ್ಕೆ ಪಾತ್ರರಾಗಬಹುದು .

ವಿಶ್ವ ಗೀತಾ ಪರ್ಯಾಯದ ಅವಧಿಯಲ್ಲಿ ಶ್ರೀಪುತ್ತಿಗೆ ಶ್ರೀಗಳ ಸಂಕಲ್ಪ ಮತ್ತು ಶುಕ್ರವಾರ ಅಪರಾಹ್ನ 2 ರಿಂದ ಶ್ರೀಕೃಷ್ಣ ಮಠಕ್ಕೆ ನೃಸಿಂಹ ಅಡಿಟೋರಿಯಂನಲ್ಲಿ ಈ ಪುಣ್ಯಪ್ರದ ಕಾರ್ಯಕ್ರಮ ನಡೆಯಲಿದೆ. ಸಾಮೂಹಿಕ ಪಾರಾಯಣ – ಶಾಸ್ತ್ರೀಯ ನೃತ್ಯಾಭಿವ್ಯಕ್ತಿ ಮತ್ತು ಕಿರು ನಿರೂಪಣಾ ವ್ಯಾಖ್ಯಾನಗಳೊಂದಿಗೆ ಹಿತಮಿತ ಹಿಮ್ಮೇಳವಾದ್ಯಗಳನ್ನು ಬಳಸಿಕೊಂಡು ವೈಶಿಷ್ಟ್ಯಪೂರ್ಣವಾಗಿ ಸಂಯೋಜಿಸಲಾಗಿದೆ. ಆಸಕ್ತ ಭಗವದ್ಭಕ್ತರು ಮುಕ್ತವಾಗಿ ಭಾಗವಹಿಸಿ ಶ್ರೀಕೃಷ್ಣಾನುಗ್ರಹಕ್ಕೆ ಪಾತ್ರರಾಗಬಹುದು .

ವಿಶ್ವ ಗೀತಾ ಪರ್ಯಾಯದ ಅವಧಿಯಲ್ಲಿ ಶ್ರೀಪುತ್ತಿಗೆ ಶ್ರೀಗಳ ಸಂಕಲ್ಪ ಮತ್ತು ದಿವ್ಯೋಪಸ್ಥಿತಿಯೊಂದಿಗೆ ನಡೆದ ಅಪೂರ್ವ ಲಕ್ಷ ಕಂಠ ಗೀತಾಪಾರಾಯಣದಲ್ಲಿ ರಾಷ್ಟ್ರದ ಪ್ರಧಾನಿ ನರೇಂದ್ರ ಮೋದೀಜಿ ಭಾಗವಹಿಸಿ ಇವೇ 20 ಶ್ಲೋಕಗಳ ಪಠಣ ಮಾಡಿದ್ದನ್ನು ಇಲ್ಲಿ ಸ್ಮರಿಸಬಹುದು..

## ಮಾಜಿ ಪ್ರಧಾನಿಗೆ ರಾಜ್ಯಸಭೆ ಸ್ಥಾನ ನಿರಾಕರಣೆ; ಬಿಜೆಪಿ ವಿರುದ್ಧ ಸುರ್ಜೇವಾಲ ಆಕ್ರೋಶ

ಬೆಂಗಳೂರು

ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರಿಗೆ ರಾಜ್ಯಸಭೆ ನಾಮನಿರ್ದೇಶನ ನೀಡದ ಬಿಜೆಪಿ ತೀರ್ಮಾನದ ವಿರುದ್ಧ ಅಖಿಲ ಭಾರತ ಕಾಂಗ್ರೆಸ್ ಸಮಿತಿಯ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ತೀವ್ರ ವಾಗ್ದಾಳಿ ನಡೆಸಿದ್ದಾರೆ. ಬಿಜೆಪಿ ಪದೇಪದೇ ಜನತಾ ದಳಕ್ಕೆ ಅವಮಾನ ಮಾಡುತ್ತಿದೆ ಎಂದು ಆರೋಪಿಸಿದ ಅವರು, “ಜನತಾ ದಳಕ್ಕೆ ಸ್ವಾಭಿಮಾನ ಇದ್ದರೆ ಮೊದಲು ಬಿಜೆಪಿ ಮೈತ್ರಿಯಿಂದ ಹೊರಬರಲಿ” ಎಂದು ಸವಾಲು ಹಾಕಿದರು.



ಬಿಜೆಪಿ ತನ್ನ ರಾಜ್ಯ ಉಪಾಧ್ಯಕ್ಷ ಹಾಗೂ ಜಿಲ್ಲಾ ಕಟ್ಟಡ ನಿರ್ಮಾಣ ವಿಭಾಗದ ಉಸ್ತುವಾರಿ ಎಂ. ನಾಗರಾಜ್ ಅವರಿಗೆ ಆದ್ಯತೆ ನೀಡಿ, ಮಾಜಿ ಪ್ರಧಾನಿ ದೇವೇಗೌಡರನ್ನು ಕಡೆಗಣಿಸಿದೆ. ಇದು ಕೇವಲ ವ್ಯಕ್ತಿಗಷ್ಟೇ ಅಲ್ಲ, ಕರ್ನಾಟಕದ ಗೌರವಕ್ಕೂ ಧಕ್ಕೆಯಾಗಿದೆ ಎಂದು ಸುರ್ಜೇವಾಲ ಟೀಕಿಸಿದರು.

“2019ರ ಲೋಕಸಭೆ ಚುನಾವಣೆಯಲ್ಲಿ ದೇವೇಗೌಡರನ್ನು ಬಿಜೆಪಿ ಸೋಲಿಸಿತು. ಬಳಿಕ ರಾಜಕೀಯ ಭಿನ್ನಾಭಿಪ್ರಾಯಗಳಿದ್ದರೂ ಕಾಂಗ್ರೆಸ್ ಹಾಗೂ ಸೋನಿಯಾ ಗಾಂಧಿ ಅವರು ಮಾಜಿ ಪ್ರಧಾನಿಯ ಸ್ಥಾನಕ್ಕೆ ಗೌರವ ನೀಡಿ ರಾಜ್ಯಸಭೆಗೆ ಬೆಂಬಲ ನೀಡಿದ್ದರು. ಆದರೆ ಇಂದು ಬಿಜೆಪಿ ಅವರಿಗೆ ರಾಜ್ಯಸಭೆ ಅವಕಾಶ ನಿರಾಕರಿಸಿರುವುದು ಅದರ ನಿಜ ಮುಖವನ್ನು ತೋರಿಸುತ್ತದೆ” ಎಂದು ಹೇಳಿದರು.

ಇನ್ನೂ, “ದೇವೇಗೌಡರು ರೈತರ ಧ್ವನಿ, ಮಣ್ಣಿನ ಮಗ. ದೇಶದಲ್ಲಿ ಬದುಕಿರುವ ಏಕೈಕ ಮಾಜಿ ಪ್ರಧಾನಿ. ಅಂತಹ ನಾಯಕರನ್ನು ರಾಜ್ಯಸಭೆಗೆ ಕಳುಹಿಸಲು ಬಿಜೆಪಿ ಸಿದ್ಧವಾಗಿಲ್ಲ ಅಂದರೆ, ಅದು ಕರ್ನಾಟಕಕ್ಕೆ ಮಾಡಿದ ಅವಮಾನ” ಎಂದು ಕಿಡಿಕಾರಿದರು. ಕೇಂದ್ರ ಸಚಿವರಾಗಿರುವ ಎಚ್.ಡಿ. ಕುಮಾರಸ್ವಾಮಿ ಅವರು ತಮ್ಮ ತಂದೆ ದೇವೇಗೌಡರಿಗೆ ರಾಜ್ಯಸಭೆ ಸ್ಥಾನ ಒದಗಿಸಿಕೊಳ್ಳಲು ವಿಫಲರಾಗಿರುವುದನ್ನು ಪ್ರಶ್ನಿಸಿದ ಸುರ್ಜೇವಾಲ, “ಅಧಿಕಾರಕ್ಕಾಗಿ ಎಲ್ಲವನ್ನೂ ತ್ಯಾಗ ಮಾಡುವ ರಾಜಕೀಯಕ್ಕೆ ಜನತಾ ದಳ ತಲೆಬಾಗಿದೆಯೇ?” ಎಂದು ಪ್ರಶ್ನಿಸಿದರು.

“ಜನತಾ ದಳ ಇನ್ನಷ್ಟು ದುರ್ಬಲವಾಗಬಾರದು. ಬಿಜೆಪಿ ಮೈತ್ರಿಯಿಂದ ಹೊರಬಂದು ತನ್ನ ಸ್ವಾಭಿಮಾನ ಉಳಿಸಿಕೊಳ್ಳಬೇಕು” ಎಂದು ಅವರು ಆಗ್ರಹಿಸಿದರು.



ಕರ್ನಾಟಕ ವಿಧಾನಸಭೆಯಿಂದ ವಿಧಾನ ಪರಿಷತ್‌ಗೆ ನಡೆಯುವ ಚುನಾವಣೆಗೆ ಕೊನೆಯ ದಿನವಾದ ಸೋಮವಾರ ಭಾರತೀಯ ಜನತಾ ಪಕ್ಷದ ಅಭ್ಯರ್ಥಿಯಾಗಿ ರಘು.ಆರ್ ಮತ್ತು ಅಂಗರಾಜ್ ಪಾಟೀಲ್, ಇಂಡಿಯನ್ ನ್ಯಾಷನಲ್ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ವಿನಯ್ ಕಾರ್ತಿಕ್ ಪ್ರಕಾಶ್ ಹಾಗೂ ಜಾತ್ಯತೀತ ಜನತಾದಳ ಪಕ್ಷದ ಅಭ್ಯರ್ಥಿಯಾಗಿ ಗೋವಿಂದರಾಜು ಅವರುಗಳು ವಿಧಾನಸೌಧದಲ್ಲಿ ವಿಧಾನ ಸಭೆಯ ಕಾರ್ಯದರ್ಶಿ ಹಾಗೂ ಚುನಾವಣಾಧಿಕಾರಿ ಎಂ.ಕೆ.ವಿಶಾಲಾಕ್ಷಿ ಅವರಿಗೆ ನಾಮಪತ್ರ ಸಲ್ಲಿಸಿದರು.

# ‘ಶಕ್ತಿ’ ಮಹಿಳೆಯರಿಗೆ ಸ್ಮಾರ್ಟ್ ಕಾರ್ಡ್ ಶಕ್ತಿ

ಬೆಂಗಳೂರು

ರಾಜ್ಯದ ನೂತನ ಸಾರಿಗೆ ಸಚಿವರಾಗಿ ಬೈರತಿ ಸುರೇಶ್ ಅವರು ಸೋಮವಾರ ವಿಧಾನಸೌಧದಲ್ಲಿ ಅಧಿಕಾರ ಸ್ವೀಕರಿಸಿ, ತಕ್ಷಣವೇ ಸಾರಿಗೆ ಇಲಾಖೆಯ ವಿವಿಧ ನಿಗಮಗಳ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಹತ್ವದ ಘೋಷಣೆಗಳನ್ನು ಮಾಡಿದರು.

ಅಧಿಕಾರ ಸ್ವೀಕಾರದ ಬಳಿಕ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಕೇಂದ್ರ ಕಚೇರಿಗೆ ಭೇಟಿ ನೀಡಿದ ಸಚಿವರು, ಕೆಎಸ್ಸಾರ್ಟಿಸಿ, ಬಿಎಂಟಿಸಿ, ಕೆಕೆಆರ್‌ಟಿಸಿ ಹಾಗೂ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ನಿಗಮಗಳ ಮುಖ್ಯಸ್ಥರು ಮತ್ತು ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಇಲಾಖೆಯ ಕಾರ್ಯವೈಖರಿ ಕುರಿತು ಮಾಹಿತಿ ಪಡೆದರು.

ಈ ವೇಳೆ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಜನರ ಬದುಕಿಗೆ ನೆರವಾಗಿದ್ದು, ಅದರಲ್ಲೂ ಶಕ್ತಿ ಯೋಜನೆಯನ್ನು ರಾಜ್ಯದ ಕೋಟ್ಯಂತರ ಮಹಿಳೆಯರು ಸದುಪಯೋಗಪಡಿಸಿಕೊಳ್ಳುತ್ತಿದ್ದಾರೆ ಎಂದು ಹೇಳಿದರು. ಶಕ್ತಿ ಯೋಜನೆ ಜಾರಿಯಾದ ನಂತರ ರಾಜ್ಯದಲ್ಲಿ ಬಸ್ ಪ್ರಯಾಣಿಕರ ಸಂಖ್ಯೆಯಲ್ಲಿ ಸುಮಾರು 40 ಶೇಕಡಾ ಏರಿಕೆಯಾಗಿದೆ ಎಂದು ತಿಳಿಸಿದರು.

ಮಹಿಳೆಯರಿಗೆ ಉಚಿತ ಸ್ಮಾರ್ಟ್ ಕಾರ್ಡ್

ಶಕ್ತಿ ಯೋಜನೆಯನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಜಾರಿಗೆ ತರಲು ಮಹಿಳೆಯರಿಗೆ ಉಚಿತ ಪ್ರಯಾಣಕ್ಕಾಗಿ ವಿಶೇಷ ಸ್ಮಾರ್ಟ್ ಕಾರ್ಡ್ ವಿತರಣೆ ಮಾಡಲು ಸರ್ಕಾರ ನಿರ್ಧರಿಸಿದೆ ಎಂದು ಸಚಿವರು ಘೋಷಿಸಿದರು. ರಾಜ್ಯದ ಮೂರು ಕೋಟಿಗೂ ಅಧಿಕ ಮಹಿಳೆಯರಿಗೆ ಈ ಸ್ಮಾರ್ಟ್ ಕಾರ್ಡ್ ವಿತರಿಸುವ ಗುರಿ ಹೊಂದಲಾಗಿದೆ ಎಂದರು.

ಮಹಿಳೆಯರಿಗೆ ಉಚಿತವಾಗಿ ಕಾರ್ಡ್ ನೀಡಲಾಗುತ್ತದೆ. ಪುರುಷರು ಮೆಟ್ರೋ ಕಾರ್ಡ್ ಮಾದರಿಯಲ್ಲಿ ಹಣ ಪಾವತಿಸಿ ಸ್ಮಾರ್ಟ್ ಕಾರ್ಡ್ ಪಡೆದುಕೊಳ್ಳಬಹುದಾಗಿದೆ. ಹಣ ಖಾಲಿಯಾದ ಬಳಿಕ ಕಾರ್ಡ್ ಅನ್ನು ಮರುಭರ್ತಿ ಮಾಡಿಕೊಳ್ಳುವ ವ್ಯವಸ್ಥೆ ಇರಲಿದೆ ಎಂದು ವಿವರಿಸಿದರು.

ಸುಮಾರು ಮೂರು ಕೋಟಿ ಸ್ಮಾರ್ಟ್ ಕಾರ್ಡ್ ತಯಾರಿಕೆ



ಅಗತ್ಯವಿರುವುದರಿಂದ ಜಾಗತಿಕ ಟೆಂಡರ್ ಕರೆಯಲಾಗುವುದು. ಪೈಲಟ್ ಯೋಜನೆಯಡಿ ಶೀಘ್ರದಲ್ಲೇ ಕಾರ್ಡ್ ವಿತರಣೆ ಪ್ರಕ್ರಿಯೆ ಆರಂಭಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಹೇಳಿದರು.

1000 ಹೊಸ ಬಸ್ ಖರೀದಿ

ರಾಜ್ಯ ಸರ್ಕಾರದ ಅನುದಾನದಲ್ಲಿ 1000 ಹೊಸ ಬಸ್‌ಗಳನ್ನು ಖರೀದಿಸಲಾಗುತ್ತದೆ. ಜೊತೆಗೆ ಕೇಂದ್ರ ಸರ್ಕಾರದ ನೆರವಿನಿಂದ 4000 ಎಲೆಕ್ಟ್ರಿಕ್ ಬಸ್‌ಗಳನ್ನು ಖರೀದಿಸುವ ಯೋಜನೆಯೂ ಇದೆ. ಹಂತ ಹಂತವಾಗಿ ಈ ಬಸ್‌ಗಳನ್ನು ನಾಲ್ಕೂ ಸಾರಿಗೆ ನಿಗಮಗಳಿಗೆ ಹಂಚಿಕೆ ಮಾಡಲಾಗುತ್ತದೆ ಎಂದು ಸಚಿವರು ತಿಳಿಸಿದರು.

ಮಹಿಳಾ ಸುರಕ್ಷತೆಗೆ ಒತ್ತು

ಮಹಿಳೆಯರು ಮತ್ತು ಹೆಣ್ಣುಮಕ್ಕಳ ಸುರಕ್ಷತೆಗೆ ಸರ್ಕಾರ ಹೆಚ್ಚು ಆದ್ಯತೆ ನೀಡಲಿದೆ ಎಂದು ಸಚಿವರು ಹೇಳಿದರು. ಖಾಸಗಿ ವಾಣಿಜ್ಯ ವಾಹನಗಳು, ಟ್ಯಾಕ್ಸಿಗಳು ಸೇರಿದಂತೆ ಇತರ ವಾಹನಗಳಿಗೆ ವೆಹಿಕಲ್ ಲೊಕೇಶನ್ ಟ್ರ್ಯಾಕಿಂಗ್ ಸಿಸ್ಟಂ ಅಳವಡಿಕೆಯನ್ನು ವೇಗಗೊಳಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

ಸಾರಿಗೆ ಸೇವೆಗಳನ್ನು ಮತ್ತಷ್ಟು ಜನಸ್ನೇಹಿಯಾಗಿ ರೂಪಿಸುವ ದಿಸೆಯಲ್ಲಿ ಡಿಜಿಟಲ್ ತಂತ್ರಜ್ಞಾನ ಬಳಕೆಗೆ ಹೆಚ್ಚಿನ ಒತ್ತು ನೀಡಲಾಗುವುದು ಎಂದು ಸಚಿವ ಬೈರತಿ ಸುರೇಶ್ ತಿಳಿಸಿದರು. ಬಸ್‌ಗಳ ಸಮಯಪಾಲನೆ, ಪ್ರಯಾಣಿಕರ ಸೌಲಭ್ಯ, ಟಿಕೆಟ್ ವ್ಯವಸ್ಥೆ ಹಾಗೂ ದೂರು ನಿವಾರಣಾ ವ್ಯವಸ್ಥೆಯನ್ನು ಸುಧಾರಿಸಲು ಆಧುನಿಕ ತಂತ್ರಜ್ಞಾನ ಅಳವಡಿಸುವ ಬಗ್ಗೆ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಲಾಗಿದೆ ಎಂದು ಹೇಳಿದರು.

ಗ್ರಾಮೀಣ ಹಾಗೂ ದೂರದ ಪ್ರದೇಶಗಳಿಗೂ ಸಮರ್ಪಕ ಸಾರಿಗೆ ಸಂಪರ್ಕ ಕಲ್ಪಿಸುವ ಮೂಲಕ ಸಾರ್ವಜನಿಕರಿಗೆ ಸುಲಭ ಮತ್ತು ಸುರಕ್ಷಿತ ಪ್ರಯಾಣ ವ್ಯವಸ್ಥೆ ಒದಗಿಸುವುದು ಸರ್ಕಾರದ ಪ್ರಮುಖ ಗುರಿಯಾಗಿದೆ ಎಂದು ಅವರು ತಿಳಿಸಿದರು.

ಈವರೆಗೆ ಒಂದು ಲಕ್ಷಕ್ಕೂ ಅಧಿಕ ವಾಹನಗಳಿಗೆ ಈ ವ್ಯವಸ್ಥೆ ಅಳವಡಿಸಲಾಗಿದ್ದು, ಉಳಿದ ನಾಲ್ಕುರಿಂದ ಐದು ಲಕ್ಷ ವಾಹನಗಳಿಗೆ ಮುಂದಿನ ಮೂರು ರಿಂದ ನಾಲ್ಕು ತಿಂಗಳಲ್ಲಿ ವ್ಯವಸ್ಥೆ ಅಳವಡಿಸಲು ಸೂಚನೆ ನೀಡಲಾಗಿದೆ ಎಂದು ಹೇಳಿದರು. ಸಭೆಯಲ್ಲಿ ಸಾರಿಗೆ ಇಲಾಖೆ ಕಾರ್ಯದರ್ಶಿ ದೀಪಾ ಚೋಳನ್, ಆಯುಕ್ತ ಸೆಲ್ವಮಣಿ ಹಾಗೂ ನಾಲ್ಕೂ ಸಾರಿಗೆ ನಿಗಮಗಳ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.



ಕ್ರೆಡಾಯ್ ಕರ್ನಾಟಕದ ಪದಾಧಿಕಾರಿಗಳು ಸಿಎಂ ಡಿ ಕೆ ಶಿವಕುಮಾರ್ ಅವರನ್ನು ವಿಧಾಸೌಧದಲ್ಲಿ ನಡೆದ ಸಭೆಯಲ್ಲಿ ಅಭಿನಂದಿಸಿದರು. ಬೆಂಗಳೂರು ಕ್ರೆಡಾಯ್ ಅಧ್ಯಕ್ಷ ಜೈದ್ ನೋಮ್ಯಾನ್, ಕಾರ್ಯದರ್ಶಿ ನಿಶ್ಚಯ್ ಜಯಶಂಕರ್, ಮೆಂಟರ್ ಇರ್ಫಾನ್ ರಜಾಕ್, ಸಲಹೆಗಾರ ಶಂಕರ್ ಶಾಸ್ತ್ರಿ ಮತ್ತಿತರರು ಉಪಸ್ಥಿತರಿದ್ದರು.

## ಕೀರ್ತಿ ಚಕ್ರ, ವೀರ ಚಕ್ರ ಪುರಸ್ಕಾರ ಪ್ರದಾನ

ನವದೆಹಲಿ

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ದೇಶದ ರಕ್ಷಣಾ ವಲಯದಲ್ಲಿ ಅಪ್ರತಿಮ ಸಾಹಸ ಮತ್ತು ಶೌರ್ಯ ಪ್ರದರ್ಶಿಸಿದ ವೀರ ಯೋಧರಿಗೆ ಕೀರ್ತಿ ಚಕ್ರ, ವೀರ ಚಕ್ರ ಮತ್ತು ಶೌರ್ಯ ಚಕ್ರ ಪ್ರಶಸ್ತಿಗಳನ್ನು ಪ್ರದಾನ ಮಾಡಿದ್ದಾರೆ. ನವದೆಹಲಿಯ ರಾಷ್ಟ್ರಪತಿ ಭವನದಲ್ಲಿ ನಡೆದ ಭವ್ಯ ಸಮಾರಂಭದಲ್ಲಿ ಈ ಪ್ರಶಸ್ತಿಗಳನ್ನು ವಿತರಿಸಲಾಯಿತು.

ಸಶಸ್ತ್ರ ಪಡೆಗಳ ಸರ್ವೋಚ್ಚ ಕಮಾಂಡರ್ ಆಗಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು ಈ ಪ್ರಶಸ್ತಿಗಳನ್ನು ನೀಡಿದರು. ಪ್ರಧಾನಿ ನರೇಂದ್ರ ಮೋದಿ, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹಾಗೂ ಮೂರೂ ಸಶಸ್ತ್ರ ಪಡೆಗಳ ಮುಖ್ಯಸ್ಥರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ‘ಆಪರೇಷನ್ ಸಿಂಧೂರ್’ ಕಾರ್ಯಾಚರಣೆಯಲ್ಲಿ ತೋರಿದ ಅಪ್ರತಿಮ ಸಾಹಸ ಮತ್ತು ಧೀರತನಕ್ಕಾಗಿ ಭಾರತೀಯ ವಾಯುಪಡೆಯ ವೀರ ಅಧಿಕಾರಿಗಳಿಗೆ ವೀರ ಚಕ್ರ ಪ್ರಶಸ್ತಿ ನೀಡಿ ಗೌರವಿಸಿದ್ದಾರೆ. ರಕ್ಷಣಾ ಪಡೆಯ ಯೋಧರಿಗೆ ಕೀರ್ತಿ ಚಕ್ರ, ಶೌರ್ಯ ಚಕ್ರ ಪ್ರಶಸ್ತಿಯನ್ನೂ ಪ್ರದಾನ ಮಾಡಲಾಗಿದೆ. ಸೋಮವಾರ ನವದೆಹಲಿಯ ರಾಷ್ಟ್ರಪತಿ ಭವನದಲ್ಲಿ ನಡೆದ 2026ರ ರಕ್ಷಣಾ ಹೂಡಿಕೆ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು 7 ಕೀರ್ತಿ ಚಕ್ರ, 15 ವೀರ ಚಕ್ರ ಮತ್ತು 29 ಶೌರ್ಯ ಚಕ್ರ ಪ್ರಶಸ್ತಿಗಳನ್ನು ಪ್ರದಾನ ಮಾಡಿದರು.

‘ವೀರ ಚಕ್ರ’ ಯುದ್ಧದ ಸಮಯದಲ್ಲಿ ಶತ್ರುಗಳ ಎದುರು ಪ್ರದರ್ಶಿಸುವ ಅಪ್ರತಿಮ ಶೌರ್ಯಕ್ಕಾಗಿ ನೀಡಲಾಗುವ ದೇಶದ ಮೂರನೇ ಅತ್ಯುನ್ನತ ಯುದ್ಧಕಾಲದ ಶೌರ್ಯ ಪ್ರಶಸ್ತಿಯಾಗಿದೆ.

ಕಾರ್ಯಾಚರಣೆಯ ಸಮಯದಲ್ಲಿ ಪ್ರಾಣದ ಹಂಗು ತೊರೆದು ಶತ್ರುಗಳ ಯುದ್ಧ ವಿಮಾನಗಳನ್ನು ಅಥವಾ ನೆಲೆಗಳನ್ನು ಅತ್ಯಂತ ಚಾಣಾಕ್ಷತನದಿಂದ ಹಿಮ್ಮೆಟ್ಟಿಸಿದ ವಾಯುಪಡೆಯ ಫೈಟರ್ ಪೈಲಟ್‌ಗಳು ಮತ್ತು ಕಮಾಂಡರ್‌ಗಳಿಗೆ ರಾಷ್ಟ್ರಪತಿಗಳು ಈ ಪ್ರಶಸ್ತಿಯನ್ನು ಪ್ರದಾನ ಮಾಡಿದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy